ಸಂಪುಟ: ೦೭/ ಸಂಚಿಕೆ: ೧೮೧/ ರವಿವಾರ ದಿನಾಂಕ : ೦೭-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 181/ SUNDAY Date : 07-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಅತ್ಯಂತ ಕನಿಷ್ಠ ಸಮುದಾಯಗಳಿಗೆ ನ್ಯಾಯ ಕೊಡಿ: ಬೊಮ್ಮಾಯಿ

**ಬೆಂಗಳೂರು:** "ಒಳ ಮೀಸಲಾತಿ ವಿಚಾರದಲ್ಲಿ ರಾಜಕೀಯ ಪಂಚಾಯಿತಿ ಮಾಡಿ, 6–6–5 ಹಂಚಿಕೆ ಮಾಡಿ ಕೈಬಿಟ್ಟಿದ್ದಾರೆ" ಎಂದು ಮಾಜಿ ಮುಖ್ಯಮಂತ್ರಿ ಮತ್ತು ಸಂಸದ ಬಸವರಾಜ ಬೊಮ್ಮಾಯಿ ಅವರು ಟೀಕಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜಕೀಯ ಇಚ್ಛಾಶಕ್ತಿ ಪ್ರದರ್ಶಿಸಿ, ಅತ್ಯಂತ ಕನಿಷ್ಠ ಸಮುದಾಯಗಳಿಗೆ ನ್ಯಾಯ ಕೊಡಬೇಕು. ಗೊಂದಲವನ್ನು ನಿವಾರಿಸಬೇಕು. ಇಲ್ಲವಾದರೆ ನೀವು ಒಳಜಗಳದ ಅಪಖ್ಯಾತಿಗೆ ಈಡಾಗುತ್ತೀರಿ. ನಾವು ಮಾಡಿದ್ದನ್ನೇ ಇವತ್ತು ಒಪ್ಪಿಕೊಂಡಿದ್ದೀರಿ; ಅವತ್ತಿನ ಮಾತನ್ನು ಹಿಂಪಡೆದು ನೀವು ಇವತ್ತು ಈ ಸಮುದಾಯಗಳ ಕ್ಷಮೆ ಕೇಳುವಿರಾ ಎಂದು ಪ್ರಶ್ನೆಯನ್ನೂ ಮುಂದಿಟ್ಟರು. ಶೇ 17ರ ಬದಲು ಇನ್ನೊಂದು ಶೇಕಡಾ ಹೆಚ್ಚಿಸಿ ಎಲ್ಲರಿಗೂ ನ್ಯಾಯ ಕೊಡುವ ಪ್ರಯತ್ನ ಮಾಡುವಿರಾ?" ಎಂದು ಪ್ರಶ್ನಿಸಿದರು.

"ರಾಜಕೀಯ ನಿರ್ಣಯ ಮಾಡುವುದಾದರೆ ಇವೆಲ್ಲ ಆಯೋಗಗಳನ್ನು ಯಾಕೆ ಮಾಡಬೇಕಿತ್ತು ಎಂದು ಪ್ರಶ್ನಿಸಿದರು. ನ್ಯಾ.ನಾಗಮೋಹನದಾಸ್ ಸಮಿತಿ ವರದಿಯನ್ನು 2–3 ವಾರ ಇಟ್ಟುಕೊಂಡು ಸಂಪುಟದಲ್ಲಿ ತೀರ್ಮಾನ ಮಾಡಿದ್ದಾರೆ. ಅವರ ಶಿಫಾರಸು ಗಾಳಿಗೆ ತೂರಿದ್ದಾರೆ. ಸದಾಶಿವ ಆಯೋಗವು ಒಳ ಮೀಸಲಾತಿ ಬಗ್ಗೆ ವರದಿ ಗಾಳಿಗೆ ತೂರಿದರು. ಮಾಧುಸ್ವಾಮಿಯವರ ವರದಿಯನ್ನೂ ಕಡೆಗಣಿಸಿದರು" ಎಂದು ದೂರಿದರು.

"ಇದು ಸಂವಿಧಾನ ವಿರೋಧಿ, 3 ಆಯೋಗಗಳ ವರದಿಯನ್ನೂ ಪರಿಗಣಿಸಿಲ್ಲ; ಸುಪ್ರೀಂ ಕೋರ್ಟಿನ ನಿರ್ಧಾರವನ್ನೂ ತಿರಸ್ಕಾರ ಮಾಡಿದ್ದೀರಿ. ಕೇವಲ ರಾಜಕೀಯ ಲಾಭಕ್ಕಾಗಿ, ಮತಬ್ಯಾಂಕಿನ ಸುರಕ್ಷತೆಗಾಗಿ ಈ ಕೆಲಸ ಮಾಡಿದ್ದೀರಿ ಎಂದು ಟೀಕಿಸಿದರು. ಸಾಮಾಜಿಕ ನ್ಯಾಯ ಕೊಡುವ ಸುಪ್ರೀಂ ಕೋರ್ಟಿನ ತೀರ್ಪು ಅನುಷ್ಠಾನದಲ್ಲಿ ಸಿದ್ದರಾಮಯ್ಯ ಅವರು ಎಲ್ಲ ಸಮುದಾಯಕ್ಕೆ ಅನ್ಯಾಯ ಮಾಡಿದ್ದಾರೆ" ಎಂದು ಆಕ್ಷೇಪ ವ್ಯಕ್ತಪಡಿಸಿದರು.

### ಕೃಷ್ಣಾ ಮೇಲ್ದಂಡೆ ಯೋಜನೆ 3ನೇ ಹಂತ

## ಒಂದು ವಾರದೊಳಗೆ ಭೂ ಪರಿಹಾರಕ್ಕೆ ದರ ನಿಗದಿ

**ವಿಜಯಪುರ:** ಕೃಷ್ಣಾ ಮೇಲ್ದಂಡೆ ಯೋಜನೆ ಮೂರನೇ ಹಂತಕ್ಕೆ ಸಂಬಂಧಿಸಿದಂತೆ ಮುಂದಿನ ವಾರದೊಳಗೆ ಸಭೆ ಕರೆದು ಭೂ ಪರಿಹಾರಕ್ಕೆ ದರ ನಿಗದಿ ಮಾಡಲಾಗುವುದು. ರೈತರು ಯಾರೂ ಪರಿಹಾರ ಕೊಡಿ ಎಂದು ನ್ಯಾಯಾಲಯಕ್ಕೆ ಹೋಗಬಾರದು. ಇದರಿಂದ ವಿಳಂಬವಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ ಮಾಡಿದರು.

ಆಲಮಟ್ಟಿಯಲ್ಲಿ ಜಲಸಂಪನ್ಮೂಲ ಇಲಾಖೆ ಹಾಗೂ ಕೃಷ್ಣ ಜಲ ಭಾಗ್ಯ ನಿಗಮ ನಿ. ವತಿಯಿಂದ ಆಯೋಜಿಸಲಾಗಿದ್ದ ಲಾಲ್ ಬಹುದ್ದೂರ್ ಶಾಸ್ತ್ರೀ ಸಾಗರದ ಕೃಷ್ಣೆಯ ಜಲಧಿಗೆ ಗಂಗಾಪೂಜೆ ಹಾಗೂ ಬಾಗಿನವನ್ನು ಅರ್ಪಣೆ ಮಾಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಕೃಷ್ಣಾ ಮೇಲ್ದಂಡೆ ಯೋಜನೆ ಕುರಿತು ರೈತ ಹೋರಾಟಗಾರರೊಂದಿಗೆ ಹಿಂದೆಯೇ ಬೆಳಗಾವಿಯಲ್ಲಿ ಸಭೆ ನಡೆಸಿತ್ತು. ಅಲ್ಲಿ ಎಲ್ಲರೂ ಒಪ್ಪಿಗೆ ನೀಡಿ ಎಂದಿರುವ ಹಿನ್ನೆಲೆಯಲ್ಲಿ ಸರ್ಕಾರವೂ ಒಪ್ಪಿಕೊಂಡಿದೆ. ಉಪಮುಖ್ಯಮಂತ್ರಿಗಳು ಇತ್ತೀಚೆಗೆ ಈ ಭಾಗದ ರೈತರು, ಶಾಸಕರೊಂದಿಗೆ ಸಭೆ ಕರೆದು ಚರ್ಚಿಸಿದ್ದು , ಒಪ್ಪಿಗೆ ಆದೇಶ ನೀಡುವುದು ಒಂದು ಹಂತಕ್ಕೆ ಬಂದಿದೆ. ಎಲ್ಲರ ಒಪ್ಪಿಗೆಯ ಮೇಲೆ ಒಪ್ಪಂದ ಮಾಡಿಕೊಳ್ಳಲಾಗುವುದು. ಮುಂದಿನ ವಾರದೊಳಗೆ ಈ ಬಗ್ಗೆ ಇತ್ಯರ್ಥ ಮಾಡಲಾಗುವುದು ಎಂದರು.

**ಗೆಜೆಟ್ ಅಧಿಸೂಚನೆಯಾದರೆ ಅಣೆಕಟ್ಟು ಎತ್ತರಿಸಲು ಅನುಕೂಲ:** ಕೃಷ್ಣಾ ಮೇಲ್ದಂಡೆ ಯೋಜನೆ ಮೂರನೇ ಹಂತದಲ್ಲಿ 519.6 ಮೀ. ರಿಂದ 524.25 ಮೀಟರ್ ಗೆ ಎತ್ತರಿಸುವುದರಿಂದ 130 ಟಿಎಂಸಿ ನೀರನ್ನು ಸಂಗ್ರಹ ಮಾಡಿಕೊಳ್ಳಬಹುದಾಗಿದ್ದು, ಅದನ್ನು ಬಳಕೆ ಮಾಡಲು ಅನುಕೂಲವಾಗಲಿದೆ. 173 ಟಿಎಂಸಿ ನೀರನ್ನು 6.6 ಹೆಕ್ಟೇರ್ ಪ್ರದೇಶಕ್ಕೆ ನೀರು ಒದಗಿಸಬಹುದಾಗಿದೆ. ಮೂರನೇ ಹಂತದ ಬಗ್ಗೆಯೂ ತೀರ್ಮಾನವಾಗಿದ್ದು, ಗೆಜೆಟ್ ಅಧಿಸೂಚನೆಯಾಗಿಲ್ಲ. ಇದಾದರೆ ನೀರಾವರಿ ಹಾಗೂ ಅಣೆಕಟ್ಟು ಎತ್ತರಿಸುವ ಕೆಲಸಗಳು ಆಗಲು ಅನುಕೂಲವಾಗಲಿದೆ ಎಂದರು.

**ನೀರಾವರಿ ನಮ್ಮ ಆದ್ಯತಾ ವಲಯ:** ಈ ವಿಚಾರಗಳ ಬಗ್ಗೆ ಮೂರು ಬಾರಿ ಸಂಬಂಧಪಟ್ಟ ಕೇಂದ್ರ ಸಚಿವರು ಹಾಗೂ ಪ್ರಧಾನಿಗಳನ್ನು ಭೇಟಿ ಮಾಡಲಾಗಿದೆ. ಉಪಮುಖ್ಯಮಂತ್ರಿ ಐದು ಬಾರಿ ಭೇಟಿಯಾಗಿದ್ದಾರೆ. ನೀರಾವರಿ ನಮ್ಮ ಆದ್ಯತಾ ವಲಯ. ರೈತರಿಗೆ ಅನುಕೂಲವಾಗಬೇಕು. ರೈತರ ಜಮೀನುಗಳಿಗೆ ನೀರು ದೊರೆತು, ರೈತರ ಉತ್ಪನ್ನಗಳು ಹೆಚ್ಚಾಗಬೇಕು ಹಾಗೂ ಅವರ ಬದುಕು ಹಸನಾಗಬೇಕು ಎನ್ನುವುದು ನಮ್ಮ ಉದ್ದೇಶ. ಈ ನಿಟ್ಟಿನಲ್ಲಿ ನಾವು ಪ್ರಯತ್ನ ಮಾಡುತ್ತಿದ್ದೇವೆ ಎಂದರು.

**ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಹಂತಹಂತವಾಗಿ ಸ್ಥಾಪನೆ :** ವಿಜಯಪುರ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಸ್ಥಾಪಿಸುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆ ಸ್ಥಾಪಿಸುವ ಗುರಿಯಿದೆ. ಹಂತಹಂತವಾಗಿ ಈ ಗುರಿಯನ್ನು ಸಾಧಿಸಲಾಗುವುದು,. 2025–26 ನೇ ಬಜೆಟ್ ನಲ್ಲಿ ಬಾಗಲಕೋಟೆ, ಮಂಗಳೂರು, ಕೋಲಾರ ನಂತರ ವಿಜಯಪುರದಲ್ಲಿಯೂ ವೈದ್ಯಕೀಯ ಕಾಲೇಜು ಸ್ಥಾಪಿಸುವ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು. ಕರ್ನಾಟಕ ರಾಜ್ಯದಲ್ಲಿ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಸ್ಥಾಪನೆಯ ಯೋಜನೆ ಹಮ್ಮಿಕೊಂಡಿದ್ದು, ಕೇಂದ್ರ ಸರಕಾದ ಮಾರ್ಗಸೂಚಿಯಂತೆ ಖಾಸಗಿ ಸಾರ್ವಜನಿಕ ಸಹಭಾಗಿತ್ವದಲ್ಲಿ ಕಾಲೇಜು ನಿರ್ಮಿಸಿ, ಸರಕಾರಿ ದರದಲ್ಲಿ ಚಿಕಿತ್ಸೆ ನೀಡಬೇಕೆಂದು ಸೂಚನೆಯಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.



### ದಸರಾ ಉದ್ಘಾಟನೆ; ಬಿಜೆಪಿಯಿಂದ ರಾಜಕೀಯಪ್ರೇರಿತ ವಿರೋಧ

ನಾಡಹಬ್ಬ ದಸರಾ ಉದ್ಘಾಟನೆಗೆ ಸಾಹಿತಿ ಬಾನು ಮುಷ್ತಾಕ್ ಅವರ ಆಯ್ಕೆಯನ್ನು ವಿರೋಧಿಸಿ, ಮಾಜಿ ಸಂಸದ ಪ್ರತಾಪ್ ಸಿಂಹ ಹೈಕೋರ್ಟ್ ಮೆಟ್ಟಿಲೇಲಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ವಿಷಯವನ್ನು ಕೋರ್ಟ್ ತೀರ್ಮಾನಿಸಲಿ, ಆದರೆ ಈ ಹಿಂದೆ ಸಾಹಿತಿ ನಿಸಾರ್ ಅಹ್ಮದ್ ಅವರು ಉದ್ಘಾಟಿಸುವುದನ್ನು ಯಾರು ವಿರೋಧಿಸಿರಲಿಲ್ಲ. ಟಿಪ್ಪು ಸುಲ್ತಾನ್ , ಮಿರ್ಜಾ ಇಸ್ಮಾಯಿಲ್ ಮೆರವಣಿಗೆಗಳನ್ನು ಏಕೆ ವಿರೋಧಿಸಲಿಲ್ಲ. ಬಿಜೆಪಿಯವರು ರಾಜಕೀಯ ದುರುದ್ದೇಶದಿಂದ ನಾಡಹಬ್ಬ ಉದ್ಘಾಟಿಸುವುದನ್ನು ವಿರೋಧಿಸುತ್ತಿದ್ದು, ಸರ್ಕಾರ ರಾಜಕೀಯವಾಗಿಯೇ ಪ್ರತ್ಯುತ್ತರ ನೀಡಲಿದೆ. ಬಾನು ಮುಷ್ತಾಕ್ ಅವರು ಕನ್ನಡಾಂಬೆಯ ಬಗ್ಗೆ ಹೀಗಳೆದು ಮಾತನಾಡಿರುವ ಬಗ್ಗೆ ಯಾವ ಪುರಾವೆಯಿಲ್ಲ. ಅವರು ಕನ್ನಡದಲ್ಲಿ ಬರೆದ ಕೃತಿಯ ಅನುವಾದಕ್ಕೆ ಬೂಕರ್ ಪ್ರಶಸ್ತಿ ಬಂದಿದೆ. ಆದ್ದರಿಂದ ರಾಜ್ಯ ಸರ್ಕಾರ ಸಾಹಿತಿಗಳಾದ ಬಾನು ಮುಷ್ತಾಕ್ ಹಾಗು ಅನುವಾದಿಸಿದ ದೀಪಾ ಬಸ್ತಿಯವರಿಗೆ ಸನ್ಮಾನಿಸಲಾಗಿದೆ. ಬಾನು ಮುಷ್ತಾಕ್ ಅವರು ಕನ್ನಡ ಸಾಹಿತಿಯಾಗಿರುವ ಕಾರಣ ಅವರಿಂದ ದಸರಾವನ್ನು ಉದ್ಘಾಟಿಸಲಾಗುತ್ತಿದೆ ಎಂದರು.

### ಧರ್ಮಸ್ಥಳ ಕೇಸ್

## ಬುರುಡೆ ಚಿನ್ನಯ್ಯಗೆ 14ದಿನ ನ್ಯಾಯಾಂಗ ಬಂಧನ

**ಮಂಗಳೂರು:** ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿರುವುದಾಗಿ ಹೇಳಿದ್ದ ಮುಸುಕುಧಾರಿ 'ಬುರುಡೆ' ಚಿನ್ನಯ್ಯನಿಗೆ ಕೋರ್ಟ್ 14 ದಿನ ನ್ಯಾಯಾಂಗ ಬಂಧನ ವಿಧಿಸಿದ್ದು, ಆರೋಪಿಯನ್ನು ಶಿವಮೊಗ್ಗ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವಂತೆ ಆದೇಶಿಸಿದೆ.

ಚಿನ್ನಯ್ಯನ 15 ದಿನಗಳ ಎಸ್ ಐಟಿ ಕಸ್ಟಡಿ ಮುಕ್ತಾಯವಾದ ಹಿನ್ನೆಲೆಯಲ್ಲಿ ಇಂದು ಆರೋಪಿಯನ್ನು ಬೆಳ್ತಂಗಡಿ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್ ಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು.

ವಿಚಾರಣೆ ನಡೆಸಿದ ಕೋರ್ಟ್, ಆರೋಪಿಯನ್ನು 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ, ಭದ್ರತೆಯ ದೃಷ್ಟಿಯಿಂದ ಶಿವಮೊಗ್ಗ ಕೇಂದ್ರ ಕಾರಾಗೃಹಕ್ಕೆ ಕಳುಹಿಸುವಂತೆ ಪೊಲೀಸರಿಗೆ ಸೂಚಿಸಿದೆ.

ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತು ಹಾಕಿದ್ದೇನೆ ಎಂದು ಹೇಳಿಕೊಂಡು ಪ್ರತ್ಯಕ್ಷನಾಗಿದ್ದ ಈತನ ಹೇಳಿಕೆಯ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಎಸ್ಐಟಿ ರಚನೆ ಮಾಡಿ ತನಿಖೆಗೆ ಆದೇಶ ನೀಡಿತ್ತು. ಆದರೆ ತನಿಖೆಯಲ್ಲಿ ಟ್ವಿಸ್ಟ್ ಸಿಕ್ಕಿದ್ದು, ದೂರುದಾರ ಚಿನ್ನಯ್ಯನ ವಿರುದ್ಧವೇ ತನಿಖೆಯ ತೂಗುಗತ್ತಿ ತಿರುಗಿತ್ತು.

ತಾನು ದೊಡ್ಡದೊಂದು ತಂಡದ ಷಡ್ಯಂತ್ರದ ಭಾಗ ಎಂದು ಆತ ಒಪ್ಪಿಕೊಂಡಿದ್ದಾನೆ. ಆಗಸ್ಟ್ 23 ರಂದು ಎಸ್ಐಟಿ ಅಧಿಕಾರಿಗಳು ಚಿನ್ನಯನನ್ನು ಬಂಧಿಸಿ ಕೋರ್ಟಿಗೆ ಹಾಜರುಪಡಿಸಿದ್ದರು. ಹೆಚ್ಚಿನ ವಿಚಾರಣಾಗಿ ಕೋರ್ಟ್ ಆರೋಪಿಯನ್ನು 12 ದಿನಗಳ ಕಾಲ ಎಸ್ಐಟಿ ಕಸ್ಟಡಿಗೆ ನೀಡಿತ್ತು. ಬಳಿಕ ಮತ್ತೆ ಮೂರು ದಿನ ಕಸ್ಟಡಿಗೆ ಎಸ್ಐಟಿ ಪೊಲೀಸರು ಪಡೆದಿದ್ದರು. ಇದೀಗ ಒಟ್ಟು 15 ದಿನಗಳ ಕಾಲ ಎಸ್ಐಟಿ ಕಸ್ಟಡಿ ನಂತರ ಬುರುಡೆ ಚಿನ್ನಯ್ಯ ಜೈಲು ಪಾಲಾಗಿದ್ದಾರೆ.





## ದಿಢೀರ್ ಕುಸಿದ ಬೃಹತ್ ಗುಡ್ಡ

**ಶಿಮ್ಲಾ:** ಹಿಮಾಚಲ ಪ್ರದೇಶದಲ್ಲಿ ಭೀಕರ ಗುಡ್ಡ ಕುಸಿತವಾಗಿದ್ದು. ಗುಡ್ಡ ಕುಸಿತದ ರೋಚಕ ದೃಶ್ಯ ಸ್ಥಳೀಯರ ಮೊಬೈಲ್ ನಲ್ಲಿ ಸೆರೆಯಾಗಿದೆ. ಹಿಮಾಚಲ ಪ್ರದೇಶದ ಸಿರ್ಮೌರ್ ಜಿಲ್ಲೆಯ ನೌಹ್ರಧರ್ ಪ್ರದೇಶದ ಚೌಕರ್ ಗ್ರಾಮದ ಬಳಿ ಶನಿವಾರ ಭಾರಿ ಭೂಕುಸಿತ ಸಂಭವಿಸಿದೆ.ಗುಡ್ಡ ಕುಸಿತದ ವಿಡಿಯೋವನ್ನು ಸ್ಥಳೀಯರೊಬ್ಬರು ತಮ್ಮ ಮೊಬೈಲ್ ನಲ್ಲಿ ಸೆರೆ ಹಿಡಿದಿದ್ದು ಈ ವಿಡಿಯೋ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ವೈರಲ್ ಆಗುತ್ತಿದೆ.

ವೈರಲ್ ಆಗಿರುವ ವಿಡಿಯೋದಲ್ಲಿ ಬೆಟ್ಟದ ದೊಡ್ಡ ಭಾಗ ಕುಸಿಯುತ್ತಿರುವುದನ್ನು ಕಾಣಬಹುದು. ಭೂಕುಸಿತವು ಸುಮಾರು 200 ಮೀಟರ್‌ಗಳಷ್ಟು ವಿಸ್ತರಿಸಿದ್ದು, ಈ ಭೂ ಕುಸಿತದಲ್ಲಿ ಅಪಾಯಕ್ಕೆ ಸಿಲುಕಿದ್ದ ಐದು ಜನರನ್ನು ರಕ್ಷಿಸಲಾಗಿದೆ.

## ಪೆಟ್ರೋಲ್, ಡೀಸೆಲ್ ಜಿಎಸ್‌ಟಿ ವ್ಯಾಪ್ತಿಗೆ ತರುವ ಯಾವುದೇ ಯೋಜನೆ ಇಲ್ಲ

**ನವದೆಹಲಿ:** ಪೆಟ್ರೋಲ್, ಡೀಸೆಲ್ ಮತ್ತು ಆಲ್ಕೊಹಾಲ್‌ನಂತಹ ಉತ್ಪನ್ನಗಳನ್ನು ಸದ್ಯಕ್ಕೆ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯಾಪ್ತಿಗೆ ತರುವ ಯಾವುದೇ ಯೋಜನೆ ಇಲ್ಲ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸ್ಪಷ್ಟಪಡಿಸಿದ್ದಾರೆ. ಸಂದರ್ಶನ ಒಂದರಲ್ಲಿ ಇದನ್ನು ಖಚಿತಪಡಿಸಿದ್ದು, ಪೆಟ್ರೋಲ್, ಡೀಸೆಲ್ ಮತ್ತು ಆಲ್ಕೊಹಾಲಿಕ್ ಪಾನೀಯಗಳನ್ನು ಜಿಎಸ್‌ಟಿ ವ್ಯಾಪ್ತಿಗೆ ಒಳಪಡಿಸದಿರಲು ಕಾರಣವೇನೆಂದು ಪ್ರಶ್ನಿಸಿದಾಗ, ಸಚಿವೆ ಸೀತಾರಾಮನ್ ಪ್ರಸ್ತುತ ಯೋಜನೆಯಲ್ಲಿ ಇವುಗಳನ್ನು ಸೇರಿಸಿಕೊಳ್ಳುವ ಉದ್ದೇಶವಿಲ್ಲ ಎಂದು ಹೇಳಿದರು. ಈ ಉತ್ಪನ್ನಗಳನ್ನು ಜಿಎಸ್‌ಟಿ ವ್ಯಾಪ್ತಿಗೆ ತರುವ ಸಾಧ್ಯತೆಯ ಕುರಿತು ಕೇಳಿದಾಗ ತಕ್ಷಣ ಇದು ಸಾಧ್ಯವಿಲ್ಲ ಎಂದು ಅವರು ಸ್ಪಷ್ಟವಾಗಿ ತಿಳಿಸಿದರು.

2017ರ ಜುಲೈನಲ್ಲಿ ಜಿಎಸ್‌ಟಿ ಜಾರಿಗೆ ಬಂದಾಗ, ಪೆಟ್ರೋಲ್, ಡೀಸೆಲ್ ಮತ್ತು ಆಲ್ಕೊಹಾಲ್‌ನಂತಹ ಕೆಲವು ಉತ್ಪನ್ನಗಳನ್ನು ಇದರ ವ್ಯಾಪ್ತಿಯಿಂದ ಹೊರಗಿಡಲಾಗಿತ್ತು. ಈ ಉತ್ಪನ್ನಗಳು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಅಬಕಾರಿ ಸುಂಕ (ಎಕ್ಸೈಸ್ ಡ್ಯೂಟಿ) ಮತ್ತು ಮೌಲ್ಯವರ್ಧಿತ ತೆರಿಗೆ (ವ್ಯಾಟ್) ಮೂಲಕ ಗಣನೀಯ ಆದಾಯವನ್ನು ತಂದುಕೊಡುವ ಕಾರಣ, ಇವುಗಳನ್ನು ಜಿಎಸ್‌ಟಿಯಿಂದ ಹೊರಗಿಡಲು ನಿರ್ಧರಿಸಲಾಗಿತ್ತು. ಒಂದು ವೇಳೆ ಇವುಗಳನ್ನು ಜಿಎಸ್‌ಟಿ ವ್ಯಾಪ್ತಿಗೆ ಒಳಪಡಿಸಿದರೆ, ರಾಜ್ಯ ಸರ್ಕಾರಗಳಿಗೆ ತಮ ಆರ್ಥಿಕ ಸ್ವಾತಂತ್ರ್ಯದ ಮೇಲೆ ಗಂಭೀರ ಪರಿಣಾಮ ಬೀರಬಹುದು. ಈ ಕಾರಣದಿಂದಾಗಿ, ಇಂಧನ ಮತ್ತು ಆಲ್ಕೊಹಾಲ್‌ನ ಮೇಲಿನ ತೆರಿಗೆಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪ್ರತ್ಯೇಕವಾಗಿ ವಿಧಿಸುತ್ತಿವೆ, ಇದರಿಂದಾಗಿ ಗ್ರಾಹಕರಿಗೆ ಈ ಉತ್ಪನ್ನಗಳ ಬೆಲೆ ಹೆಚ್ಚಾಗಿರುತ್ತದೆ. ದೈನಂದಿನ ಬಳಕೆಯ ವಸ್ತುಗಳಾದ ಶಾಂಪೂ, ಕೂದಲ ಎಣ್ಣೆ, ಆಟೋಮೊಬೈಲ್‌ಗಳು ಮತ್ತು ಟಿವಿಗಳಿಗೆ ಜಿಎಸ್‌ಟಿ ದರವನ್ನು ಗಣನೀಯವಾಗಿ ಇಳಿಕೆ ಮಾಡಲಾಯಿತು. ಇದರ ಜೊತೆಗೆ, ಜಿಎಸ್‌ಟಿ ರಚನೆಯನ್ನು ಸರಳೀಕರಿಸಲು ಕೇವಲ ಮೂರು ತೆರಿಗೆ ದರಗಳನ್ನು ಶೇ.5, ಶೇ.18 ಮತ್ತು ಶೇ.40 ರಷ್ಟು ಜಾರಿಗೆ ತರಲಾಯಿತು. ಈ ನಿರ್ಧಾರವು ಗ್ರಾಹಕರಿಗೆ ಮತ್ತು ವ್ಯಾಪಾರಿಗಳಿಗೆ ತೆರಿಗೆ ವ್ಯವಸ್ಥೆಯನ್ನು ಇನ್ನಷ್ಟು ಸರಳಗೊಳಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ.



## ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್‌ಗಳ ದುರಸ್ಥಿಗೆ ಕ್ರಮ

**ಕೊಪ್ಪಳ:** ರಾಯಚೂರು, ಬಳ್ಳಾರಿ, ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಗಳ ರೈತರ ಜೀವ ನಾಡಿಯಾಗಿರುವ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್‌ಗಳ ದುರಸ್ಥಿಗೆ ನಮ್ಮ ಸರ್ಕಾರದಿಂದ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಹೇಳಿದರು.

ಅವರು ಶನಿವಾರ ಕೊಪ್ಪಳ ಜಿಲ್ಲೆಯ ಗಿಣಿಗೇರಾ ಹತ್ತಿರದ ಎಂ.ಎಸ್.ಪಿ.ಎಲ್ ಏರ್‌ಸ್ಟ್ರಿಪ್‌ಗೆ ಭೇಟಿ ನೀಡಿ, ಪೊಲೀಸ್ ಗೌರ ಸ್ವೀಕರಿಸಿ, ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದರು. ಕಳೆದ ವರ್ಷ ಕೊಚ್ಚಿ ಹೋಗಿದ್ದ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಸಂಖ್ಯೆ 19ಕ್ಕೆ ಸ್ಟಾಪ್ ಲಾಗ್ ಎಲಿಮೆಂಟ್‌ನ್ನು ಯಶಸ್ವಿಯಾಗಿ ಅಳವಡಿಸಲಾಯಿತು. ಇದಕ್ಕೆ ನಮ್ಮ ಸರ್ಕಾರವು ತ್ವರಿತವಾಗಿ ಸ್ಪಂದನೆ ನೀಡಿತ್ತು. ಪ್ರಸ್ತುತ ತುಂಗಭದ್ರಾ ಜಲಾಶಯವು ಹಳೆಯದಾಗಿದ್ದು, ಗೇಟ್‌ಗಳ ಸಮಸ್ಯೆಯೂ ಇದೆ. ಮಳೆ ಕಡಿಮೆಯಾದ ತಕ್ಷಣ ಜಲಾಶಯದ ಗೇಟ್‌ಗಳ ದುರಸ್ಥಿಯನ್ನು ಮಾಡಲಾಗುವುದು ಎಂದರು.

ನಮ್ಮ ಸರ್ಕಾರ ಜನಪರ ಸರ್ಕಾರವಾಗಿದ್ದು, ಜನರ ಅಭಿಪ್ರಾಯಗಳಿಗೆ ಅನುಗುಣವಾಗಿ ಕೆಲಸ ಮಾಡುತ್ತಿದ್ದೇವೆ. ಕೊಪ್ಪಳ ಜಿಲ್ಲೆಯಲ್ಲಿಯ ವಿವಿಧ ಅಭಿವೃದ್ಧಿ ಕೆಲಸ ಕಾರ್ಯಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆಗಳ ಕಾರ್ಯಕ್ರಮಗಳ ದಿನಾಂಕವನ್ನು ನಿಗದಿಪಡಿಸಿ, ಅವುಗಳ ಉದ್ಘಾಟನೆಯನ್ನು ನೆರವೇರಿಸಲಾಗುವುದು ಎಂದು ಪತ್ರಕರ್ತರ ಪ್ರಶ್ನೆಗಳಿಗೆ ಉತ್ತರಿಸಿದರು.

ಕೊಪ್ಪಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರೆಸ್ (ಪತ್ರಿಕಾ) ವಾಹನವು ತುಂಬಾ ಹಳೇಯದಾಗಿದ್ದು, ಇಲಾಖೆಗೆ ಹೊಸ ಬಸ್ ನೀಡುವಂತೆ ಮಾಧ್ಯಮ ಪ್ರತಿನಿಧಿಗಳು ಮುಖ್ಯಮಂತ್ರಿಗಳ ಬಳಿ ಕೇಳಿಕೊಂಡಾಗ, ಕೊಪ್ಪಳ ವಾರ್ತಾ ಇಲಾಖೆಗೆ ಶೀಘ್ರ ಹೊಸ ಪ್ರೆಸ್ ವಾಹನ ನೀಡುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದರು. ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಮಾತನಾಡಿ, ತುಂಗಭದ್ರಾ ಜಲಾಶಯ ಕುರಿತು ಚರ್ಚಿಸಲು ಆಂದ್ರಾ ರಾಜ್ಯದ ಮುಖ್ಯಮಂತ್ರಿಗಳಿಗೆ ಸಮಯ ಕೇಳಿದ್ದೇನೆ. ಸಮಯ ನಿಗದಿಯಾದ ನಂತರ ನವಲಿ ಸಮನಾಂತರ ಜಲಾಶ ಮತ್ತು ಇತರೆ ವಿಷಗಳನ್ನು ಪ್ರಸ್ತಾಪಿಸಲಾಗುವುದು. ಆದಷ್ಟು ಬೇಗನೆ ತುಂಗಭದ್ರ ಗೇಟ್‌ಗಳ ದುರಸ್ಥಿ ಕೆಲಸಗಳನ್ನು ಮಾಡಲಾಗುವುದು. ಸಾರ್ವಜನಿಕರು ನಮಗೆ ಸಹಕಾರ ನೀಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರಾದ ಎಂ.ಬಿ ಪಾಟೀಲ, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್, ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ್, ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ್, ಹೊಸಪೇಟೆ ಶಾಸಕರಾದ ಹೆಚ್.ಆರ್ ಗವಿಯಪ್ಪ, ಮಾಜಿ ಸಂಸದರಾದ ಕರಡಿ ಸಂಗಣ್ಣ, ಮಾಜಿ ಶಾಸಕರಾದ ಬಸವರಾಜ ಹಿಟ್ನಾಳ್, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಬಳ್ಳಾರಿ ವಲಯದ ಪೊಲೀಸ್ ಉಪ ಮಹಾನಿರೀಕ್ಷಕರಾದ ವರ್ತಿಕಾ ಕಟಿಯಾರ್, ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ ಸೇರಿದಂತೆ ಇತರರು ಉಪಸ್ಥಿತರಿದ್ದರು.



## ಸೆ.19ಕ್ಕೆ ಏಕತಾ ಸಮಾವೇಶ

**ಹುಬ್ಬಳ್ಳಿ:** ವೀರಶೈವ ಲಿಂಗಾಯತ ಎರಡೂ ಒಂದೇ ಆಗಿದ್ದು, ಸಮಾಜದಲ್ಲಿ ಉಂಟಾಗಿರುವ ಗೊಂದಲ ನಿವಾರಿಸಲು ವೀರಶೈವ ಲಿಂಗಾಯತ ಏಕತಾ ಸಮಾವೇಶವನ್ನು ಸೆಪ್ಟೆಂಬರ್? 19ರಂದು ಇಲ್ಲಿನ ನೆಹರು ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಶಿರಹಟ್ಟಿ ಫಕೀರೇಶ್ವರ ಮಠದ ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.



ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ಜನಗಣತಿ ನಿರ್ಣಯ ಮಾಡಿದೆ. ಹಿಂದೆ ಜನಗಣತಿ ಆದಾಗ ಸಮಾಜದ ವಿರೋಧ ವ್ಯಕ್ತವಾದ ಕಾರಣ ಮತ್ತೊಂದು ಜನಗಣತಿಗೆ ಸಿದ್ಧತೆ ನಡೆದಿದೆ. ಕಾರಣ ಶುಕ್ರವಾರ ನಾವು ನೂರಾರು ಮಠಾಧಿಪತಿಗಳು ಸಭೆ ಸೇರಿ ಚರ್ಚಿಸಿದ್ದೇವೆ. ವೀರಶೈವ ಲಿಂಗಾಯತ ಎರಡೂ ಒಂದೇ. ಬೇರೆ ಎಂದು ಇಬ್ಭಾಗ ಮಾಡುತ್ತಿದ್ದಾರೆ. ಇದನ್ನು ಎಲ್ಲರೂ ಖಂಡಿಸಬೇಕು ಎಂದರು.


ಇದು ತತ್ವ ಪ್ರಧಾನ ಧರ್ಮವೇ ಹೊರತು, ವ್ಯಕ್ತಿ ಪ್ರಧಾನ ಧರ್ಮವಲ್ಲ: ವೀರಶೈವ ಲಿಂಗಾಯತ ಮಹಾಸಭಾದ ನಿಲುವೂ ಇದೇ ಆಗಿರುತ್ತದೆ. ಅದರ ಪರವಾಗಿಯೇ ನಾವು ಇರುತ್ತೇವೆ. ಲಿಂಗಾಯತ ಧರ್ಮ ಮಾಡಬೇಕೆಂಬುದು ಬಸವಣ್ಣ ಹೆಸರು ಬಳಕೆ ಮಾಡಿಕೊಂಡು ಸಮಾಜ ಒಡೆಯುವ ಕೆಲಸ ಮಾಡಲಾಗುತ್ತಿದೆ. ಇದು ತತ್ವ ಪ್ರಧಾನ ಧರ್ಮವೇ ಹೊರತು, ವ್ಯಕ್ತಿ ಪ್ರಧಾನ ಧರ್ಮವಲ್ಲ. ಬಸವ ಸಂಸ್ಕೃತಿ ಯಾತ್ರೆ ಹೆಸರಲ್ಲಿ ವೈದಿಕ ಸಂಸ್ಕೃತಿ ವಿರೋಧಿಸುತ್ತಿದ್ದಾರೆ. ಆ ವೇದಿಕೆಯಲ್ಲಿ ವೈದಿಕ ಪಾಠಶಾಲೆ ನಡೆಸುತ್ತಿದ್ದಾರೆ. ಅವರೇ ಅದರ ನೇತೃತ್ವ ವಹಿಸಿದ್ದಾರೆ. ಅವರ ನಡೆ, ನುಡಿ ಭಿನ್ನವಾಗಿದೆ. ಪ್ರತ್ಯೇಕ ಲಿಂಗಾಯತ ಆಗಬಾರದು ಎನ್ನುವುದು ನಮ್ಮ ಸ್ಪಷ್ಟ ನಿಲುವು ಎಂದು ಹೇಳಿದರು.

## ಪ್ರವಾಹ ಪೀಡಿತ ಗ್ರಾಮಗಳಿಗೆ ಈರಣ್ಣ ಕಡಾಡಿ ಭೇಟಿ

**ಮೂಡಲಗಿ:** ಘಟಪ್ರಭಾ ನದಿಯ ಪ್ರವಾಹದಿಂದ ರೈತರು ಬೆಳೆದ ಕೋಟ್ಯಂತರ ರೂಪಾಯಿ ಮೌಲ್ಯದ ಬೆಳೆಗಳು ನೀರು ಪಾಲಾಗಿದ್ದು, ವಿದ್ಯುತ್ ಪರಿಕರಗಳು, ರಸ್ತೆಗಳು ಹಾಳಾಗಿದ್ದು ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವಂತಾಗಿದೆ. ಕಷ್ಟಪಟ್ಟು ಬೆಳೆದ ಬೆಳೆ ಕೈಗೆ ಬರುವ ಮುಂಚೆ ಹಾನಿಯಾಗಿದೆ. ರಾಜ್ಯ ಸರ್ಕಾರ ಈ ಕೂಡಲೇ ಎಸ್.ಡಿ.ಆರ್.ಎಫ್ ನಿದಿಯ ಜೊತೆಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಸಂತ್ರಸ್ತರ ರೈತರ ನೆರವಿಗೆ ಧಾವಿಸಬೇಕು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಆಗ್ರಹಿಸಿದರು.

ಶುಕ್ರವಾರ ತಾಲೂಕಿನ ಘಟಪ್ರಭಾ ನದಿ ತೀರದ ಪ್ರವಾಹ ಪೀಡಿತ ಅವರಾಧಿ, ಅರಳಿಮಟ್ಟಿ, ಢವಳೇಶ್ವರ ಹಾಗೂ ಮಸಗುಪ್ಪಿ ಗ್ರಾಮಗಳಿಗೆ ಭೇಟಿ ನೀಡಿ ಪ್ರವಾಹದಿಂದ ಉಂಟಾದ ಹಾನಿಗಳನ್ನು ತಾಲೂಕಾ ಮಟ್ಟದ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿ ಅವರು ಮಾತನಾಡಿರು.

ಜಿಲ್ಲೆಯಲ್ಲಿ ಈ ಬಾರಿ ವಾಡಿಕೆ ಪ್ರಮಾಣಕ್ಕಿಂತ ಹೆಚ್ಚು ಮಳೆ ಆಗಿದೆ. ಕಳೆದ ಜೂನ್ 1ರಿಂದ ಸಪ್ಟಂಬರ್ 04 ರವರೆಗೆ ವಾಡಿಕೆ ಮಳೆಯ ಪ್ರಮಾಣ 487 ಮಿ. ಮೀ. ಆಗಬೇಕಿತ್ತು. ಆದರೆ, ಪ್ರಸ್ತುತ 609 ಮಿ.ಮೀ ಮಳೆಯಾಗಿದೆ. ಹೆಚ್ಚುವರಿಯಾಗಿ 122 ಮಿ.ಮೀ. ಮಳೆಯಾಗಿದೆ. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಒಟ್ಟು 7.25 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ.



ತಾಲೂಕಿನ ಗ್ರಾಮಗಳಿಗೆ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಭೇಟಿ ನೀಡಿ ಪ್ರವಾಹದಿಂದ ಉಂಟಾದ ಹಾನಿಗಳನ್ನು ತಾಲೂಕಾ ಮಟ್ಟದ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದರು.

ಧಾರಾಕಾರ ಮಳೆ ಹಾಗೂ ನದಿಗಳ ಪ್ರವಾಹದಿಂದ ಜಿಲ್ಲೆಯಲ್ಲಿ ಪ್ರಾಥಮಿಕ ವರದಿ ಪ್ರಕಾರ ಸುಮಾರು 55 ಸಾವಿರ ಹೆಕ್ಟೇರ್ ಪ್ರದೇಶದಲ್ಲಿನ ಕೃಷಿ ಬೆಳೆ ಹಾನಿಗೀಡಾಗಿದೆ. ನದಿತೀರದಲ್ಲಿದ್ದ 10 ಸಾವಿರ ಹೆಕ್ಟೇರ್ ಪ್ರದೇಶದಲ್ಲಿನ ಕಬ್ಬು, 31970 ಹೆಕ್ಟೇರ್ ಹೆಸರು, 12 ಸಾವಿರ ಹೆಕ್ಟೇರ್ ಗೋವಿನ ಜೋಳ, 3500 ಹೆಕ್ಟೇರ್ ಪ್ರದೇಶದಲ್ಲಿನ ಸೋಯಾಬಿನ್ ಬೆಳೆ ಹಾನಿಗೀಡಾಗಿದೆ. 11 ಸಾವಿರ ಹೆಕ್ಟೇರ್ ಭತ್ತ ಸೇರಿದಂತೆ ಇತರೆ ಬೆಳೆ ನೀರುಪಾಲಾಗಿವೆ ಹಾಗೂ 1,545 ಹೆಕ್ಟೇರ್‌ಗಿಂತ ಹೆಚ್ಚು ತೋಟಗಾರಿಕೆ ಬೆಳೆಗಳು ಹಾನಿಗೀಡಾಗಿವೆ ಎಂದರು.

ಮೂಡಲಗಿ ತಾಲೂಕು ಮತ್ತು ಅರಭಾವಿ ಕ್ಷೇತ್ರದಲ್ಲಿ ಈ ಪ್ರವಾಹದಲ್ಲಿ ಸುಮಾರು 2520 ಹೆಕ್ಟೇರ್ ಕೃಷಿ ಬೆಳೆ ಮತ್ತು ತೋಟಗಾರಿಕೆ ಬೆಳೆ, ಜಲಾವೃತ್ತಗೊಂಡು ರೈತರು ಕಂಗಾಲಾಗಿದ್ದಾರೆ. ರಾಜ್ಯದ ಅಭಿವೃದ್ಧಿಗೆ ಹಣ ನೀಡಲು ಸರ್ಕಾರದ ಬಳಿ ಹಣವಿಲ್ಲ ಆದರೆ ರಾಜ್ಯದ ಮಂತ್ರಿಗಳಿಗೆ ಸುತ್ತಾಡಲು ಹೆಲಿಕ್ಯಾಪ್ಟರ್‌ಗಳನ್ನು ಖರೀದಿಸಲು ಹಣವಿದೆ ಎಂದರಲ್ಲದೇ ಜಿಲ್ಲಾ ಉಸ್ತುವಾರಿ ಸಚಿವರು ಪ್ರವಾಹದಿಂದ ಹಾನಿಗೀಡಾದ ಬೆಳೆಗಳ ವೀಕ್ಷಣೆ ಮಾಡಿ, ರೈತರಿಗೆ ಭರವಸೆ ತುಂಬುವ ಕೆಲಸವೇ ಮಾಡುತ್ತಿಲ್ಲ. ಬೆಳಗಾವಿಯ ಡಿಸಿಸಿ ಬ್ಯಾಂಕ ಚುನಾವಣೆಯಲ್ಲಿ ಕಾರ್ಯನಿರ್ತರಾಗಿದ್ದಾರೆ ಹಾಗೂ ರಾಜ್ಯದ ಮಂತ್ರಿಗಳು ಸಹ ಬಿಹಾರ ಚುನಾವಣೆಯಲ್ಲಿ ಕಾರ್ಯನಿರತರಾಗಿದ್ದಾರೆ. ಇನ್ನು ಇವರಿಂದ ಪರಿಹಾರ ನಿರೀಕ್ಷೆ ಮಾಡುವುದು ಸಾಧ್ಯವೇ?? ರೈತರ ಬದುಕಿಗೆ ಗ್ಯಾರಂಟಿ ನೀಡದ ಅಸಮರ್ಥ ಸರ್ಕಾರ..! ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ನೋಡಲ್ ಅಧಿಕಾರಿ ಅನೀಲ ಹೆಗಡೆ, ಗ್ರೇಡ್–1 ತಹಸೀಲ್ದಾರ್ ಶಿವಾನಂದ ಬಬಲಿ, ತಾಪಂ ಸಹಾಯಕ ನಿರ್ದೆಶಕ ಎಸ್. ಎಸ್ ರೊಡ್ಡನ್ನವರ, ಕೃಷಿ ಇಲಾಖೆಯ ಪರಪ್ಪ ಹುಲಗಬಾಳ, ಬೆಳಗಾವಿ ಗ್ರಾಮೀಣ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಸ ಪಾಟೀಲ, ಅವರಾಧಿ ಗ್ರಾ.ಪಂ ಅಧ್ಯಕ್ಷ ಮಲ್ಲನಗೌಡ ಪಾಟೀಲ, ಶ್ರೀಶೈಲ ಪೂಜೇರಿ, ಸಿ.ಎಲ್. ನಾಯಕ, ಶಿವಪ್ಪ ಪೂಜೇರಿ, ಲಕ್ಷ್ಮಣ ಉಟಗಿ, ಗಂಗಾಧರ ಹಿರೇಮಠ, ರಾಮನಗೌಡ ಪಾಟೀಲ, ಬಸವರಾಜ ಪಡಶೆಟ್ಟಿ, ರಂಗಪ್ಪ ಉಪ್ಪಾರ, ರಾಜು ಉಪ್ಪಾರ, ಗೋವಿಂದ ಚನ್ನಾಳ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಗ್ರಾಪಂ ಪಿಡಿಒ, ಗ್ರಾಮ ಆಡಳಿತಾಧಿಕಾರಿಗಳು ಹಾಗೂ ಗ್ರಾಮಗಳ ರೈತರು ಉಪಸ್ಥಿತರಿದ್ದರು

## ನಾಳೆ ಆದಿ ಕರ್ಮಯೋಗಿ ಅಭಿಯಾನ ತರಬೇತಿ ಕಾರ್ಯಾಗಾರ

**ಕೊಪ್ಪಳ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ನಿರ್ದೇಶಕರ ನಿರ್ದೇಶನದನ್ವಯ ರಾಜ್ಯದಲ್ಲಿ ಆದಿ ಕರ್ಮಯೋಗಿ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರವನ್ನು ಮೂರು ದಿನಗಳ ಕಾಲ ವಸತಿ ಸಹಿತವಾಗಿ ಆಯೋಜಿಸಲಾಗಿದೆ.

ಈ ಕಾರ್ಯಕ್ರಮವು ಸೆಪ್ಟೆಂಬರ್ 8 ರಿಂದ 10 ರವರೆಗೆ ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತಿಯ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ನಡೆಯಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ.ಇಟ್ನಾಳ ಅವರು ವಹಿಸಿಕೊಳ್ಳುವರು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾನಸಿಕ ಅರಿವು ನೆರವು ಕಾರ್ಯಕ್ರಮ

**ಕೊಪ್ಪಳ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಇಲಾಖೆಗಳ ಸಹಯೋಗದಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಪ್ರಯುಕ್ತ ಸೆಪ್ಟೆಂಬರ್ 11 ರಂದು ಜಿಲ್ಲಾ ಕೇಂದ್ರದಲ್ಲಿ ಮಾನಸಿಕ ಅರಿವು ನೆರವು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮವು ಅಂದು ಬೆಳಿಗ್ಗೆ 11 ಗಂಟೆಗೆ ದದೇಗಲ್‌ನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ನಡೆಯಲಿದೆ. ಮಾನಸಿಕ ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮ

**ಕೊಪ್ಪಳ:** 2025-26ನೇ ಸಾಲಿನ ಶ್ರೀ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರವನ್ನು ಜಿಲ್ಲಾ ಮಟ್ಟದಲ್ಲಿ ಸೆಪ್ಟೆಂಬರ್ 7 ರಂದು ಸರಳವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಇಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಜಯಂತಿ ಕಾರ್ಯಕ್ರಮ ನಡೆಯಲಿದ್ದು, ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಹಾಗೂ ತಮ್ಮ ಕಚೇರಿ ಹಾಗೂ ಅಧೀನ ಕಾರ್ಯಾಲಯಗಳಲ್ಲಿ ಜಯಂತಿ ಕಾರ್ಯಕ್ರಮವನ್ನು ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಪಂಡಿತ ಪ್ರಶಸ್ತಿ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಕೊಪ್ಪಳ:** 2025-26 ನೇ ಸಾಲಿನಲ್ಲಿ ಕೃಷಿ ಪಂಡಿತ ಪ್ರಶಸ್ತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಅವಧಿಯನ್ನು ಸೆಪ್ಟೆಂಬರ್ 8 ರವರೆಗೆ ವಿಸ್ತರಿಸಲಾಗಿದೆ. ಕೆ.ಕಿಸಾನ್ ತಂತ್ರಾಂಶದಲ್ಲಿ ಕೆಲವು ತಾಂತ್ರಿಕ ಸಮಸ್ಯೆ ಉಂಟಾದ ಕಾರಣ ಅರ್ಜಿ ಸಲ್ಲಿಸಲು ತೊಂದರೆಯಾಗಿದ್ದು, ಆಸಕ್ತ ರೈತ ಮತ್ತು ರೈತ ಮಹಿಳೆಯರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅರ್ಜಿ ಸಲ್ಲಿಕೆ ಅವಧಿಯನ್ನು ವಿಸ್ತರಿಸಲಾಗಿದೆ.

ಈ ಅವಕಾಶವನ್ನು ಎಲ್ಲಾ ರೈತ ಬಾಂಧವರು ಸದುಪಯೋಗಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆ ಸ್ಪರ್ಧೆ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಕೊಪ್ಪಳ:** 2025-26ನೇ ಸಾಲಿನ ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಮುಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಅವಧಿಯನ್ನು ಸೆಪ್ಟೆಂಬರ್ 8 ರವರೆಗೆ ವಿಸ್ತರಿಸಲಾಗಿದೆ.

ಕೆ.ಕಿಸಾನ್ ತಂತ್ರಾಂಶದಲ್ಲಿ ತಾಂತ್ರಿಕ ಸಮಸ್ಯೆಗಳಿಂದ ಅರ್ಜಿಗಳನ್ನು ಆನ್‌ಲೈಣ್ ಮೂಲಕ ನೋಂದಣಿ ಮಾಡಲು ಬಾಕಿ ಇರುವ ಕಾರಣ ಅಂತಿಮ ದಿನಾಂಕವನ್ನು ವಿಸ್ತರಿಸಲು ಕೋರಲಾಗಿತ್ತು. ಅದರಂತೆ ಆಸಕ್ತ ರೈತ ಮತ್ತು ರೈತ ಮಹಿಳೆಯರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅರ್ಜಿ ಸಲ್ಲಿಕೆ ಅವಧಿಯನ್ನು ವಿಸ್ತರಿಸಲಾಗಿದೆ. ಈ ಅವಕಾಶವನ್ನು ಎಲ್ಲಾ ರೈತ ಬಾಂಧವರು ಸದುಪಯೋಗಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ಪುಸ್ತಕ ಮಾರಾಟ ಮೇಳ

**ಕಾರವಾರ:** ಮೈಸೂರು ದಸರಾ ಉತ್ಸವ-2024ರಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಉತ್ಸವ ಸಮಿತಿ, ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ಸೆ.22 ರಿಂದ ಅಕ್ಟೋಬರ್ 1 ರವರೆಗೆ ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ-2025 ನ್ನು ಸೌಟ್ಸ್ ಮತ್ತು ಗೈಡ್ಸ್ ಮೈದಾನ ಹಳೆ ಡಿ.ಸಿ. ಕಚೇರಿ ಎದುರು, ಮೈಸೂರುನಲ್ಲಿ ಏರ್ಪಡಿಸಲಾಗಿದೆ.

ಈ ಪುಸ್ತಕ ಮೇಳದಲ್ಲಿ ಕನ್ನಡ ಪ್ರಕಾಶಕರು/ಮಾರಾಟಗಾರರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ ರೂ.1000 ಗಳ ಭದ್ರತಾ ಠೇವಣಿ ಡಿ.ಡಿ.ಯನ್ನು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು - ಅವರ ಹೆಸರಿನಲ್ಲಿ ಡಿಡಿಗಳನ್ನು ಸಲ್ಲಿಸುವುದು.

ಈ ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ಪ್ರಕಾಶಕರು/ಮಾರಾಟಗಾರರು ನಿಗದಿತ ಅರ್ಜಿ ನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರಿನ ಕಚೇರಿ ಅಥವಾ ಆಯಾ ಜಿಲ್ಲೆಯಲ್ಲಿರುವ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿಗಳಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್ https://kpp.karnataka.gov.in ನಲ್ಲಿ ಉಚಿತವಾಗಿ ಪಡೆದುಕೆಳ್ಳಬಹುದು.ಭರ್ತಿಮಾಡಿದ ಅರ್ಜಿಯನ್ನು ಡಿ.ಡಿ.ಯೊಂದಿಗೆ ಸೆ.18 ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು - ಅವರ ಹೆಸರಿಗೆ ಅಂಚೆಯ ಮೂಲಕ ಹಾಗೂ ಇ-ಮೇಲ್ kannadappradhikara@gmail.com ಮೂಲಕ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-560 002 ದೂ:080-22484516/22107704 ನ್ನು ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಮಟಾ: ವಿದ್ಯುತ್ ವ್ಯತ್ಯಯ

**ಕಾರವಾರ:** ಹೆಸ್ಕಾಂ, ಕುಮಟಾ ಉಪವಿಭಾಗದ 11ಕೆ.ವಿ ಇಂಡಸ್ಟ್ರೀಯಲ್ ಫೀಡರಿನ ಮಾರ್ಗದಲ್ಲಿ ಮತ್ತು ಗ್ರಾಮೀಣ ಶಾಖೆಯ 11ಕೆ.ವಿ ವಾಲ್ಗಳ್ಳಿ ಫೀಡರಿನ ಮಾರ್ಗದಲ್ಲಿ ತುರ್ತುನಿರ್ವಹಣಾ ಕಾರ್ಯವಿರುವುದರಿಂದ ಸೆ.10 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಹಾಗೂ 33ಕೆ.ವಿ ಗೋಕರ್ಣ ಉಪಕೇಂದ್ರದಲ್ಲಿ ತುರ್ತುನಿರ್ವಹಣಾ ಕಾಮಗಾರಿ ಇರುವುದರಿಂದ ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಾದನಗೇರಿ, ಗೋಕರ್ಣ, ತದಡಿ, ಬಂಕಿಕೊಡ್ಲ, ಬಿಜ್ಜೂರು, ಗಂಗಾವಳಿ, ಓಂ ಬೀಚ್ ಮಾರ್ಗದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕರಿಸುವಂತೆ ಹೆಸ್ಕಾಂ, ಕುಮಟಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರು(ವಿ)ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜದಲ್ಲಿ ಶಿಕ್ಷಣದ ಪಾತ್ರ ಮಹತ್ವದಾಗಿದೆ: ಸಚಿವ ಜಾರಕಿಹೊಳಿ

**ಬೆಳಗಾವಿ:** ಸಮಾಜದಲ್ಲಿ ಶಿಕ್ಷಣದ ಪಾತ್ರ ಮಹತ್ವದಾಗಿದ್ದು, ಶಿಕ್ಷಕರು ತಮ್ಮ ಜವಾಬ್ದಾರಿಯನ್ನು ಅರಿತು ಕಾರ್ಯ ನಿರ್ವಹಿಸುವುದರ ಮೂಲಕ ವಿದ್ಯಾರ್ಥಿಗಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಉಪ ನಿರ್ದೇಶಕರ ಕಾರ್ಯಾಲಯ ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ (ಸೆ.06) ನಗರದ ಕುಮಾರ ಗಂಧರ್ವ ರಂಗ ಮಂದಿರದಲ್ಲಿ ನಡೆದ ಜಿಲ್ಲಾಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಹಾಗೂ ಬೆಳಗಾವಿ ನಗರ ವಲಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.




ಶಿಕ್ಷಕರ ಉತ್ತಮ ಮಾರ್ಗದರ್ಶನದಿಂದ ವಿದ್ಯಾರ್ಥಿಗಳು ಒಳ್ಳೆಯ ನಾಗರಿಕರಾಗಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಬಹುದಾಗಿದೆ. ವಿದ್ಯಾರ್ಥಿಗಳ ಉತ್ತಮ ಭವಿಷ್ಯ ಶಿಕ್ಷಕರ ಕೈಯಲ್ಲಿದೆ. ವಿದ್ಯಾರ್ಥಿಗಳು ಉತ್ತಮ ಪ್ರಜೆಗಳಾಗಿ ಬೆಳೆದು ನಾಡಿನ ಹೆಸರನ್ನು ವಿಶ್ವದಾದ್ಯಂತ ಪಸರಿಸುವದರ ಜೊತೆಗೆ ಅವರ ಜೀವನಕ್ಕೆ ದಾರಿ ತೋರಿಸುವದರಲ್ಲಿ ಶಿಕ್ಷಕರ ಪಾತ್ರ ಮಹತ್ವದಾಗಿದೆ ಎಂದರು.

ಸರಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದಂತಹ ಅನೇಕರು ಇಂದು ಉನ್ನತ ಸ್ಥಾನಗಳನ್ನು ಅಲಂಕರಿಸಿರುವುದನ್ನು ನಾವು ಕಾಣಬಹುದಾಗಿದೆ. ಸಾವಿತ್ರಿಬಾಯಿ ಫುಲೆ ಅವರ ದಿಟ್ಟತನದಿಂದ ಇವತ್ತು ಮಹಿಳೆಯರು ಶಿಕ್ಷಣ ಪಡೆಯುತ್ತಿದ್ದಾರೆ. ಬಸವಣ್ಣ, ಅಂಬೇಡ್ಕರ್ ಹಾಗೂ ಇನ್ನೂ ಮುಂತಾದ ಸಮಾಜ ಸುಧಾರಕರ ಇತಿಹಾಸಗಳನ್ನು ವಿದ್ಯಾರ್ಥಿಗಳಿಗೆ ತಿಳಿಸುವುದರ ಮೂಲಕ ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕು ಎಂದರು. ಶಿಕ್ಷಕರು ಕೊಟ್ಟಂತಹ ಮಾರ್ಗದರ್ಶನ ವಿದ್ಯಾರ್ಥಿಗ ಳು ತಮ್ಮ ಮನದಲ್ಲಿ ಇಟ್ಟುಕೊಳ್ಳುವಂತಹ ಕಾರ್ಯವನ್ನು ಇಂದಿನ ಶಿಕ್ಷಕರು ಮಾಡಬೇಕಾಗಿದೆ. ಶಾಲಾ ತರಗತಿಗಳಲ್ಲಿ ಶಾಲಾ ಪಠ್ಯದ ಜೊತೆಗೆ ಮಾನವೀಯ ಮೌಲ್ಯಗಳು ಹಾಗೂ ಬದುಕಿನ ಪಾಠಗಳ ಕುರಿತು ತಿಳಿಸಿಕೊಡಬೇಕು. ಸರಕಾರಿ ಶಾಲೆಗಳ ಅಭಿವೃದ್ದಿಗಾಗಿ ಸರಕಾರದಿಂದ ಸಾಕಷ್ಟು ಅನುದಾನವನ್ನು ಒದಗಿಸಲಾಗುತ್ತಿದೆ. ಈ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಶಾಲೆಯಲ್ಲಿ ಉತ್ತಮ ವಾತಾವರಣ ನಿರ್ಮಾಣ ಮಾಡಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕರಾದ ಆಸೀಫ್ ಸೇಠ ಅವರು ಮಾತನಾಡಿ ನಿವೃತ್ತಿ ಹೊಂದಿದ ಶಿಕ್ಷಕರಿಗೆ ವಂದನೆಗಳನ್ನು ತಿಳಿಸಿ, ಶಿಕ್ಷಣದಲ್ಲಿ ಕಲಿಸುವಂತಹ ವಿಷಯಕ್ಕೆ ಮಹತ್ವ ಕೊಡಬೇಕು. ಶಿಕ್ಷಕರು ವಿದ್ಯಾರ್ಥಿಗಳಿಗೆ ಜೀವನ ರೂಪಿಸಿಕೊಡುವ ದಾರಿ ತೋರಿಸಬೇಕು. ಶಿಕ್ಷಕರೊಂದಿಗೆ ನಾವು ಸದಾಕಾಲ ಇರುತ್ತೇವೆ ನಿಮ್ಮ ಕಾರ್ಯವನ್ನು ನಿರಂತರ ದೇಶದವನ್ನು ಕಟ್ಟುವ ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಮೀಸಲಿಡಿ ಎಂದರು. ಕಾರ್ಯಕ್ರಮದಲ್ಲಿ ಬುಡಾ ಆದ್ಯಕ್ಷರಾದ ಲಕ್ಷ್ಮಣರಾವ ಚಿಂಗಳೆ, ಮಹಾನಗರ ಪಾಲಿಕೆ ಆಯುಕ್ತರಾದ ಶುಭ.ಬಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಲೀಲಾವತಿ ಹಿರೇಮಠ, ಡಯಟ್ ಉಪನಿರ್ದೇಶಕ ಬಸವರಾಜ ನಾಲತವಾಡ, ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ರಾಯವ್ವಗೋಳ ಸೇರಿದಂತೆ ಶಿಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಗಣ್ಯರು ಉಪಸ್ಥಿತರಿದ್ದರು.
ಇದೇ ಸಂದರ್ಭದಲ್ಲಿ ಉತ್ತಮ ಶಿಕ್ಷಕರನ್ನು ಹಾಗೂ ನಿವೃತ್ತ ಶಿಕ್ಷಕರನ್ನು ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಗಣ್ಯರುಗಳಿಂದ ಸನ್ಮಾನಿಸಲಾಯಿತು.

**ಶಾಸಕ ಸಿ.ಎಸ್. ನಾಡಗೌಡರಿಂದ ಎಸ್‌ಎಫ್‌ಸಿ ಅನುದಾನ ವಿವಿಧ ಫಲಾನುಭವಿಗಳಿಗೆ ಸಲಕರಣೆಗಳ ವಿತರಣೆ**

# ಪಟ್ಟಣದ ಅಭಿವೃದ್ಧಿಗೆ ಚಿಂತನೆ ಅಗತ್ಯವಿದೆ

**ಮುದ್ದೇಬಿಹಾಳ:** ತಾಲ್ಲೂಕಿನ ನಾಲತವಾಡ ಪಟ್ಟಣದ ಉದ್ದಾರಕ್ಕೆ ಅಭಿವೃದ್ಧಿಪರ ಚಿಂತನೆಯೇ ಕಾಲದ ಅಗತ್ಯ. ರಾಜಕೀಯ ಟೀಕೆ-ಟಿಪ್ಪಣಿಗಳಿಂದ ದೂರವಿ ದ್ದು ಸಮಾಜಮುಖಿ ಕಾವ್ಯಗಳಲ್ಲಿ ಕೈಜೋಡಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಕೆಎಸ್‌ಡಿಎಲ್ ಅಧ್ಯಕ್ಷ ಹಾಗೂ ಶಾಸಕ ಸಿ.ಎಸ್. ನಾಡಗೌಡ ಹೇಳಿದರು.

ತಾಲ್ಲೂಕಿನ ನಾಲತವಾಡದ, ಪಟ್ಟಣ ಪಂಚಾಯತಿ ಸಭಾಂಗಣದಲ್ಲಿ ಕಾರ್ಯಕ್ರಮ ಎಸ್ಸಿ/ಎಸ್ಟಿ ಪಂಗಡದ ಎಸ್‌ಎಫ್‌ಸಿ ಅನುದಾನ ಫಲಾನುಭವಿ ಸೌಲಭ್ಯಗಳ ಸಲಕರಣೆಗಳ ವಿತರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡ, ಅಭಿವೃದ್ಧಿಗೆ ನಮ್ಮ ಮೂಲ ಮಂತ್ರವಾಗಿರಬೇಕು. ರಾಜಕೀಯದಲ್ಲಿ ಕೇವಲ ಕೇಕೆ ಹಾಕಿಸಿಕೊಳ್ಳುವುದರಿಂದ ಪಟ್ಟಣ ಬೆಳೆಯುವುದಿಲ್ಲ. ಎಲ್ಲೆಡೆ ಕಸ ಚೆಲ್ಲುವುದು, ಸಾರಿಗೆ ನಿಯಮ ಪಾಲಿಸದೆ ನಿರ್ಲಕ್ಷ್ಯದಿಂದ ವಾಹನ ಚಲಾಯಿಸುವುದರಿಂದ ಅಪಘಾತಗಳು ಹೆಚ್ಚುತ್ತಿವೆ. ಜನರು ಸ್ವತಃ ಜಾಗೃತರಾಗದಿದ್ದರೆ ಸರ್ಕಾರ ಎಷ್ಟೇ ಕ್ರಮಕೈಗೊಂಡರೂ ಪ್ರಯೋಜನವಾಗುವುದಿಲ್ಲ. ಎಲ್ಲ ವಸ್ತುಗಳ ಬೆಲೆ ತಿಳಿದಿರಬೇಕು. ಆದರೆ ನಮ್ಮ ರಕ್ಷಣೆ ನಾವೇ ಮಾಡಿಕೊಂಡಾಗ ಮಾತ್ರ ಸಮಾಜ ಸುಧಾರಿಸುತ್ತದೆ. ದೇವಸ್ಥಾನ, ಸಮುದಾಯ ಭವನಗಳ ಬೇಡಿಕೆ ಹೆಚ್ಚುತ್ತಿರುವುದನ್ನು ಗಮನಿಸಿದಾಗ, ದೇವರಿರುವ ಬಗ್ಗೆ ಪ್ರಶ್ನೆ ಕೇಳುವ ಪರಿಸ್ಥಿತಿ ಬಂದಿದೆ. ಮಳೆಯಿಂದ ಉತ್ತರ ಭಾರತವೇ ಕೊಚ್ಚಿ ಹೋದಾಗ ದೇವರು ಎಲ್ಲಿದ್ದ? ಎಂದು ಪ್ರಶ್ನಿಸಿದರು.



ಪಪಂ ಅಧ್ಯಕ್ಷೆ ವಿಜಯಲಕ್ಷ್ಮೀ ಇಲಕಲ್ ಮಾತನಾಡಿ ಶಾಸಕ ನಾಡಗೌಡ ಅವರ ಚಿಂತನೆಯಿಂದ ಹಂತ ಹಂತವಾಗಿ ಅಭಿವೃದ್ಧಿಗೆ ಅನುದಾನ ಸಿಗುತ್ತಿದ್ದು, 5 ಕೋಟಿ ಅನುದಾನದಲ್ಲಿ ಪಟ್ಟಣದಲ್ಲಿ ವಿವಿಧ ಕಾಮಗಾರಿ ಹಮ್ಮಿಕೊಂಡಿದ್ದಾಗಿ ತಿಳಿಸಿದರು. ಒಟ್ಟು 17.1 ಲಕ್ಷ ಅನುದಾನದಲ್ಲಿ 6 ಪದವೀಧರರಿಗೆ 4.76 ಲಕ್ಷದಲ್ಲಿ ಗಣಕಯಂತ್ರಗಳು, ಈ 2.1 ಲಕ್ಷದಲ್ಲಿ ವಿಕಲಚೇತನರಿಗೆ ತ್ರಿಚಕ್ರ ವಾಹನ, 204 ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿ, ಈ 4.74 ಲಕ್ಷದಲ್ಲಿ ವಿವಿಧ ಪಂಗಡವರಿಗೆ ಸೀಲಿಂಗ್ ಫ್ಯಾನ್, ಈ 4.04 ಲಕ್ಷದಲ್ಲಿ ಅಡುಗೆ ಪಾತ್ರೆ ಸಾಮಾನುಗಳನ್ನು ವೇದಿಕೆಯಲ್ಲಿ ಹಸ್ತಾಂತರಿಸಲಾಯಿತು.

ಈ ಸಂದರ್ಭದಲ್ಲಿ ಸಿಒ ಈರಣ್ಣ ಕೊಣ್ಣೂರ, ಪಪಂ ಅಧ್ಯಕ್ಷೆ ವಿಜಯಲಕ್ಷ್ಮೀ ಇಲಕಲ್, ಉಪಾಧ್ಯಕ್ಷ ಬಸವರಾಜ ಗಂಗನಗೌಡ್ರ, ಸದಸ್ಯರಾದ ಪೃಥ್ವಿರಾಜ ನಾಡಗೌಡ, ಅಮರಪ್ಪ ಸೀರಿ, ಸಂಗಣ್ಣ ಬಾರಡ್ಡಿ, ಬಾಬು ಕ್ಷತ್ರಿ, ಶಿವಪುತ್ರಪ್ಪ ಗುರಿಕಾರ, ರಮೇಶ ಆಲಕೊಪ್ಪರ, ಲತಾ ಗೊರಬಾಳ, ಯಮನವ್ವ ಬಂಡಿವಡ್ಡರ, ಸೋಮು ಬಡಿಗೇರ, ನೀಲಪ್ಪ ಸಿದ್ದಾಪೂರ, ಅಶೋಕ ಇಲಕಲ್, ಸಂಗಣ್ಣ ಮುರಾಳ, ಬಾಲಚಂದ್ರ ಗದಗಿನ ಇದ್ದರು. ಬಸವರಾಜ ಹುಡೇದ ನಿರೂಪಿಸಿ ವಂದಿಸಿದರು.

## ವಿದ್ಯುತ್ ವ್ಯತ್ಯಯ

**ಬೆಳಗಾವಿ:** ಕ.ವಿ.ಪ್ರ.ನಿ.ನಿ. ವತಿಯಿಂದ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 110 ಕೆ.ವ್ಹಿ. ಮಚ್ಛೆ ಉಪಕೇಂದ್ರದಿಂದ ಸರಬರಾಜು ಆಗುವ ಬೆಳಗಾವಿ ತಾಲೂಕಿನ ದತ್ತ ನಗರ, ನಾವಗೇಕರ ನಗರ, ಹವಳ ನಗರ, ಗೋಡಸೆ ಕಾಲನಿ, ಓಂಕಾರ ನಗರ, ಮಚ್ಛೆ, ಝಾಡಶಾಪೂರ, ದೇಸೂರ, ಸುಸ್ಗ್ಯಾನಟ್ಟಿ, ಬಳಗಾಮಟ್ಟಿ, ಕುಟ್ಟಲವಾಡಿ, ಬಾಮನವಾಡಿ, ನಾವಗೆ, ಜಾನೇವಾಡಿ, ಬಾದರವಾಡಿ, ರಣಕುಂಡೆ, ಕರ್ಲೇ, ಕಿನಯೇ, ಸಂತಿ ಬಸ್ತವಾಡ, ಕಾಳೇನಟ್ಟಿ, ವಾಘವಾಡೆ, ರಂಗಧೋಳಿ, ಪೀರಣವಾಡಿ, ಖಾದರವಾಡಿ, ಮಾರ್ಕಂಡೇಯ ನಗರ, ವಾಲ್ಮೀಕಿ ನಗರ, ತೀರ್ಥಕುಂಡೆ, ಹುಂಚ್ಯಾನಟ್ಟಿ, ಅಶೋಕ ಐರನ್ ಕಾಲನಿ, ನಾವಗೆ, ವಾಘವಾಡೆ ಹಾಗೂ ಮಚ್ಛೆ ಔದ್ಯೋಗಿಕ ಕ್ಷೇತ್ರಗಳಿಗೆ ಹಾಗೂ ಖಾನಾಪೂರ ತಾಲೂಕಿನ ಉಚವಡಾ, ಕುಸಮಳಿ, ಬೈಲೂರ, ಮೊರಬ, ಜಾಂಬೋಟಿ, ಓಲಮನಿ, ವಡಗಾಂವ, ದಾರೋಳಿ, ಚಾಪೋಲಿ, ಕಾಪೋಲಿ, ಮುಡವಿ, ಹಬ್ಬಾನಟ್ಟಿ, ದೇವಾಚಿಹಟ್ಟಿ, ತೋರಾಳಿ, ಗೋಲ್ಯಾಳಿ, ಬೆಟಗೇರಿ, ತಳೇವಾಡಿ, ಅಮಟೆ, ಕಾಲಮನಿ, ಚಿಕಲೆ, ಕಣಕುಂಬಿ, ಗವಸೆ, ಅಮಗಾಂವ, ಬೇಟ್ನೆ, ಪಾರವಾಡ, ಚಿಗುಳೆ, ಮಾನ, ಸಡಾ, ಚೋರ್ಲಾ, ಹಳೆ ಹಾಗೂ ಹೊಸ ಹುಳಂದ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ದಿನಾಂಕ:07-09-2025 ರಂದು ಮಧ್ಯಾಹ್ನ 2 ರಿಂದ ಸಾಯಂಕಾಲ 6 ಘಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಹುವಿಸಕಂನಿ ಕಾ ಮತ್ತು ಪಾ ಗ್ರಾಮೀಣ ವಿಭಾಗ ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

**ಬೆಳಗಾವಿ.:** 2025-26ನೇ ಸಾಲಿನ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ, ಅಲೆಮಾರಿ ಅಭಿವೃದ್ಧಿ ನಿಗಮದಿಂದ ಸೇವಾ ಸಿಂಧು ಪೋರ್ಟಲ್ ಮೂಲಕ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ.10 ಸೆಪ್ಟೆಂಬರ್ 2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. 2023-24 ಹಾಗೂ 2024-25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿದವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲಾ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಶಿಶಿಕ್ಷು ಮೇಳ

**ಬಾಗಲಕೋಟೆ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಬಾಗಲಕೋಟೆ ಮತ್ತು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಬೀಳಗಿರವರ ಸಹಯೋಗದಲ್ಲಿ ಸೆಪ್ಟೆಂಬರ 08 ರಂದು ಬೆಳಿಗ್ಗೆ 10:30 ರಿಂದ 04 ಗಂಟೆಯವರೆಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಬೀಳಗಿಯಲ್ಲಿ ಶಿಶಿಕ್ಷು ಮೇಳವನ್ನು ಆಯೋಜಿಸಲಾಗಿದೆ. ಈ ಶಿಶಿಕ್ಷು ಮೇಳದಲ್ಲಿ ಹಲವಾರು ಖಾಸಗಿ ಕಂಪನಿಗಳು ಭಾಗವಹಿಸಿ, ನೇಮಕಾತಿ ಮಾಡಿಕೊಳ್ಳಲಿದ್ದು, 19 ರಿಂದ 26 ರ ವಯೋಮಿತಿಯಲ್ಲಿರುವ ಎಸ್ ಎಸ್ ಎಲ್ ಸಿ, ಪಿ ಯು ಸಿ, ಐ ಟಿ ಐ ಡಿಪ್ಲೋಮಾ ಅಭ್ಯರ್ಥಿಗಳು ತಮ್ಮ ಬಯೋಡೆಟಾ ಮತ್ತು ಮೂಲ ಅಂಕಪಟ್ಟಿಗಳ ಝರಾಕ್ಸ ಪ್ರತಿಗಳೊಂದಿಗೆ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ 08354-235337 ಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ನಾಳೆ ನೇತ್ರದಾನ ಜಾಗೃತಿ ಜಾಥಾ

**ಬಾಗಲಕೋಟೆ:** ಜಿಲ್ಲಾ ಆರೋಗ್ಯ ಮತ್ತು ಕುಟಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ ಹಾಗೂ ವಿವಿಧ ಪ್ಯಾರಾ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳಿಂದ ಸೆ,08ರಂದು ಮುಂಜಾನೆ 9 ಘಂಟೆಗೆ ಸಕ್ರಿ ಕಾಲೇಜು ಮೈದಾನದಿಂದ ಎಂ ಎಂ ಜೋಶಿ ಕಣ್ಣಿನ ಆಸ್ಪತ್ರೆಯ ತನಕ ಜನಸಾಮಾನ್ಯರಲ್ಲಿ ನೇತ್ರದಾನದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಜಾಥಾ ಹಮ್ಮಿಕೊಂಡದೆ.ನಾಗರಿಕರು ಜಾಥದಲ್ಲಿ ಭಾಗವಹಿಸಲು ಎಂ ಎಂ ಜೋಶಿ ನೇತ್ರ ವಿಜ್ಞಾನ ಸಂಸ್ಥೆ ಶಾಖಾ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಬಾಗಲಕೋಟೆ:** 2025-26 ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಕ ನಂತರದ ವಿದ್ಯಾರ್ಥಿನಿಲಯಗಳಿಗೆ ( ವೃತಿಪರ ಕೋರ್ಸ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಅಕ್ಟೋಬರ್ 04 ಆಗಿರುತ್ತದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮ ದಿನಾಚರಣೆ**

# ಭ್ರಷ್ಟಾಚಾರ ಮುಕ್ತ ವೃತ್ತಿ ಶಿಕ್ಷಕ ವೃತ್ತಿ

**ಯರಗಟ್ಟಿ:** ಶಿಕ್ಷಕ ವೃತ್ತಿಯು ವಿದ್ಯಾರ್ಥಿಗಳಿಗೆ ಅಕ್ಷರ, ಸಂಖ್ಯಾ ಜ್ಞಾನ, ಕಲೆ, ವೃತ್ತಿಪರ ತರಬೇತಿ ಮತ್ತು ಜೀವನ ಕೌಶಲ್ಯಗಳನ್ನು ಬೋಧಿಸುವುದನ್ನು ಒಳಗೊಂಡಿದೆ. ಪಾಠಗಳನ್ನು ಸಿದ್ಧಪಡಿಸುವುದು, ಬೋಧಿಸುವುದು ಮತ್ತು ವಿದ್ಯಾರ್ಥಿಗಳ ಪ್ರಗತಿಯನ್ನು ನಿರ್ಣಯಿಸುವುದು ಈ ವೃತ್ತಿಯ ಮುಖ್ಯ ಜವಾಬ್ದಾರಿಗಳಾಗಿವೆ. ಇದರೊಂದಿಗೆ, ಶಿಕ್ಷಕರು ಅಧ್ಯಯನ ಪ್ರವಾಸಗಳಿಗೆ ಮಾರ್ಗದರ್ಶನ ನೀಡುವುದು, ಶಾಲಾ ಕಾರ್ಯಕ್ರಮಗಳನ್ನು ಸಂಘಟಿಸುವುದು ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳಿಗೆ ಸಹಾಯ ಮಾಡುವುದು ಮುಂತಾದ ಹೆಚ್ಚುವರಿ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಹಾಗೂ ಎಲ್ಲಾ ವರ್ಗದ ಮಕ್ಕಳಿಗೆ ಭ್ರಷ್ಟಾಚಾರ ಮುಕ್ತ ಶಿಕ್ಷಣ ನೀಡುವ ವೃತ್ತಿ ಶಿಕ್ಷಕ ವೃತ್ತಿ ಎಂದು ರಾಜಯೋಗಿಸಿ ಜಯಶ್ರೀ ಅಕ್ಕನವರು ಹೇಳಿದರು.

ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಜಯಂತಿಯನ್ನು ಹಾಗೂ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಈಶ್ವರೀಯ ವಿಶ್ವದ್ಯಾಲಯದ ಪರವಾಗಿ 50 ಕ್ಕೂ ಹೆಚ್ಚು ಶಿಕ್ಷರನ್ನು ಸನ್ಮಾನಿಸಲಾಯಿತು.

ಸನ್ಮಾನಿತರ ಪರವಾಗಿ ಮಾತನಾಡಿದ ಸಿ.ಎಂ. ಮಾಮನಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ಡಾ. ರಾಜಶೇಖರ ಬಿರಾದಾರ ಅವರು, ಶಿಕ್ಷಕ ವೃತ್ತಿಯು ಕೇವಲ ಪಠ್ಯ ಬೋಧನೆಗೆ ಸೀಮಿತವಾಗದೆ ಮೌಲ್ಯಾಧಾರಿತ ಜೀವನವನ್ನು ಅಳವಡಿಸಿಕೊಳ್ಳುವುದರೊಂದಿಗೆ ಮೌಲ್ಯಯುತ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದರು. ಸಿ.ಆರ್.ಪಿ.ಮಲಕಣ್ಣವರ ಮಾತನಾಡಿದರು.

ಈ ವೇಳೆ ಶಿಕ್ಷಕ ಸಂಘದ ಸದಸ್ಯ ವ್ಹಿ. ಎಂ. ಮೆಳವಂಕಿ, ಸಿ.ಆರ್.ಪಿ ಎಂ. ಎಂ. ಮಲಕನ್ನವರ, ಎ. ಎ. ಮಕ್ತುಮನ್ನವರ, ಎಸ್. ಬಿ. ತೋರಗಲ್ಲ, ಎಸ್. ಬಿ. ಜಂಬಗಿ, ವ್ಹಿ. ಎಂ. ಮರಡಿ, ಬಿ. ಎಂ. ಬಾವಾಖಾನ, ಎ. ಎಸ್. ಕಡಕೋಳ, ಎಲ್. ಎಂ. ಕುಮಕಾಗೋಳ, ಆರ್. ಎನ್. ಗುದಗೊಪ್ಪನ್ನವರ, ವಿ. ವಿ. ತಲ್ಲೂರು, ಎಂ. ಎ. ಕೋಟಗಿ, ಎಸ್. ಎಸ್. ಚಿಲಕಂಡಿ, ಎಂ. ಎಂ. ಮುಲ್ಲಾ, ಹೊಸಮನಿ, ಎ. ಕೆ. ನದಾಫ, ಬಿ. ಕೆ. ಪಾಟೀಲ, ಭಾಗೀರಥಿ ಹಳಗಲಿ, ವಿಜಯಲಕ್ಷ್ಮಿ ಲಿಂಗದಳ್ಳಿ ಸೇರಿದಂತೆ ಅನೇಕರು ಇದ್ದರು.

# ಕ್ರೀಡಾಪಟುಗಳು ವಿಶ್ವಮಟ್ಟದ ಕನಸು ಕಾಣಬೇಕು; ಶಾಸಕ ಲಕ್ಷ್ಮಣ ಸವದಿ

**ಮೋಳೆ:** ವಿಶ್ವಕ್ರಿಡಾಪಟ್ಟು ಧ್ಯಾನ್‌ಚಂದ ಅವರಂತೆ ವಿಶ್ವ ಮಟ್ಟದಲ್ಲಿ ಅಥಣಿಯ ವಿದ್ಯಾರ್ಥಿಗಳು ಗುರುತಿಸಿಕೊಳ್ಳುವ ಕನಸು ಕಾಣಬೇಕು. ಆಗ ಮಾತ್ರ ಸಾಧನೆ ಶಿಖರ ಏರಲು ಸಾಧ್ಯ ಎಂದು ಮಾಜಿ ಉಪ ಮುಖ್ಯಮಂತ್ರಿ, ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಶಿವಾನಂದ ಭಾರತಿ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಭೋಜರಾಜ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ತಾಲೂಕಾ ಮಟ್ಟದ ಪದವಿ ಪೂರ್ವ ಮಹಾವಿದ್ಯಾಲಯಗಳ 2025-26 ನೇ ಸಾಲಿನ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ಸತತ ಮುರು ಓಲಂಪಿಕ್ಸ್ ಕ್ರಿಡಾಕೂಟದಲಿ ಮುರು ಬಾರಿ ಚಿನ್ನದ ಪದಕ ಗೆದ್ದಂತಹ ವಿಶ್ವ ಕಂಡ ಶ್ರೇಷ್ಠ ಕ್ರೀಡಾಪಟು ಧ್ಯಾನಚಂದ್‌ರವರು ಆಡ್ಲಸ್ ಹಿಟ್ಲರ್ ನೀಡಿದ ಆಮಿಷಗೊಳಗಾಗದೆಭಾರತವನ್ನು ನನ್ನ ಕರ್ಮಭೂಮಿ ,ನಾನು ಬಿಡಲಾರೆ ಎಂದು ನೇರವಾಗಿ ಹೇಳುವಂತಹ ಮಹಾನ್ ಕ್ರೀಡಾಪಟು.ಎಂದ ಅವರು ಕ್ರೀಡಾ ಸಾಧನೆಯನ್ನು ಕೊಂಡಾಡಿದರು.

ಕ್ರೀಡಾಪಟುಗಳು ಹೆಚ್ಚು ಹೆಚ್ಚು ಕ್ರೀಡೆಗಳಲ್ಲಿ ಭಾಗಿಯಾಗಿ ಸದೃಢ ಮತ್ತು ಆರೋಗ್ಯವಂತರಾಗಿ ಉತ್ತಮವಂತರಾಗಿ ಒಳ್ಳೆಯ ಜೀವನ ರೂಪಿಸಿಕೊಳ್ಳಬೇಕು. ನಿರಂತರ ಪರಿಶ್ರಮದಿಂದ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳು ದೇಶಕ್ಕೆ ಕೀರ್ತಿ ತರಬೇಕು ಎಂದರು.ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಆಯೋಜಿಸಲಾದ ಕ್ರೀಡಾಕೂಟಗಳಿಂದ ಯುವಕರಲ್ಲಿ ಐಕ್ಯತೆ ಜೊತೆಗೆ ಪರಸ್ಪರ ಸಹಬಾಳ್ವೆ ಮೂಡುತ್ತದೆ ಎಂದ ಅವರು ವ್ಯಕ್ತಿಯ ವ್ಯಕ್ತಿತ್ವ ರೂಪಿಸುವ ಸಾದನ ಕ್ರೀಡೆ. ಸೋಲು-ಗೆಲುವು ನೋವು,ನಲಿವುಗಳ ನಡುವೆಯೂ ಪರಸ್ಪರ ಸಹಕಾರದಿಂದ ಕ್ರೀಡೆ ಸಹಕಾರಿಯಾಗಲಿದೆ ಎಂದರು.




ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೃಷ್ಣಾ ಸಹಕಾರಿ ಸಕ್ಕರೆ ಕಾರಖಾನೆ ಅಧ್ಯಕ್ಷ ಪರಪ್ಪಣ್ಣ ಸವದಿ ಮಾತನಾಡಿ,ಕ್ರೀಡೆಗಳು ಶಾಲಾ ಮಕ್ಕಳ ಮಾನಸಿಕ ಮತ್ತು ದೈಹಿಕ ಬೆಳವಣಿಗೆಗೆ ಪೂರಕವಾಗಿದ್ದು, ಮಕ್ಕಳು ಕ್ರೀಡೆಗಳಲ್ಲಿ ಪಾಲ್ಗೊಳ್ಳುವ ಮೂಲಕ ತಮ್ಮ ದೈಹಿಕ ಸಾಮರ್ಥ್ಯ ಉತ್ತಮಪಡಿಸಿಕೊಳ್ಳಬೇಕು.ಪ್ರತಿಯೊಂದು ಕ್ರೀಡೆಗಳಲ್ಲಿ ಸೋಲು-ಗೆಲುವು ಸಮಾನವಾಗಿ ಸ್ವೀಕರಿಸುವ ಮನೋಭಾವ ಮಕ್ಕಳು ಬೆಳೆಸಿಕೊಳ್ಳಬೇಕು. ತೀರ್ಪುಗಾರರ ತೀರ್ಪನ್ನು ನೀಡುವ ಮೂಲಕ ಮಕ್ಕಳ ಪ್ರತಿಭೆ ಪ್ರೋತ್ಸಹಿಸಬೇಕು ಎಂದು ಸಲಹೆ ನೀಡಿದರು.

ಮತ್ತೋರ್ವ ಮುಖ್ಯ ಅತಿಥಿ ಜಾಧವಜಿ ಶಿಕ್ಷಣ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ.ರಾಮ ಕುಲಕರ್ಣಿ ಮಾತನಾಡಿ, ನಮ್ಮ ದೇಶದಲ್ಲಿ ಈ ಮೊದಲು ಕ್ರೀಡೆಗಳಿಗಾಗಲಿ ಅಥವಾ ಕ್ರೀಡಾಪಟುಗಳಿಗಾಗಲಿ ಕೊಡಬೇಕಾದಷ್ಟು ಮಹತ್ವ ಕೊಡುತ್ತಿರಲಿಲ್ಲ ಹೀಗಾಗಿ ಕ್ರೀಡೆಗಳಲ್ಲಿ ಭಾರತ ಮುಂಚೂಣಿಯಲ್ಲಿರಲಿಲ್ಲ ಎಂದ ಅವರು ಇತ್ತೀಚಿಗೆ ಕ್ರೀಡೆಗಳಿಗೂ ಮಹತ್ವ ಕೊಡುತ್ತಿರುವ ಪರಿಣಾಮ ಇತ್ತೀಚಿನ ಒಲಂಪಿಕ್ ಕ್ರೀಡಾ ಕೂಟದಲ್ಲಿ 12 ಮೆಡಲ್ ಗಳನ್ನು ನಮ್ಮ ಕ್ರೀಡಾ ಪಡುಗಳು ಗೆಲುವು ಸಾಧಿಸಿದ್ದಾರೆ ಎಂದರು. ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಉಪ ನಿರ್ದೇಶಕ ಪಾಂಡುರಂಗ ಭಂಡಾರೆ ಮಾತನಾಡಿ, ಕ್ರೀಡಾ ಪಟುಗಳು ಖ್ಯಾತ ಕ್ರೀಡಾ ಪಟು ಧ್ಯಾನಚಂದರ ಆದರ್ಶ ಮೈಗೂಡಿಸಿಕೊಳ್ಳಿ ಎಂದರು.

ಶ್ರೀ ಶಿವಾನಂದ ಭಾರತಿ ಪ.ಪೂ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಜೆ.ಕಮತಗಿ ಮಾತನಾಡಿದರು. ಅತಿಥಿಗಳಾಗಿ ಜೆ.ಎ.ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಎಮ್.ಪಿ.ಮೇತ್ರಿ,ಸ ರಕಾರಿ ಬಾಲಕಿಯರ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಎಂ.ಜಂಗಲಗಿ. ಉದ್ಯಮಿ ಮಲ್ಲೇಶ ಸವದಿ, ಶ್ರೀ ಶಿವಾನಂದ ಭಾರತಿ ಪದವಿ ಪೂರ್ವ ಕಾಲೇಜಿನ ಆಡಳಿತಾಧಿಕಾರಿ ವಿ.ಸಿ.ಹಿರೇಪಟ್ಟ, , ಸಂಸ್ಥೆಯ ಅಧ್ಯಕ್ಷ ಬಸವರಾಜ ತೇಲಿ, ಉಪಾಧ್ಯಕ್ಷೆ ಕಸ್ತೂರಿ ಅವಟಿ, ಕಾರ್ಯದರ್ಶಿ ಪ್ರಕಾಶ ತೇಲಿ, ನಿರ್ದೇಶಕರಾದ ಬಸವರಾಜ ಸಾವಡಕರ, ಶಿವಾನಂದ ಪಾಟೀಲ, ರಾಜು ತೇಲಿ, ಅಪ್ಪಾಸಾಬ ಹೊನಕಾಂಬಳೆ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಶಿವಲೀಲಾ ಅವರಿಗೆ ಆದರ್ಶ ಶಿಕ್ಷಕಿ ಪ್ರಶಸ್ತಿ



**ಮೂಡಲಗಿ:** ರಾಷ್ಟ್ರ ಪ್ರಶಸ್ತಿ ಪುರಸ್ಕೃತರಾದ ಬಸಪ್ಪ ನಿಡಸೋಸಿ ಅವರ ಪುತ್ರಿ ಬೈಲಹೊಂಗಲದ ತಾಲೂಕಿನ ಹನಮನಹಟ್ಟಿಯ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ಶಿವಲೀಲಾ ನಿಡಸೋಸಿ ಅವರು ಜಿಲ್ಲಾ ಆದರ್ಶ ಶಿಕ್ಷಕಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಶನಿವಾರ ಬೆಳಗಾವಿಯಲ್ಲಿ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆಯಲ್ಲಿ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಪ್ರಶಸ್ತಿ ನೀಡಲಿದ್ದಾರೆ.

## ನೆಲ, ಜಲ ಕುರಿತು ರೈತರಿಗೆ ಪಾಠಶಾಲೆ

**ನೇಸರಗಿ:** ಸಮೀಪದ ವನ್ನೂರ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ವತಿಯಿಂದ ನೆಲಜಲ ಸಂರಕ್ಷಣೆ / ಮಳೆ ಕೊಯ್ಲು ವಿಷಯದ ಅಡಿಯಲ್ಲಿ ರೈತ ಕ್ಷೇತ್ರ ಪಾಠ ಶಾಲೆಯನ್ನು ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಾದ ಬಸನಗೌಡ ಪಾಟೀಲ ಮಾತನಾಡಿ ಜಲ ನೆಲ, ಸಂರಕ್ಷಣೆ / ಮಳೆ ಕೊಯ್ಲು ರೈತರಿಗೆ ವಿಷಯದ ಬಗ್ಗೆ ಮಾಹಿತಿಯನ್ನು ನೀಡಿದರು. ಊರಿನ ಮುಖಂಡರಾದ ಮಲ್ಲಪ್ಪ ಬಾಳಸಾಹೇಬ ದೇಸಾಯಿ ಅವರು ರೈತ ಕ್ಷೇತ್ರ ಪಾಠಶಾಲೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು ಹಾಗೂ ಪಂಚಾಯತ ಸದಸ್ಯರಾದ ಹನುಮಂತ ಅವರು ರೈತರು ಸ್ವಾವಲಂಬಿ ಜೀವನವನ್ನು ನಡೆಸಬೇಕೆಂದು ಎಂದರು.

ಈ ಸಂದರ್ಭದಲ್ಲಿ ವಲಯದ ಮೇಲ್ವಿಚಾರಕರು, ಊರಿನ ಗಣ್ಯರು,ರೈತ ಬಾಂಧವರು ಉಪಸ್ಥಿತರಿದ್ದರು. ಈ ಕಾರ್ಯಕ್ರಮವನ್ನು ತಾಲೂಕಿನ ಕೃಷಿ ಮೇಲ್ವಿಚಾರಕರು ನಿರೂಪಣೆ ಮಾಡಿದರು ಹಾಗೂ ಕಾರ್ಯಕ್ಷೇತ್ರದ ಸೇವಾ ಪ್ರತಿನಿಧಿಯವರು ಸ್ವಾಗತಿಸಿದರು.

## ಮಂಗನ ಕಾಟ ಜನ ಹೈರಾಣ

**ರಬಕವಿ-ಬನಹಟ್ಟಿ:** ಸಮೀಪದ ಆಸಂಗಿ ಗ್ರಾಮದಲ್ಲಿ ಕಳೆದೆರಡು ದಿನಗಳಿಂದ ಮಂಗವೊಂದು ಸಾರ್ವನಿಕರಿಗೆ ವಿಪರೀತ ಕಾಟ ನೀಡುತ್ತಿದ್ದು, ಅದರ ಕಡಿತದಿಂದ ಹಲವರು ಗಾಯಗೊಂಡಿದ್ದಾರೆ. ಮಂಗನ ಸೆರೆಗೆ ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಹರಸಾಪಟ್ಟರೂ ಫಲಕಾರಿಯಾಗಿಲ್ಲ.

ಮಂಗನ ಕಾಟದಿಂದ ಸಾರ್ವಜನಿಕರಿಗೆ ಬಹಳಷ್ಟು ತೊಂದರೆಯಾಗುತ್ತಿದ್ದು, ಕೂಡಲೇ ಅದನ್ನು ಸೆರೆ ಹಿಡಿಯಬೇಕೆಂದು ಸ್ಥಳೀಯರು ಆಗ್ರಹಿಸಿದರು.

ಆಸಂಗಿ ಗ್ರಾಮದ ಗಾಣಿಗೇರ ಓಣಿ, ಜ್ಯೋತಿಬಾ ದೇವಸ್ಥಾನ ರಸ್ತೆ ಸೇರಿದಂತೆ ಹಲವೆಡೆಯ ಚಿಕ್ಕ ಮಕ್ಕಳು, ಮಹಿಳೆಯರು, ವೃದ್ಧರಿಗೆ ಸೇರಿ 12 ಜನರಿಗೆ ಮಂಗ ಕಚ್ಚಿದೆಯೆಂದು ಸ್ಥಳೀಯರು ತಿಳಿಸಿದ್ದಾರೆ. **ಮನೆಯಲ್ಲಿ ಕುಳಿತ ಜನ:** ಗ್ರಾಮದ ಕೆಲ ಪ್ರದೇಶಗಳಲ್ಲಿ ಮಂಗನ ಕಾಟಕ್ಕೆ ಭಯಗೊಂಡು ಜನರು ಮನೆ ಬಾಗಿಲು ಮುಚ್ಚಿಕೊಂಡು ಒಳಗೇ ಕುಳಿತುಕೊಳ್ಳುವ ಪ್ರಸಂಗ ನಡೆದಿದ್ದರೆ, ಮಕ್ಕಳು, ಮಹಿಳೆಯರು ರಸ್ತೆಯ ಮೇಲೆ ಸಂಚರಿಸುವದೇ ದುಸ್ಥರವಾಗಿದೆ. ಗುರುವಾರ ಮಧ್ಯಾಹ್ನ ಹೊತ್ತು ಮಂಗನ ಹಿಡಿಯಲು ಬಲಿಯಿಟ್ಟರೂ ಸಿಗದೆ ಉಗ್ರವಾಗಿ ಅಲ್ಲಲ್ಲಿ ಸೇರುತ್ತಿದ್ದ ಜನರ ಮೇಲೆ ಎರಗಿದೆ. ಅರಣ್ಯ ಸಿಬ್ಬಂದಿಗಳು ಸ್ಥಳದಲ್ಲಿದ್ದರೂ ಏನು ಮಾಡಲು ಸಾಧ್ಯವಾಗದ ಕಾರಣ ಜಮಖಂಡಿಯಿಂದ ಮಂಗನ ಸೆರೆ ಹಿಡಿಯುವವರನ್ನು ಕರೆಸಲಾಗಿದ್ದು, ಎಲ್ಲ ವ್ಯವಸ್ಥೆ ಮಾಡಲಾಗಿದೆ ಎಂದು ಬನಹಟ್ಟಿ ಗಸ್ತು ಅಧಿಕಾರಿ ಮಹಾವೀರ ಆಲಗೂರ ತಿಳಿಸಿದರು.

### ಮುದ್ದೇಬಿಹಾಳ ತಾಲ್ಲೂಕು ಮಟ್ಟದ ಶಿಕ್ಷಕರ ದಿನೋತ್ಸವ

# ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು: ನಾಡಗೌಡ



**ಮುದ್ದೇಬಿಹಾಳ:** ಮಕ್ಕಳ ಉಜ್ವಲ ಭವಿಷ್ಯವನ್ನು ರೂಪಿಸುವಲ್ಲಿ ಶಿಕ್ಷಕರ ಪಾತ್ರ ಬಹಳೇ ಮಹತ್ವದ್ದಾಗಿದ್ದು ಕೇವಲ ಪಠ್ಯ ಪುಸ್ತಕಗಳ ಜ್ಞಾನವನ್ನು ಮಾತ್ರ ಕಲಿಸದೇ ಮಕ್ಕಳಲ್ಲಿ ಜೀವನದ ಮೌಲ್ಯಗಳನ್ನು ಹಾಗೂ ಕೌಶಲ್ಯಗಳನ್ನು ಮತ್ತು ಉತ್ತಮ ವ್ಯಕ್ತಿತ್ವವನ್ನು ಬೆಳೆಸಲು ಕಾರಣವಾಗುತ್ತಾರೆ ಎಂದು ಶಾಸಕ ಸಿ.ಎಸ್.ನಾಡಗೌಡ ಅವರು ಹೇಳಿದರು.

ಪಟ್ಟಣದ ಹುಡ್ಕೋದಲ್ಲಿರುವ ಟಾಪ್ ಇನ್ ಟೌನ್ ಫಂಕ್ಷನ್ ಹಾಲ್‌ನಲ್ಲಿ ಶುಕ್ರವಾರ ತಾಲ್ಲೂಕು ಆಡಳಿತದಿಂದ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದ ಅವರು ಶಿಕ್ಷಕರು ಮಕ್ಕಳ ಜೀವನದಲ್ಲಿ ಆಧಾರಸ್ತಂಭದಂತೆ ಕಾರ್ಯ ನಿರ್ವಹಿಸುತ್ತಾರೆ ಮಕ್ಕಳ ಸಾಮರ್ಥ್ಯವನ್ನು ಅರಳಿಸಿ ಆತ್ಮವಿಶ್ವಾಸವನ್ನು ಹೆಚ್ಚಿಸಿ ಉತ್ತಮವಾದಂತಹ ಭವಿಷ್ಯವನ್ನು ಕಟ್ಟಿಕೊಳ್ಳಲು ಸಹಾಯಮಾಡುವವರಾಗಿದ್ದಾರೆ ಶಿಕ್ಷಕರ ಪಾತ್ರ ವೃತ್ತಿಗಿಂತ ಹೆಚ್ಚಾಗಿ ಮಹತ್ತರವಾದಂತಹ ಸಾಮಾಜಿಕ ಜವಾಬ್ದಾರಿಯುತವಾದ ಕಾರ್ಯವಾಗಿದೆ ಆದರೆ ಈ ವರ್ಷದ ಎಸ್.ಎಸ್.ಎಲ್.ಸಿ,ಪಿಯುಸಿ ಪರೀಕ್ಷೆಯ ಪಾಸಿಂಗ್ ಶೇಕಡವಾರು ಫಲಿತಾಂಶ ಅತ್ಯಂತ ಕೆಳಮಟ್ಟಕ್ಕೆ ಕುಸಿತ ಕಂಡಿದೆ. ಕಾರಣ ಕೇಳಿದರೆ ಕಾಪಿ ಮಾಡದಂತೆ ವ್ಯವಸ್ಥೆ ಬಿಗಿಗೊಳಿಸಿದ್ದಾರೆ ಎಂದು ಹೇಳುತ್ತಿದ್ದಾರೆ. ಇಂತಹ ಮಾತುಗಳ ಮೂಲಕ ಮಕ್ಕಳ ಶೈಕ್ಷಣಿಕ ಜೀವನದ ಜೊತೆಗೆ ಚೆಲ್ಲಾಟ ಆಡಬೇಡಿ ಅವಿಭಜಿತ ವಿಜಯಪುರ ಜಿಲ್ಲೆ ಇದ್ದ ಸಮಯದಲ್ಲಿ ಪಿ.ಎಮ್.ನಾಡಗೌಡ ಮಂತ್ರಿ ಇದ್ದರು. ಆಗ ಉತ್ತರ ಕರ್ನಾಟಕ ಭಾಗದಲ್ಲಿ ಶೈಕ್ಷಣಿಕ ಕ್ರಾಂತಿಗೆ ಮುನ್ನುಡಿ ಬರೆದು ಸಾಕಷ್ಟು ಸಂಖ್ಯೆಯಲ್ಲಿ ಶಾಲೆಗಳನ್ನು ಮಂಜೂರಾತಿ ಮಾಡಿಸಿದ್ದರು. ಇಲ್ಲಿನ ಶಿಕ್ಷಕರ ಗುಣಮಟ್ಟಕ್ಕೆ ವಿಜಯಪುರ ಹೆಸರುವಾಸಿಯಾಗಿದೆ. ಆದರೆ ಫಲಿತಾಂಶ ಕುಸಿತ ಕಂಡಿರುವುದು ಬೇಸರದ ಸಂಗತಿಯಾಗಿದ್ದು ಬರಲಿರುವ ದಿನಗಳಲ್ಲಿ ಫಲಿತಾಂಶ ಸುಧಾರಣೆ ಕಾಣಬೇಕು ಎಂದರು.

ಶಿಕ್ಷಕರ ಸಂಘಟನೆಗಳಲ್ಲಿ ಕಾರ್ಯನಿರ್ವಹಿಸುವವರು ಬಸ್ ನಿಲ್ದಾಣ, ಅಲ್ಲಿ ಇಲ್ಲಿ ನಿಲ್ಲದೇ ಶಾಲೆಗೆ ಹೋಗಿ ಮಕ್ಕಳಿಗೆ ಪಾಠ ಮಾಡಬೇಕು. ಎಸ್ಡಿಎಂಸಿ ಪದಾಧಿಕಾರಿಗಳ ರಚನೆಯ ಸಮಯದಲ್ಲಿ ರಾಜಕಾರಣಕ್ಕೆ ಆಸ್ಪದ ನೀಡಬಾರದು. ತಾಲ್ಲೂಕಿನಲ್ಲಿ ಗುರುಭವನ ಕಟ್ಟಿಸಲು ಅನುದಾನ ಒದಗಿಸುವುದಾಗಿ ಭರವಸೆ ನೀಡಿದರು.

ಮಡಿಕೇಶ್ವರ ಬಿ.ಜಿ.ತುಂಬಗಿ ಸರ್ಕಾರಿ ಪ್ರೌಢಶಾಲೆಯ ಸಹ ಶಿಕ್ಷಕ ಬಿ.ಎಸ್.ಹಂಚಲಿ ಮಾತನಾಡಿ , ಪಾಲಕರು,ಮಕ್ಕಳು ರ್‍ಯಾಂಕ್, ಮಾರ್ಕ್ಸ್‌ಗಳ ಹಿಂದೆ ಬೆನ್ನತ್ತಿರುವುದರಿಂದ ವಿದ್ಯಾರ್ಥಿಗಳಲ್ಲಿ ಮೌಲ್ಯಗಳ ಅಧಃಪತನ ಕಂಡು ಬರುತ್ತಿದೆ.ಸಮಾಜದಲ್ಲಿ ಅನಕ್ಷರಸ್ಥರಿಗಿಂತ ಅಕ್ಷರಸ್ಥರಿಂದಲೇ ದೇಶಕ್ಕೆ ಹಾನಿಯಾಗುತ್ತಿದೆ.ಲಂಚಬಾಕತನ, ನೈತಿಕತೆಯ ಅಧಃಪತನದಿಂದ ಶೈಕ್ಷಣಿಕ ವ್ಯವಸ್ಥೆ ಲಯ ಕಳೆದುಕೊಳ್ಳುತ್ತಿದ್ದು ಇದನ್ನು ಸರಿದಾರಿಗೆ ತರಬೇಕಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ ಮಾತನಾಡಿದರು. ಈ ಸಮಯದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಚ್.ಮುದ್ನೂರ,ತಾಪಂ ಇಒ ವೆಂಕಟೇಶ ವಂದಾಲ, ತಾಳಿಕೋಟಿ ತಹಸೀಲ್ದಾರ್ ವಿನಯಾ ಹೂಗಾರ,ಬಿಆರ್‌ಸಿ ಯು.ಬಿ.ಧರಿಕಾರ, ವಿವಿಧ ಶಿಕ್ಷಕರ ಸಂಘಟನೆಯ ಪದಾಧಿಕಾರಿಗಳು ಉಪಸ್ತಿತರಿದ್ದರು.

ಇದೇ ಸಮಯದಲ್ಲಿ ವಿವಿಧ ಶಾಲೆಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಶಿಕ್ಷಕರನ್ನು, ಮರಣ ಹೊಂದಿದ ಶಿಕ್ಷಕರ ಕುಟುಂಬ ವರ್ಗದವರನ್ನು ಸನ್ಮಾನಿಸಲಾಯಿತು.

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಸಾಧನೆ ತೋರಿದ ಮುದ್ದೇಬಿಹಾಳ ಶೈಕ್ಷಣಿಕ ವಲಯದ ಮೂವರು ವಿದ್ಯಾರ್ಥಿಗಳಿಗೆ ಲ್ಯಾಪಟಾಪ್ ವಿತರಿಸಲಾಯಿತು . ಸಂಗಮೇಶ ಶಿವಣಗಿ ಸಂಗಡಿಗರು ನಾಡಗೀತೆ ಹಾಡಿದರು. ಸಿದ್ದನಗೌಡ ಬಿಜ್ಜೂರ, ಗುಂಡು ಚವ್ಹಾಣ ನಿರೂಪಿಸಿದರು. ಎಂ.ಕೆ.ಬಾಗವಾನ ವಂದಿಸಿದರು.

## ಸಂಭ್ರಮದ ಈದ್-ಮಿಲಾದ್ ಆಚರಣೆ



**ಜಮಖಂಡಿ:** ನಗರದಲ್ಲಿ ಶುಕ್ರವಾರ ಸಿರಾಜ ಕಮೀಟಿ ಹಮ್ಮಿಕೊಂಡಿದ್ದ ಪ್ರವಾದಿ ಮೊಹಮದ್ ಪೈಗಂಬರರ 1500ನೇ ಜನ್ಮ ದಿನಾಚರಣೆ ಮತ್ತು ಈದ್ ಮಿಲಾದ್ ಮೆರವಣಿಗೆ ಸಂಭ್ರಮದಿಂದ ಆಚರಿಸಲಾಯಿತು.

ನಗರದ ಶಾಲಂಗೇಟ್ ಹತ್ತಿರ ಪೈಗಂಬರರ 1500ನೇ ಜನ್ಮ ದಿನಾಚರಣೆ ಮತ್ತು ಈದ್ ಮಿಲಾದ್ ಮೆರವಣಿಗೆಗೆ ಮಾಜಿ ಶಾಸಕ ಆನಂದ ನ್ಯಾಮಗೌಡ ಚಾಲನೆ ನೀಡಿದರು. ನಗರದ ಶಾಲಂಗೇಟದಿಂದ ಆರಂಭಗೊಂಡ ಬೃಹತ್ ಮೆರವಣಿಗೆ ನಗರದ ಹನುಮಾನ ಚೌಕ, ಪೋಸ್ಟ ಚೌಕ, ಥೇಟರ ರಸ್ತೆ, ಅಶೋಕ ವೃತ್ತ, ಡಾ.ರಾಜಕುಮಾರ ರಸ್ತೆ ಮೂಲಕ ಮಡ್ಡಿ ಈಗ್ದಾ ತಲುಪಿತು.

ಬೃಹತ್ ಮೆರವಣಿಗೆಯಲ್ಲಿ ಮೌಲಾನಾ ಜುನೇದ, ಮೌಲಾನಾ ಅಬು ಸಾಲಿಯಾನ, ಸಿರಿಯತ್ ಕಮೀಟಿ ಅಧ್ಯಕ್ಷ ಕುತಬುದ್ದೀನ ಬಿಜಾಪೂರ, ನಗರಸಭೆ ಅಧ್ಯಕ್ಷ ಈಶ್ವರ ವಾಳೆನ್ನವರ, ನಗರ ಪ್ರಾಧಿಕಾರ ಅಧ್ಯಕ್ಷ ಅನ್ವರ ಮೋಮಿನ, ನಜೀರ ಕಂಗನೊಳ್ಳಿ, ಸುಶೀಲಕುಮಾರ ಬೆಳಗಲಿ, ರಫೀಕ ಬಾರಿಗಡ್ಡಿ, ಮಾಮೂನ ಪಾರತನಳ್ಳಿ, ಕಾಶೀಂ ಅವಟಿ, ದಿಲಾವರ ಶಿರೋಳ, ಅಜೀಮ ಅವಟಿ, ಸಲೀಂ ಮುಧೋಳ, ತೌಫೀಕ ಪಾರತನಳ್ಳಿ, ಮುಬಾರಕ ಅಪರಾಧ, ಮಹಮ್ಮದ ಮುಲ್ಲಾ, ಡಿ.ವೈ.ಎಸ್.ಪಿ.ರೋಷನ ಜಮೀರ, ಸಿಪಿಐ ಮಲ್ಲಪ್ಪ ಮಡ್ಡಿ, ಪಿಎಸ್.ಐ ಅನಿಲ ಕುಂಬಾರ ಸಹಿತ ಹಲವರು ಇದ್ದರು

### ಹನಿ ನೀರಾವರಿ ಸಲಕರಣೆ ಸೌಲಭ್ಯ

## ಮಧ್ಯವರ್ತಿಗಳಿಂದ ಮೋಸ ಹೋಗದಂತೆ ಎಚ್ಚರಿಕೆ

**ಕೊಪ್ಪಳ:** ಕನಕಗಿರಿ, ಕಾರಟಗಿ ಮತ್ತು ಗಂಗಾವತಿ ತಾಲ್ಲೂಕಿನಲ್ಲಿ ರೈತರಿಗೆ ಕೆಲ ಮಧ್ಯವರ್ತಿಗಳು ತೋಟಗಾರಿಕೆ ಇಲಾಖೆಯ ಹಾಗೂ ಕೆಲವೊಂದು ಕಂಪನಿಗಳ ಹೆಸರು ಹೇಳಿಕೊಂಡು ಪಿಎಂಕೆಎಸ್‌ವೈ ಯೋಜನೆಯಡಿ ಹನಿ ನೀರಾವರಿ ಸಲಕರಣೆಗಳನ್ನು ಕೊಡಿಸುವುದಾಗಿ ತಮಗೆ ತಿಳಿದಂತೆ ಸುಳ್ಳು ಹೇಳಿ ರೈತರಿಂದ ಹಣ ವಸೂಲಿ ಮಾಡಿ ರೈತರಿಗೆ ಮೋಸ ಮಾಡುತ್ತಿರುವುದು ತಿಳಿದು ಬಂದಿರುತ್ತದೆ.

ಆದ್ದರಿಂದ ರೈತರು ಮಧ್ಯವರ್ತಿಗಳಿಂದ ಮೋಸ ಹೋಗದೆ, ನೇರವಾಗಿ ತೋಟಗಾರಿಕೆ ಇಲಾಖೆ ಗಂಗಾವತಿ ಕಛೇರಿ ಅಥವಾ ಸಂಬಂಧಿಸಿದ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಭೇಟಿ ಮಾಡಿ ಸಂಪೂರ್ಣ ಮಾಹಿತಿ ಪಡೆದುಕೊಳ್ಳಬೇಕು. ತೋಟಗಾರಿಕೆ ಇಲಾಖೆಯಿಂದ ರೈತರಿಗೆ ತೋಟಗಾರಿಕೆ ಬೆಳೆಗಳಿಗೆ ಪಿಎಂಕೆಎಸ್‌ವೈ ಯೋಜನೆಯಡಿ ತಮ್ಮ ಹೊಲದಲ್ಲಿ ಹನಿ ನೀರಾವರಿ ಅಳವಡಿಸಿಕೊಂಡು ಸಹಾಯಧನ ಪಡೆಯಲು ಅವಕಾಶವಿರುತ್ತದೆ. ರೈತರು ಯಾವುದೇ ಮಧ್ಯವರ್ತಿಗಳ ಬಳಿ ತೆರಳದೇ ನೇರವಾಗಿ ತೋಟಗಾರಿಕೆ ಇಲಾಖೆಯಲ್ಲಿ ಅರ್ಜಿ ಸಲ್ಲಿಸಿ, ಸರ್ಕಾರದಿಂದ ಅಧಿಕೃತವಾಗಿ ಅನುಮೋದನೆಗೊಂಡ ತಮ್ಮ ಇಚ್ಛೆಯ ಕಂಪನಿಗಳನ್ನು ಆಯ್ಕೆ ಮಾಡಿಕೊಂಡು ತಾವು ಬೆಳೆಯುವ ತೋಟಗಾರಿಕೆ ಬೆಳೆಗಳಾದ ತರಕಾರಿ, ಹಣ್ಣು, ಹೂವು ಹಾಗೂ ಇತರೆ ತೋಟಗಾರಿಕೆ ಬೆಳೆಗಳಿಗೆ ಬೆಳೆಯುವ ವಿಸ್ತೀರ್ಣ ಹಾಗೂ ಬೆಳೆಗಳ ಅಂತರ ತಿಳಿಸಿ ಬೆಳೆಗೆ ಸಂಬಂಧಿಸಿದ ಹನಿ ನೀರಾವರಿ ಘಟಕದ ವೆಚ್ಚ ಹಾಗೂ ವಂತಿಕೆಯನ್ನು ಪಾವತಿಸುವ ಬಗ್ಗೆ ಅಳವಡಿಸುವ ಕಂಪನಿಯಿಂದ ಕೊಟೇಷನ್ ಪಡೆದು ದಾಖಲಾತಿಗಳನ್ನು ಕಂಪನಿಗೆ ಸಲ್ಲಿಸಿ, ನಂತರ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿ ಯೋಜನೆಯ ಸದುಪಯೋಗಪಡಿಸಿಕೊಳ್ಳಬೇಕು. ಯಾವುದೇ ಮಧ್ಯವರ್ತಿಗಳು ಮೋಸ ಮಾಡುವುದು ಕಂಡುಬಂದಲ್ಲಿ ನೇರವಾಗಿ ತೋಟಗಾರಿಕೆ ಇಲಾಖೆಗೆ ತಿಳಿಸಬೇಕು ಎಂದು ಗಂಗಾವತಿ, ಕನಕಗಿರಿ ಮತ್ತು ಕಾರಟಗಿಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು(ಜಿಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲೂಕು ಮಟ್ಟದ ಗ್ಯಾರಂಟಿ ಸಭೆ

**ಗದಗ:** ಗದಗ ತಾಲೂಕು ಮಟ್ಟದ ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಸಭೆಯನ್ನು ಸೆಪ್ಟೆಂಬರ್ 15 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ವಿ.ಸಿ. ಹಾಲ್ ನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿಕ್ಷಕರ ದಿನಾಚರಣೆ : ಉತ್ತಮ ಶಿಕ್ಷಕರಿಗೆ ಜಿಲ್ಲಾ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಸಚಿವ ಆರ್. ಬಿ. ತಿಮ್ಮಾಪುರ ಅಭಿಪ್ರಾಯ

# ಗೌರವ ನೀಡುವಂತ ಮೌಲ್ಯಾಧಾರಿತ ಶಿಕ್ಷಣ ಅವಶ್ಯ



**ಬಾಗಲಕೋಟೆ:** ಶಿಕ್ಷಣದ ಜೊತೆಗೆ ತಂದೆ, ತಾಯಿ, ಗುರುಗಳು, ಹಿರಿಯರು ಸರಿ, ತಪ್ಪು, ನ್ಯಾಯ ನೀತಿಗಳಿಗೆ ಗೌರವ ನೀಡುವಂತಹ ಮೌಲ್ಯಾಧಾರಿತ ಶಿಕ್ಷಣದ ಅವಶ್ಯಕತೆ ಇದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನವನಗರದ ಕಲಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಉಪನಿರ್ದೇಶಕರ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಾಲಾ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಕಳೆದ 15-20 ವರ್ಷಗಳಲ್ಲಿ ನಾವು ಕಂಡು ಅರಿಯದ ರೀತಿಯಲ್ಲಿ ಬದಲಾವಣೆ ಕಾಣುತ್ತಿದ್ದೇವೆ. ಸರಕಾರಿ ಶಾಲೆ ಹಾಗೂ ಖಾಸಗಿ ಶಾಲೆಗಳ ನಡುವೆ ಇಂದಿನ ಆನ್‌ಲೈನ್ ಪಾಠದ ಗುರು ಇಂದಿನ ವೈಜ್ಞಾನಿಕ ಯುಗದಲ್ಲಿ ದೊಡ್ಡ ಗುರುಗಳಾಗಿ ಪರಿಣಮಿಸಿದ್ದಾರೆ. ಗುರು-ಶಿಷ್ಯರ ಸಂಬಂದ ಕಡಿಮೆಯಾಗುತ್ತಿರುವುದು ಕಳವಳಕಾರಿ ಸಂಗತಿ ಎಂದರು.

ಮೊಬೈಲ್ ಸೇರಿದಂತೆ ಆಧುನಿಕ ತಂತ್ರಜ್ಞಾನ ಮಾಹಿತಿಯುಳ್ಳ ಇಂದಿನ ಮಕ್ಕಳು ಶಿಕ್ಷಕರನ್ನೇ ಮೂಖರನ್ನಾಗುವಂತೆ ಪ್ರಶ್ನೆಗಳನ್ನು ಕೇಳುತ್ತಿರುವುದರಿಂದ ಶಿಕ್ಷಕರು ಇಂದಿನ ಮಕ್ಕಳಿಗೆ ಬೇಕಾಗುವಂತಹ ವಿಷಯಗಳ ಬಗ್ಗೆ ಅಧ್ಯಯನ ಮಾಡಬೇಕಾದ ಕಾಲ ಬಂದಿದೆ. ಶಿಕ್ಷಕರು ಪ್ರತಿನಿತ್ಯ ಕಲಿತು ಮಕ್ಕಳ ಜೊತೆ ಮಕ್ಕಳಾಗಿ ಬೋಧಿಸಬೇಕಾಗಿದೆ. ಗುರು-ಶಿಷ್ಯರ ಸಂಬಂದ ತಂದೆ-ತಾಯಿ ಸಂಬಂಧಕ್ಕಿಂತ ಹೆಚ್ಚು ಪರಿಣಾಮಕಾರಿಯಾಗಿದೆ. ವಿದ್ಯಾರ್ಥಿಗಳು ಕೇವಲ ಹೆಚ್ಚು ಅಂಕ ಪಡೆಯುವದರಿಂದ ಎಲ್ಲವನ್ನು ಕಲಿಯಲು ಸಾಧ್ಯವಿಲ್ಲ. ಮುಂದಿನ ಪೀಳಿಗೆ ಉತ್ತಮವಾಗಿರಬೇಕಾದರೆ ಮೌಲ್ಯಾಧಾರಿತ ಶಿಕ್ಷಣದ ಅವಶ್ಯಕತೆ ಇದೆ ಎಂದು ತಿಳಿಸಿದರು.

ಸಂಸದ ಪಿ.ಸಿ.ಗದ್ದಿಗೌಡ ಮಾತನಾಡಿ ಅಕ್ಷರ ಜ್ಞಾನದ ಜೊತೆಗೆ ಮಾನವೀಯ ಮೌಲ್ಯವನ್ನು ಕೊಟ್ಟು ಬದುಕನ್ನು ರೂಪಿಸಿಕೊಟ್ಟ ಶಿಕ್ಷಕರನ್ನು ನೆನಪಿಸಿಕೊಳ್ಳುವ ಮಹತ್ವದ ದಿನವಾಗಿದೆ. ಮಕ್ಕಳಿಗೆ ಪಠ್ಯದ ಜೊತೆಗೆ ಕೌಶಲ್ಯಾಭಿವೃದ್ದಿ ಯಂತಹ ಶಿಕ್ಷಣ ನೀಡಿದಲ್ಲಿ ಕಲಿತ ವಿದ್ಯೆಯಿಂದ ಸ್ವಯಂ ಉದ್ಯೋಗ ಪ್ರಾರಂಭಿಸಿ ಆರ್ಥಿಕ, ಸಾಮಾಜಿಕ ಬೆಳವಣಿಗೆ ಹೊಂದಲು ಸಾಧ್ಯವಾಗುತ್ತದೆ. ಗುರುಭವನ ನಿರ್ಮಾಣಕ್ಕೆ ಅನುಧಾನ ನೀಡುವುದಾಗಿ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್. ಮೇಟಿ ಮಾತನಾಡಿ ಶಿಕ್ಷಕರ ವೃತ್ತಿ ಪವಿತ್ರವಾಗಿದ್ದು, ಪ್ರತಿಯೊಬ್ಬ ಶಿಕ್ಷಕ ತಾನು ಶಿಕ್ಷಣ ನೀಡಿದ ವಿದ್ಯಾರ್ಥಿ ಸಮಾಜದಲ್ಲಿ ಒಳ್ಳೆಯ ಕೆಲಸ ಮತ್ತು ಕೆಟ್ಟ ಕೆಲಸ ಮಾಡಿದರೂ ಶಿಕ್ಷಕರ ಮೇಲೆ ಬರುತ್ತದೆ. ಈ ನಿಟ್ಟಿನಲ್ಲಿ ಶಿಕ್ಷಕರು ಜಾಗೃತಿಯಿಂದ ಕೆಲಸ ಮಾಡಬೇಕು ಎಂದರು. ನವನಗರದಲ್ಲಿ ನಿರ್ಮಿಸಲು ಉದ್ದೇಶಿಸಲಾದ ಗುರುಭವನಕ್ಕೆ ಅನುದಾನ ನೀಡುವ ಭರವಸೆ ನೀಡಿದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಶಿಕ್ಷಕರನ್ನು ದೇವರ ಸಮಾನರಾಗಿ ಕಾಣಲಾಗುತ್ತಿದ್ದು, ಅದರಿಂದಲೇ ಗುರುಬ್ರಹ್ಮ ಗುರುವಿಷ್ಣು ಗುರುದೇವೋ ಮಹೇಶ್ವರ, ಗುರುಸಾಕ್ಷಾತ್ ಪರಬ್ರಹ್ಮ ಎಂಬ ನುಡಿ ಅನಾದಿಕಾಲದಿಂದಲೂ ಬಂದಿದೆ. ಶಿಕ್ಷಕರಾದವರು ಮಕ್ಕಳ ಜೊತೆ ಪ್ರೀತಿಯಿಂದ ನಡೆದುಕೊಳ್ಳಬೇಕು. ಅಂದಾಗ ಮಾತ್ರ ಮಗುವಿನಲ್ಲಿರುವ ಮನಸ್ಸನ್ನು ಗೆಲ್ಲಲು ಸಾಧ್ಯವಾಗುತ್ತದೆ. ಇದರಿಂದ ವಿದ್ಯಾರ್ಥಿಗಳಲ್ಲಿ ಕಾಣಬಹುದಾದ ಮನೋಕಾಯಿಲೆಯಿಂದ ಮುಕ್ತಗೊಳಿಸಲು ಸಾಧ್ಯವಾಗುತ್ತದೆ ಎಂದರು.

ಪ್ರಾರಂಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಜಿ.ಜಿ.ಹಿರೇಮಠ ಶಿಕ್ಷಕ ದಿನಾಚರಣೆ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕನ್ನವರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಪಗಾವಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಸೇರಿದಂತೆ ವಿವಿಧ ಶಿಕ್ಷಕರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.



## ಉತ್ತಮ ಶಿಕ್ಷಕರಿಗೆ ಜಿಲ್ಲಾ ಪ್ರಶಸ್ತಿ

ಜಿಲ್ಲೆಯಲ್ಲಿ ಆಯ್ಕೆಗೊಂಡ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಉತ್ತಮ ಶಿಕ್ಷಕರನ್ನು ಸನ್ಮಾನಿಸಲಾಯಿತು. ಪ್ರಾಥಮಿಕ ವಿಭಾಗದಲ್ಲಿ ಬಿ.ಎ.ಚನ್ನಪ್ಪಗೌಡರ, ಎಂ.ಜಿ.ಸಂಕಾನಟ್ಟಿ, ಎಲ್.ಆಯ್.ಲಮಾಣಿ, ಎಸ್.ಎಸ್.ಬಡಿಗೇರ, ಬಸವರಾಜ ಬಿರಾದಾರ, ವಿ.ಎಸ್.ಕಲ್ಯಾಣಮಠ, ಮಂಜುಶ್ರೀ ಮಣಿ, ಆರ್.ಎಲ್.ಇನಾಮದಾರ, ವಿ.ಎಸ್.ಹಲಕುರ್ಕಿ, ಎನ್.ಬಿ.ಜಮಖಂಡಿ, ರಮೇಶ ಕಂಕಣವಾಡಿ, ಮಂಜುನಾಥ ಅಮೋಜಿ, ಪ್ರೌಢವಿಭಾಗದಲ್ಲಿ ಸಿ.ಎಚ್.ನರಸಾಪೂರ, ಐ.ಎಂ.ಉಜನಿ, ಮಹೇಶ ಸಿಂದಗಿ, ಬಿ.ಡಿ.ಚಿತ್ತರಗಿ, ಎಂ.ವಾಯ್.ಸೊಡ್ಡಿ, ಮಹಮ್ಮದರಫಿಕ್ ನದಾಫ್, ಜಿಲ್ಲಾ ಪಂಚಾಯತಯಿಂದ ಆಯ್ಕೆಯಾದ ಪ್ರಾಥಮಿಕ ವಿಭಾಗದಲ್ಲಿ ಭೀಮಮ್ಮ ದೇವದುರ್ಗ, ಎನ್.ವಾಯ್.ಮುಲ್ಲಾ, ಪಿ.ಎಚ್. ಇನಾಮದಾರ, ಎಂ.ವಾಯ್.ಗುಡಿಮನಿ, ಎನ್.ಎಂ.ಬೀಳಗಿ, ಜೆ.ಎಚ್. ಡಾಲಾಯತ, ಜೆ.ಎಸ್.ಗಳವೆ. ಪ್ರೌಢ ವಿಭಾಗದಿಂದ ಎಚ್.ಎ.ಸೌದಾಗರ, ಲಕ್ಷ್ಮಣ ಚನ್ನಾಪೂರ, ಶಿವಾನಂದ ಪದರಾ, ವಿಶೇಷ ಸತ್ಕಾರದಲ್ಲಿ ವಿದ್ಯಾಧರ ಹಿರೇಮಠ, ಎಂ.ಎಸ್.ಅರಳಿಮಟ್ಟಿ.

## ಸಂಗೊಳ್ಳಿ ರಾಯಣ್ಣ ಕಾಲೇಜಿಗೆ ಧ್ಯಾನಚಂದ್ ಪ್ರಶಸ್ತಿ



**ಬೆಳಗಾವಿ:** ಬೆಳಗಾವಿಯ ನಗರದ ಲೀಲೆ ಆಟದ ಮೈದಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಹಾಕಿ ಬೆಳಗಾವಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ನಿಮಿತ್ತ ಮೇಜರ್ ಧ್ಯಾನ್ ಚಂದ್ ಟ್ರೋಫಿಯನ್ನು ಆಯೋಜಿಸಲಾಗಿತ್ತು.

ಬೆಳಗಾವಿಯ ವಿವಿಧ ಕಾಲೇಜುಗಳಿಂದ ಒಟ್ಟು ಐದು ತಂಡಗಳು ಪಾಲ್ಗೊಂಡಿದ್ದವು. ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ತಂಡವು ವಿದ್ಯಾರ್ಥಿ ಅಭಿಷೇಕ ಕೊಂಕಣಿ ಅವರ ನೇತೃತ್ವದಲ್ಲಿ ಪಾಲ್ಗೊಂಡು ಅಂತಿಮ ಹಣಾಹಣಿಯಲ್ಲಿ ಪ್ರಶಸ್ತಿಯನ್ನು ಗೆದ್ದು ಮುಡಿಗೇರಿಸಿಕೊಂಡರು. ಮಹಾವಿದ್ಯಾಲಯದ ಪ್ರಾಚಾರ್ಯರಾದ ಪ್ರೊ. ಎಸ್. ಸಿ. ಪಾಟೀಲ್ ಅವರು ವಿದ್ಯಾರ್ಥಿಗಳ ಈ ಅಮೋಘ ಸಾಧನೆಯನ್ನು ಪ್ರಶಂಸಿಸಿದರು. ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ವಿಶಿಷ್ಟ ಸಾಧನೆಯನ್ನು ಮಾಡುವುದರ ಮೂಲಕ ಮಹಾವಿದ್ಯಾಲಯದ ಗೌರವವನ್ನು ಹೆಚ್ಚಿಸುತ್ತಿದ್ದಾರೆ ಎಂದು ವಿದ್ಯಾರ್ಥಿಗಳ ಸಾಧನೆಯನ್ನು ಸಂತಸ ವ್ಯಕ್ತಪಡಿಸಿದರು.

ದೈಹಿಕ ಶಿಕ್ಷಣ ನಿರ್ದೇಶಕಿ ಕರುಣಾ ಅಮ್ಮುಸ್ಕರ್, ತರಬೇತುದಾರ ಡಾ. ಗಿರಿಜಾಶಂಕರ ಮಾನೆ ಹಾಗೂ ಶಿಕ್ಷಕರು ವಿದ್ಯಾರ್ಥಿಗಳನ್ನು ಅಭಿನಂದಿಸಿದರು

## ಗೌರವ ಆಧಾರದ ನೇಮಕಾತಿಗೆ ಅರ್ಜಿ ಆಹ್ವಾನ

**ಹಾವೇರಿ:** ಜಿಲ್ಲೆಯ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಹಿರೇಕೆರೂರು, ರಟ್ಟಿಹಳ್ಳಿ, ರಾಣೇಬೆನ್ನೂರ ಹಾಗೂ ಸವಣೂರು, ಹಾನಗಲ್, ಬ್ಯಾಡಗಿ ಶಿಗ್ಗಾಂವ ತಾಲೂಕಿನ ಗ್ರಾಮ ಪಂಚಾಯತಿಗಳಲ್ಲಿ ವಿ.ಆರ್.ಡಬ್ಲ್ಯೂ ಹಾಗೂ ಪಟ್ಟಣ ಪಂಚಾಯತಿಯಲ್ಲಿ ಯು.ಆರ್. ಡಬ್ಲ್ಯೂ ಹುದ್ದೆ ನೇಮಕಾತಿಗೆ ವಿಕಲಚೇತನರಿಂದ ಗೌರವಧನ ಆಧಾರದ ಮೇಲೆ ವಿ.ಆರ್.ಡಬ್ಲ್ಯೂ, ಮತ್ತು ಯು.ಆರ್.ಡಬ್ಲ್ಯೂ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಹಿರೇಕೆರೂರು ಪಟ್ಟಣ ಪಂಚಾಯತಿ, ರಟ್ಟಿಹಳ್ಳಿ ತಾ.ಚಿಕ್ಕಯಡಚಿ, ಮಕರಿ, ರಾಣೇಬೆನ್ನೂರ ತಾ.ಕವಲೆತ್ತು, ಸವಣೂರ ತಾ.ತೊಂಡೂರು, ಹಾನಗಲ್ ತಾ.ಸಾಂವಸಗಿ, ಬ್ಯಾಡಗಿ ತಾ.ಶಿಡೇನೂರ ಹಾಗೂ ಶಿಗ್ಗಾಂವ ತಾ.ಹಳೆ ಬಂಕಾಪೂರ ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಿದೆ.

ಎಸ್.ಎಸ್.ಎಲ್.ಸಿ. ಪಾಸಾದ ವಿಕಲಚೇತನರು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಭಾಗಶಃ ದೃಷ್ಟಿ ದೋಷವುಳ್ಳವರು, ಭಾಗಶಃ ಶ್ರವಣದೋಷವುಳ್ಳವರು ಮತ್ತು ದೈಹಿಕ ವಿಕಲಚೇತನರು ಮಾತ್ರ ಈ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲು ಅರ್ಹರಿರುತ್ತಾರೆ. ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಸಲ್ಲಿಸುವವರು ಕಡ್ಡಾಯವಾಗಿ ಆಯಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಸಿಸುತ್ತಿರಬೇಕು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವೈದ್ಯಕೀಯ ಮಂಡಳಿಯಿಂದ ನೀಡಿರುವ ವಿಕಲಚೇತನರ ವಿಶಿಷ್ಟ ಗುರುತಿನ ಚೀಟಿಯನ್ನು (UDID) ಹಾಗೂ ವೈದ್ಯಕೀಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಹೊಂದಿರಬೇಕು. 18 ರಿಂದ 45 ವರ್ಷದೊಳಗಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು.

## ಮಹಾಗಣಪತಿ ಯಶಸ್ಸಿನ ಪಾಲುದಾರರಿಗೆ ಸನ್ಮಾನ



**ಮುದ್ದೇಬಿಹಾಳ:** ಪಟ್ಟಣದ ಸೈನಿಕ ಮೈದಾನದಲ್ಲಿ ಪ್ರಥಮ ಬಾರಿಗೆ ಪ್ರತಿಷ್ಠಾಪಿಸಲಾಗಿದ್ದ ಹಿಂದೂಮಹಾಗಣಪತಿ ವಿಸರ್ಜನೆಯ ದಿನವಾದ ಮಂಗಳವಾರ ರಾತ್ರಿ ಬಸವೇಶ್ವರ ವೃತ್ತದಲ್ಲಿ ಯಶಸ್ಸಿಗೆ ಪಾತ್ರರಾದ ಮತ್ತು ಪಾಲುದಾರರಾದ ಗಣ್ಯರನ್ನು, ಅಧಿಕಾರಿಗಳನ್ನು, ಮಂಡಳಿಯವರನ್ನು ಸನ್ಮಾನಿಸುವ ಸಮಾರಂಭ ಏರ್ಪಡಿಸಲಾಗಿತ್ತು.

ಹಿಂದೂ ಮಹಾಗಣಪತಿ ಮಂಡಳಿಯ ಪ್ರಥಮ ಅಧ್ಯಕ್ಷ ವೆಂಕನಗೌಡ ಪಾಟೀಲ, ಉಪಾಧ್ಯಕ್ಷ, ನಿವೃತ್ತ ಎಂಜಿನಿಯರ್, ಜೆಡಿಎಸ್ ಹಿರಿಯ ಮುಖಂಡ ಬಸನಗೌಡ.ಬಿ.ಪಾಟೀಲ (ಮುರಾಳ), ಭದ್ರತೆ ಅಚ್ಚುಕಟ್ಟಾಗಿ ನಿರ್ವಹಿಸಿದ ಪೊಲೀಸ್ ಇಲಾಖೆ ಪ್ರತಿನಿಧಿಯಾಗಿ ಪಿಎಸ್ಐ ಸಂಜಯ್ ತಿಪ್ಪರಡ್ಡಿ, ಸ್ವಚ್ಛತೆಗೆ ಆದ್ಯತೆ ನೀಡಿದ ಪುರಸಭೆ ಪ್ರತಿನಿಧಿಯಾಗಿ ಆರೋಗ್ಯ ನಿರೀಕ್ಷಕ ಮಹಾಂತೇಶ ಕಟ್ಟಿಮನಿ, ಊರಿನ ಗೌಡರ ಕುಟುಂಬದ ವಿ.ಬಿ.ಪಾಟೀಲ (ಪುಟ್ಟು), ಎಲ್ಲಾ ಗಣೇಶೋತ್ಸವ ಮಂಡಳಿಗಳ ಅಧ್ಯಕ್ಷರು ಸೇರಿ ಹಲವರನ್ನು ಸನ್ಮಾನಿಸಲಾಯಿತು.

### ತಾಲೂಕಾಡಳಿತ ವಾಸ್ತವ ಸಮೀಕ್ಷೆ ನಡೆಸಿ ನೊಂದ ರೈತರಿಗೆ ಪರಿಹಾರ ನೀಡುವಂತೆ ಆಗ್ರಹ

# ರೈತರ ನೆರವಿಗೆ ಬರುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ

**ಮುದ್ದೇಬಿಹಾಳ:** ತಾಲೂಕಿನಾದ್ಯಂತ ನಿರಂತರ ಮಳೆ ಆಗುತ್ತಿರುವುದರಿಂದ ರೈತರು ಶ್ರಮಪಟ್ಟು ಬಿತ್ತಿರುವ ತೊಗರಿ, ಈರುಳ್ಳಿ, ಸೂರ್ಯಕಾಂತಿ, ಹೆಸರು ಇನ್ನಿತರ ಮುಂಗಾರು ಬೆಳೆಗಳು ಹಾಳಾಗಿದೆ. ಇದರಿಂದಾಗಿ ರೈತರ ಬಾಳು ನೀರಲ್ಲಿ ಕೊಚ್ಚಿಕೊಂಡು ಹೋಗುವಂತಾಗಿದೆ. ಕೂಡಲೇ ತಾಲೂಕಾಡಳಿತ ವಾಸ್ತವ ಸಮೀಕ್ಷೆ ನಡೆಸಿ ನೊಂದ ರೈತರಿಗೆ ನೆರವಾಗಲು ತಕ್ಷಣವೇ ಸರ್ಕಾರದಿಂದ ಪ್ರತಿ ಎಕರೆಗೆ ಕನಿಷ್ಠ 25000 ರೂ ಬಿಡುಗಡೆಗೊಳಿಸಬೇಕು ಪರಿಹಾರ ಪದಾಧಿಕಾರಿಗಳು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಗುರುವಾರ ತಹಶೀಲ್ದಾರ್ ಕೀರ್ತಿ ಚಾಲಕ್ ಅವರಿಗೆ ಮನವಿ ಸಲ್ಲಿಸಿದರು.

ರಾಜ್ಯ ರೈತ ಸಂಘ ಹಸಿರು ಸೇನೆಯ ಸಂಘದ ಕಾರ್ಯಾಧ್ಯಕ್ಷೆ, ನೀರಾವರಿ ಹೋರಾಟ ಬಸನಗೌಡ.ಬಿ.ಪಾಟೀಲ (ಮುರಾಳ) ಅವರು ರೈತರನ್ನುದ್ದೇಶಿಸಿ ಮಾತನಾಡಿ, ನೊಂದ ರೈತರಿಗೆ ನ್ಯಾಯ ಕೊಡಿಸುವುದು ಹೋರಾಟದ ಉದ್ದೇಶವಾಗಿದೆ. ನೊಂದ ರೈತರ ನೆರವಿಗೆ ಬರುವಲ್ಲಿ ಈ ಸರ್ಕಾರ ವಿಫಲವಾಗಿದೆ. ಪ್ರತಿಯೊಂದಕ್ಕೂ ಹೋರಾಟ ನಡೆಸುವ ಪರಿಸ್ಥಿತಿ ಬಂದಿರುವುದು ಶೋಚನೀಯ



ತಾಲೂಕಾಡಳಿತ, ಕೃಷಿ ಇಲಾಖೆ ಜಂಟಿಯಾಗಿ ಬೆಳೆಹಾನಿಯ ವಾಸ್ತವ ಸಮೀಕ್ಷೆ ನಡೆಸಬೇಕು. ಆದರೆ ಇವಾಗುತ್ತಿಲ್ಲ. ಕೃಷಿ ಅಧಿಕಾರಿಗಳು, ತಲಾಟಿಗಳು, ಗ್ರಾಮಸಹಾಯಕರು ಗ್ರಾಮಕ್ಕೆ ಹೋಗಿ ರೈತರನ್ನು ಒಂದೆಡೆ ಸೇರಿಸಿ ಮಾಹಿತಿ ಪಡೆದುಕೊಂಡು

ಎಲ್ಲೆಲ್ಲಿ ಬೆಳೆಹಾನಿ ಆಗಿದೆ ಎನ್ನುವ ನಿಖರ ಮಾಹಿತಿ ಪಡೆದುಕೊಳ್ಳುವ ಮಾಡುತ್ತಿಲ್ಲ. ಗ್ರಾಮವಾರು ರೈತರ ಭೇಟಿ ಮಾಡಿ ನೈಜ ವರದಿ ಸಂಗ್ರಹಿಸಿ ಸರ್ಕಾರಕ್ಕೆ ಸಲ್ಲಿಸಿದರೆ ಮಾತ್ರ ಸರಿಯಾದ ಪರಿಹಾರ ನೇರವಾಗಿ ನೊಂದ ರೈತರಿಗೆ ತಲುಪುವುದು ಸಾಧ್ಯವಾಗುತ್ತದೆ. ನಿರ್ಲಕ್ಷ್ಯ ಮುಂದುವರೆದಲ್ಲಿ ರೈತರು ಸರ್ಕಾರದ ವಿರುದ್ಧ ದಂಗೆ ಏಳುವಂಥ ಪರಿಸ್ಥಿತಿ ಬಂದರೂ ಬರಬಹುದು. ಈಗಲಾದರೂ ಸರ್ಕಾರ ಎಚ್ಚೆತ್ತುಕೊಂಡು ಕೂಡಲೇ ರೈತರ ನೆರವಿಗೆ ಬರಬೇಕು ಎಂದು ಒತ್ತಾಯಿಸಿದರು.ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂಗಣ್ಣ ಬಾಗೇವಾಡಿ ಅವರು ಮಾತನಾಡಿ ಈ ಸರ್ಕಾರ ರೈತರ ನೆರವಿಗೆ ಬರುತ್ತದೆ ಎಂದು ಹೇಳುತ್ತಾರೆ. ಆದರೆ ಇದುವರೆಗೂ ಯಾವುದೇ ಪರಿಹಾರ ಕ್ರಮ ಕೈಕೊಂಡಿಲ್ಲ. ಕೃಷಿ ಅಧಿಕಾರಿಗಳು ರೈತರ ಹೊಲಕ್ಕೆ ಹೋಗಿ ಸಮೀಕ್ಷೆ ನಡೆಸಲು ಸಿಬ್ಬಂದಿ ಕೊರತೆ ಇದೆ ಎನ್ನುತ್ತಿದ್ದಾರೆ.

ತಹಶೀಲ್ದಾರ್ ಅವರು ಮಳೆ ಚೆನ್ನಾಗಿ ಆಗಿದೆಯಲ್ಲಿ ಎಂದು ಹೇಳುತ್ತಿದ್ದಾರೆ. ಒಟ್ಟಾರೆ ಎಲ್ಲರೂ ಸೇರಿ ರೈತನನ್ನು ಶೋಷಣೆ ಮಾಡುತ್ತಿದ್ದಾರೆ. ಕಾಟಾಚಾರಕ್ಕೆ ಸಮೀಕ್ಷೆ ನಡೆಸುತ್ತಿರುವುದನ್ನು ವಿರೋಧಿಸುತ್ತೇವೆ. ಬೆಳೆ ಹಾನಿಗೀಡಾದ ಪ್ರತಿ ಎಕರೆಗೆ ಕನಿಷ್ಠ 25000 ರೂ ಪರಿಹಾರ ಕೊಡಬೇಕು ಎಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ತಹಶೀಲ್ದಾರ್ ಕೀರ್ತಿ ಚಾಲಕ ಅವರು ಬೇಡಿಕೆ ಈಡೇರಿಕೆ ಬಗ್ಗೆ ಕೂಡಲೇ ಕ್ರಮ ಜರುಗಿಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ವೈ.ಎಲ್.ಬಿರಾದಾರ, ಮುಖಂಡರಾದ ಹುಲಗಪ್ಪಗೌಡ ಬಿರಾದಾರ, ಸಂಗಪ್ಪ ಕತ್ತಿ, ಈರನಗೌಡ ಬಿರಾದಾರ, ಮುದ್ದೇಬಿಹಾಳ ತಾಲ್ಲೂಕು ಅಧ್ಯಕ್ಷ ಅಯ್ಯಪ್ಪ ಬಿದರಕುಂದಿ,ತಾಳಿಕೋಟೆ ತಾಲೂಕು ಘಟಕದ ಅಧ್ಯಕ್ಷ ವೀರೇಶ ಮಡಿವಾಳರ. ಸೋಮಶೇಖರಯ್ಯ ಹಿರೇಮಠ, ಸೇರಿದಂತೆ ಉಪಸ್ಥಿತರಿದ್ದರು.



## ಹೊನಲು ಬೆಳಕಿನ ಹಾಕಿ ಪಂದ್ಯಾವಳಿ

**ಬಾಗಲಕೋಟೆ:** ರಾಷ್ಟ್ರೀಯ ಕ್ರೀಡಾ ದಿನಾಚರಣೆ ಹಾಗೂ ಮೇಜರ್ ಧ್ಯಾನಚಂದ ಅವರ ಹುಟ್ಟುಹಬ್ಬದ ಅಂಗವಾಗಿ ಬಿವಿವಿ ಸಂಘದ ಬಾಗಲಕೋಟೆ ಸಿಟಿ ಸ್ಪೋರ್ಟ್ಸ್ ಕ್ಲಬ್ ಹಾಗೂ ಹಾಕಿ ಫ್ಯಾನ್ಸ್ ಬಾಗಲಕೋಟೆ ಸಂಯುಕ್ತ ಆಶ್ರಯದಲ್ಲಿ ಅಹ್ವಾನಿತ '7' ಸೈಡ್ ಹೊನಲು ಬೆಳಕಿನ ರಿಂಕ್ ಹಾಕಿ ಪಂದ್ಯಾವಳಿಗಳು ಜರುಗಿದವು.

ಹಾಕಿ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿದ ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರು ಬಾಗಲಕೋಟೆಯಲ್ಲಿ ಹಾಕು ರಾಷ್ಟ್ರ ಮಟ್ಟದ ಕ್ರೀಡೆ ಆಯೋಜಿಸುವಂತೆ ಸಲಹೆ ನೀಡಿದರು. ಮುಕ್ತಾಯ ಸಮಾರಂಭಕ್ಕೆ ಸಿಟಿ ಸ್ಪೋರ್ಟ್ಸ್ ಕ್ಲಬ್‌ದ ಕಾರ್ಯಾಧ್ಯಕ್ಷರಾದ ಶಿವಲಿಂಗಪ್ಪ ಎಚ್. ಮೊರಬದ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಜಗನ್ನಾಥ ವಿ. ಚವ್ಹಾಣ ಇವರು ಆಗಮಿಸಿ ಪ್ರಶಸ್ತಿ ವಿತರಣೆ ಮಾಡಿದರು.

# ರೈತರಿಗೆ ತುಂತುರು ನೀರಾವರಿ ಪರಿಕರಗಳ ವಿತರಣೆ

**ಮುದ್ದೇಬಿಹಾಳ:** ಮಣ್ಣು ಸಂರಕ್ಷಣೆಯೊಂದಿಗೆ ಕೃಷಿಯಲ್ಲಿ ಅಧಿಕ ಇಳುವರಿ ಪಡೆಯಲು ಮಣ್ಣಿನ ತೇವಾಂಶದ ಆಧಾರದ ಮೇಲೆ ನಿಖರವಾದ ನೀರಾವರಿ ಯೋಜನೆಗಳನ್ನು ಅಳವಡಿಸಿಕೊಳ್ಳಲು ಅಗತ್ಯವಿರುವ ಗುಣಮಟ್ಟದ ಪರಿಕರಗಳನ್ನು ರೈತರ ಮನೆ ಬಾಗಿಲಿಗೆ ತಲುಪಿಸಲು ದಾಸೋಹಿ ಕುಕ್ಕುಟ ರೈತ ಉತ್ಪಾದಕ ಕಂಪನಿ ಕೈಗೆತ್ತಿಕೊಂಡ ಯೋಜನೆಯಿಂದ ವೈಜ್ಞಾನಿಕ ನೀರು ನಿರ್ವಹಣೆಗೆ ಬೇಕಿರುವ ಪರಿಕರಗಳ ಅರವಿನ ಕೊರತೆ ನೀಗಲಿದೆ ಎಂದು ತೋಟಗಾರಿಕೆ ಇಲಾಖೆಯ ವಿಜಯಪುರ ಜಿಲ್ಲಾ ಉಪ ನಿರ್ದೇಶಕರ ಕಛೇರಿಯ ಸಹಾಯಕ ನಿರ್ದೇಶಕ ಭಗವಂತ ಜಿಗಜಿಣಗಿ ಹೇಳಿದರು.

ನಗರದ ತಾಳಿಕೋಟಿ ರಸ್ತೆಯಲ್ಲಿರುವ ಎ.ಪಿ.ಎಂ.ಸಿ ಮಳಿಗೆಯಲ್ಲಿ ದಾಸೋಹಿ ಕುಕ್ಕುಟ ರೈತ ಉತ್ಪಾದಕ ಕಂಪನಿಯ ವತಿಯಿಂದ ಸ್ಥಾಪಿಸಲಾದ ದಾಸೋಹಿ ನೀರಾವರಿ ಪರಿಕರಗಳ ಮಾರಾಟ ಕೇಂದ್ರವನ್ನು ಗೋಪೂಜೆ ಹಾಗೂ ತುಂತುರು ನೀರಾವರಿ ಪರಿಕರ ವಿತರಣೆ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ರೈತರ ಆದ್ಯತೆ ಅರಿತು ನೀರಿನ ಲಭ್ಯತೆ ಹಾಗೂ ಅಳವಡಿಕೆ ಕ್ಷೇತ್ರವನ್ನು ನಿಖರವಾಗಿ ಗುರುತಿಸಿ ಸಾಧ್ಯತೆಯಿಂದ ಕೂಡಿದ ಯೋಜನೆಯನ್ನು ರೂಪಿಸಿ ಕಡಿಮೆ ಖರ್ಚಿನಲ್ಲಿ ನೀರಾವರಿ ವ್ಯವಸ್ಥೆಗೊಳಿಸಲು ದಾಸೋಹಿ ಕೈಗೊಂಡ ಕ್ರಮಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ಸುರೇಶ ಭಾವಿಕಟ್ಟಿ ಮಾತನಾಡಿ ಕಡಿಮೆ ನೀರು ಮತ್ತು ಮಾನವ ಶಕ್ತಿಯ ಬಳಕೆಯಿಂದ ಹೆಚ್ಚಿನ ಪ್ರದೇಶವನ್ನು ನೀರಾವರಿಗೊಳಪಡಿಸಿ ಸುಸ್ಥಿರ ಕೃಷಿ ಇಳುವರಿ ಪಡೆಯಲು ಸಹಕರಿಸಬಹುದಾದ ತುಂತುರು ಹಾಗೂ



ಹನಿ ನೀರಾವರಿ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಹೆಚ್ಚಿನ ರೈತರಿಗೆ ಅನುಕೂಲ ಕಲ್ಪಿಸಲು ಇರುವ ಯೋಜನೆಗಳ ಸದುಪಯೋಗವನ್ನು ಹೆಚ್ಚಿನ ರೈತರು ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಬಸನಗೌಡ ಪಾಟೀಲ ಮಾತನಾಡಿ ನೀರಾವರಿಗೆ ಸಂಬಂದಿಸಿದಂತೆ ಲಭ್ಯವಿರುವ ತಂತ್ರಜ್ಞಾನಗಳನ್ನು ಬಳಸಿಕೊಂಡು ಕೃಷಿ ಮತ್ತು ತೋಟಗಾರಿಕೆ ಮಾಡಿದಲ್ಲಿ ಯಶಸ್ವಿಯಾಗಲು ಸಾಧ್ಯ ಎಂಬುದನ್ನು ತಿಳಿದು ಸುಭ ಮತ್ತು ಅನುಕೂಲಕರವಾದ ನೀರಾವರಿ ಪರಿಕರಗಳನ್ನು ಅಳವಡಿಸಿಕೊಳ್ಳಲು ರೈತರು ಮುಂದಾಗಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಚಿಂತಕ ಅರವಿಂದ ಕೊಪ್ಪ ಮಾತನಾಡಿ ನೀರಾವರಿಗೆ ಸಂಬಂದಿಸಿದಂತೆ ಘ ಲಭ್ಯವಿರುವ ತಂತ್ರಜ್ಞಾನಗಳು ಮತ್ತು ಸದರಿ ಯೋಜನೆಗಳ ಅಳವಡಿಕೆಗೆ ಇರುವ ಸರ್ಕಾರದ ಯೋಜನೆಗಳ ಸಂಯೋಜನೆಯಲ್ಲಿ ರೈತರು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಿ ಹೆಚ್ಚಿನ ರೈತರನ್ನು ಫಲಾನುಭವಿಗಳನ್ನಾಗಿಸಿ ಅವರ ಆದಾಯ ದ್ವಿಗುಣಗೊಳಿಸಲು ಉಪ ಕ್ರಮಗಳ ಮೂಲಕ ನೆರವು ಕಲ್ಪಿಸಲಾಗುವುದೆಂದರು.

ಕಾರ್ಯಕ್ರಮದಲ್ಲಿ ತೋಟಗಾರಿಕೆ ಇಲಾಖೆಯ ತಾಂತ್ರಿಕ ಅಧಿಕಾರಿ ರಾಘವೇಂದ್ರ ದೇಶಪಾಂಡೆ,ವಿಜ್ಞಾನಿ ವಿಜಯ ಮಾಳೆ, ಜೈನ ಇರಿಗೇಷನ್ ಸಿಸ್ಟಂನ ಎಂ.ಕೆ ಬಿರಾದಾರ, ರಾಜೇಶ ಯಾಳವಾರ, ತೋಟಗಾರಿಕೆ ಅಧಿಕಾರಿ ಡಾ. ಶಫೀಕ, ದಾಸೋಹಿ ರೈತ ಉತ್ಪಾದಕ ಕಂಪನಿಯ ಕಾರ್ಯಾಧ್ಯಕ್ಷೆ ರಶ್ಮಿ ಕೊಪ್ಪ, ಉಪಾಧ್ಯಕ್ಷ ಆರ್.ಬಿ ಸಜ್ಜನ, ನೀರಾವರಿ ಪರಿಕರಗಳ ಖರೀದಿ ಮತ್ತು ಮಾರಾಟ ಸ್ಥಾಯಿ ಸಮಿತಿ ಚರ್ಮನ್ ಶ್ರೀಶೈಲ. ಮೇಟಿ, ನಿರ್ದೇಶಕರಾದ ಬಿ.ಜಿ ಮಠ (ಆಕ್ಸರ್ಡ), ಗೋಲಪ್ಪ ಗಂಗನಗೌಡ್ರ, ಬಸವರಾಜ ಕುಂಟೋಜಿ, ಸೋಮನಗೌಡ ಬಿರಾದಾರ, ಗುರಯ್ಯ ಮುದ್ದನೂರಮಠ ಹಾಜರಿದ್ದರು.

## ಸಂಗೀತದಲ್ಲಿ ವಚನ ಸಾಹಿತ್ಯದ ಕೊಡುಗೆ ಅಪಾರ

**ಬಾಗಲಕೋಟೆ:** ವಚನ ಗಾಯನ ಶೈಲಿಯು 19ನೇ ಶತಮಾನದಲ್ಲಿ ಬೆಳಕಿಗೆ ಬಂದಿದ್ದು ಸಂಗೀತ ಕ್ಷೇತ್ರಕ್ಕೆ ಕನ್ನಡಿಗರು ನೀಡಿದ ಶ್ರೇಷ್ಠ ಕೊಡುಗೆಯಾಗಿದೆ ಎಂದು ವಿಶ್ರಾಂತ ಪ್ರಾಚಾರ್ಯರಾದ ಪಂ.ಡಾ. ಎಸ್. ಆರ್ ಮಠಪತಿ ಅವರು ಹೇಳಿದರು.

ನಗರದ ಬಿ.ವಿ.ವಿ ಸಂಘದ ಬಸವೇಶ್ವರ ಕಲಾ ಮಹಾವಿದ್ಯಾಲಯ ಮತ್ತು ಬೆಂಗಳೂರಿನ ಅಜಿಮ್ ಪ್ರೇಮ್ಜಿ ವಿವಿ ಸಹಯೋಗದಲ್ಲಿ ಶನಿವಾರದಂದು ಹಮ್ಮಿಕೊಂಡಿದ್ದ ವಚನ ಗಾಯನ ಸ್ಪರ್ಧೆಯನ್ನು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಸಂಗೀತದಲ್ಲಿ ಅನೇಕ ಪ್ರಕಾರಗಳಿವೆ ಅವುಗಳಲ್ಲಿ ಪಂಚಾಕ್ಷರಿ ಗವಾಯಿಗಳು ಹುಟ್ಟು ಹಾಕಿದ ವಚನ ಗಾಯನವು ಒಂದಾಗಿದೆ. 1906ರಲ್ಲಿ ಬಾಗಲಕೋಟೆಯ ತೆಗ್ಗಿನ ಮಠದಲ್ಲಿ ಅವರು ಹಾಡಿದ ವಚನ ಸಾಹಿತ್ಯ ಮೆಚ್ಚಿ ಹಾನಗಲ್ಲ ಕುಮಾರಸ್ವಾಮಿಗಳು ಪಂಚಾಕ್ಷರಿ ಗವಾಯಿ ಎಂಬ ನಾಮಕರಣ ಮಾಡುತ್ತಾರೆ. ಬಳಿಕ ಡಾ.ಮಲ್ಲಿಕಾರ್ಜುನ ಮನಸೂರ ಅವರು ದೂರದರ್ಶನದ ನೇರ ಪ್ರಸಾರದಲ್ಲಿ ವಚನಗಾಯನ ಮಾಡಿ ಅದನ್ನು ಮತ್ತಷ್ಟು ಪ್ರಚುರಪಡಿಸಿದ್ದು ವಚನ ಗಾಯನವು ಸಾಹಿತ್ಯದಲ್ಲಿ ಅನೇಕ ರೀತಿಯ ಬೆಳವಣಿಗೆಯನ್ನು ಕಂಡಿದೆ ಎಂದರು.

ಪ್ರಸ್ತುತ ದೇಶದೆಲ್ಲೆಡೆ ವಚನವು ಸಂಗೀತ ಶೈಲಿಯಾಗಿ ಮಾರ್ಪಟ್ಟಿದ್ದು ಈಗಿನ ಸಂಗೀತ ಕಚೇರಿಗಳಲ್ಲಿ ಗಾಯನದ ಕೊನೆಯಲ್ಲಿ ವಚನದ ಮೂಲಕ ಅಂತ್ಯಗೊಳಿಸುವ ಪ್ರತೀತಿ ಬೆಳೆದಿದೆ. ಶಬ್ದ ಮತ್ತು ಅರ್ಥ ದೋಷವಾಗದಂತೆ ಹಾಡುವ ಅಭ್ಯಾಸವನ್ನು ವಿದ್ಯಾರ್ಥಿಗಳು ಬೆಳಸಿಕೊಳ್ಳಬೇಕು ಎಂದರು.



ಪ್ರಾಚಾರ್ಯರಾದ ಎಸ್.ಆರ್ ಮೂಗನೂರಮಠ ಅವರು ಮಾತನಾಡಿ ಗದ್ಯವೂ ಅಲ್ಲದ ಪದ್ಯವೂ ಅಲ್ಲದ ವಿಶಿಷ್ಟವಾದ ರಚನೆಯನ್ನು ವಚನಗಳು ಹೊಂದಿದ್ದು ಹತ್ತನೆ ಶತಮಾನಮದಲ್ಲಿಯೇ ವಚನಗಳ ರಚನೆ ಪ್ರಾರಂಭವಾದವು. ಅನುಭವ ಮಂಟಪ ಪ್ರಾರಂಭವಾದ ನಂತರ ಅವುಗಳು ವಿಶಿಷ್ಟ ರೂಪ ಪಡೆದವು. ಸಾಹಿತ್ಯ ಮತ್ತು ಸಂಗೀತಕ್ಕೆ ಅವಿನಾಭಾವ ಸಂಬಂಧವಿದೆ. ಸಂಗೀತ ಕ್ಷೇತ್ರಕ್ಕೆ ಹೆಚ್ಚಿನ ಪ್ರಾಮುಖ್ಯತೆ ಕೊಟ್ಟ ಕೀರ್ತಿ ರೇಡಿಯೋ ಮಾಧ್ಯಮಕ್ಕೆ ಸಲ್ಲುತ್ತದೆ. ವಚನಗಳು ಕನ್ನಡದ ವೈಶಿಷ್ಟ್ಯವಾಗಿದ್ದು ಅದನ್ನು ವಿದ್ಯಾರ್ಥಿಗಳ ಮಟ್ಟದಲ್ಲಿ ಪ್ರಚಾರಮಾಡಲು ಇಂತಹ ಸ್ಪರ್ಧೆ ಏರ್ಪಡಿಸಿರುವುದು ಸಂತಸದ ಸಂಗತಿ ಎಂದರು.

ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಚಟುವಟಿಕೆಗಳ ಸಂಯೋಜಕರಾದ ಡಾ.ಕೆ.ವಿ ಮಠ, ಪ್ರಾಧ್ಯಾಪಕರುಗಳಾದ ಡಾ.ಎಸ್.ಡಿ ಕೆಂಗಲಗುತ್ತಿ, ಡಾ.ಆರ್.ಎಮ್ ಬೆಣ್ಣೂರ ಸೇರಿದಂತೆ, ವಚನಗಾಯನ ಸ್ಪರ್ಧಾರ್ಥಿಗಳು ಮತ್ತು ಉಪನ್ಯಾಸಕರು ಉಪಸ್ಥಿತರಿದ್ದರು.

### ಮಹಿಳೆಯ ಮಂಗಳಸೂತ್ರ ಕದ್ದು ಪರಾರಿ

**ರಾಯಬಾಗ:** ಪಟ್ಟಣದ ಬಸ್ ನಿಲ್ದಾಣದಲ್ಲಿ ನಿಂತಿದ್ದ ಮಹಿಳೆ ಯೊರ್ವಳ ಮಂಗಳಸೂತ್ರ ಕದ್ದು ಇಬ್ಬರು ಕಳ್ಳರು ಪರಾರಿ ಯಾಗಿರುವ ಘಟನೆ ಶುಕ್ರವಾರ ಬೆಳ್ಳಿಗ್ಗೆ ನಡೆದಿದೆ. ಮುಗಳಖೋಡ ಗ್ರಾಮದ ನಿವಾಸಿ ರೂಪಾ ಮಹೇಶ ಕೇತಗೌಡರ ಎಂಬ ಮಹಿಳೆ ತನ್ನ ಸಂಬಂಧಿ ಮಹಿಳೆಯರ ಜೊತೆ ಸಂಕೇಶ್ವರ ಪಟ್ಟಣದಲ್ಲಿರುವ ನಿಲಗಾರ ಗಣಪತಿಯ ದರ್ಶನ ಪಡೆಯಲು ತೆರಳಲು ರಾಯಬಾಗ ಬಸ್ ನಿಲ್ದಾಣದಲ್ಲಿ ನಿಂತಿದ್ದ ಸಮಯದಲ್ಲಿ ಬೈಕ ಮೇಲೆ ಬಂದ ಇಬ್ಬರು ಕಳ್ಳರು ಮಹಿಳೆ ಕೊರಳಲಿದ್ದ 30 ಗ್ರಾಮ ತೂಕದ ಸುಮಾರು 3 ಲಕ್ಷ ರೂ. ಮಾಂಗಲ್ಯ ಸರ ಕಳ್ಳತನ ಮಾಡಿ ಪರಾರಿಯಾಗಿದ್ದಾರೆ. ಅದರಲ್ಲಿ ಓರ್ವನನ್ನು ರಾಯಬಾಗ ಪೋಲೀಸರು ದಿಗ್ಗೆವಾಡಿ ಗ್ರಾಮದ ಬಳಿ ಬಂಧಿಸಿದ್ದಾರೆ. ಇನ್ನೋರ್ವ ಪರಾರಿಯಾಗಿದ್ದು, ಆತನನ್ನು ಹಿಡಿಯಲು ಪೋಲಿಸರು ಬಲೆ ಬೀಸಿದ್ದಾರೆ. ರಾಯಬಾಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳ ಹೆಸರು ಹಾಗೂ ವಿಳಾಸ ನಿಖರವಾಗಿ ಲಭ್ಯವಾಗಿರುವುದಿಲ್ಲ.

## ಉದ್ಯೋಗದಲ್ಲಿ ಆತ್ಮೀಯ ಭಾವನೆ ಇರಲಿ



**ತಾಳಿಕೋಟೆ:** ಯಾವದೇ ವ್ಯಾಪಾರವಾಗಲಿ ಉದ್ಯೋಗವನ್ನಾಗಲಿ ಸೃಷ್ಟಿಸಿಕೊಂಡು ವ್ಯವಸ್ಥಿತವಾಗಿ ನಡೆಸಿಕೊಂಡು ಹೋಗಬೇಕಾದರೆ ಎಲ್ಲ ಜನರೊಂದಿಗೆ ಸಹಕಾರ ಮನೋಭಾವನೆಯೆಂಬುದನ್ನು ತೋರುವುದು ಅಗತ್ಯವಾಗಿದೆ ಇದರಿಂದ ಸಂಭಂದಿಸಿ ಪ್ರಾರಂಭಿಸಲಾದ ಉದೋಗ ವ್ಯವಸಾಯಕ್ಕೆ ಅನುಕೂಲವಾಗಲಿದೆ ಎಂದು ಸ್ಥಳೀಯ ಶ್ರೀ ಶಿವಭವಾನಿ ಮಂದಿರದ ಅರ್ಚಕರಾದ ವೇ॥ ಸಂತೋಷ ಭಟ್ ಜೋಷಿ ಅವರು ನುಡಿದರು.

ಶುಕ್ರವಾರರಂದು ಮಾರ್ಕೆಟ್ ಯಾರ್ಡ್‌ನಲ್ಲಿಯ ವಿಠ್ಠಲಸಿಂಗ್ ಹಜೇರಿ ಅವರ ಮೇಲ್ಜಾವಣಿಯಲ್ಲಿ ಪ್ರಾರಂಭಿಸಲಾದ ಲೆಕ್ಕ ಪರಿಶೋಧಕರ ಕಛೇರಿ ಉದ್ಘಾಟನಾ ಕಾರ್ಯಕ್ರಮವನ್ನು ಶ್ರೀ ಮಹಾಲಕ್ಷ್ಮೀ, ಮಹಾಸರಸ್ವತಿಯ ಮಹಾಪೂಜೆಯನ್ನು ಪ್ರಾರಂಭಿಸಿ ಮಾತನಾಡುತ್ತಿದ್ದ ಅವರು ಈ ಒಂದು ಕಛೇರಿಯ ಸಂಭಂದಿಸಿದ ಚಾರ್ಟೆಡ್ ಅಕೌಟೆಂಟ್‌ರಾದ ಜ್ಯೋತಿಬಾ ಕೋಡಗೆ ಅವರು ಈ ಕಾರ್ಯದಲ್ಲಿ ನುರಿತವರಾಗಿದ್ದಾರೆ ಅವರು ಮಾಡಿದಂತಹ ಈ ಕಾರ್ಯ ಗುಣಗಾನದಾಯಕವಾಗಿದೆ ಈ ಸೇವೆ ಈಭಾಗದ ವ್ಯಾಪಾರಸ್ಥರಿಗೆ ಹಾಗೂ ಉದ್ಯೋಗಸ್ಥರಿಗೆ ಎಲ್ಲರಿಗೂ ಲಭ್ಯವಾಗಲಿ ಎಂದರು.

ಇನ್ನೋರ್ವ ಚಾರ್ಟೆಡ್ ಅಕೌಂಟೆಂಟರಾದ ಜ್ಯೋತಿಬಾ ಕೋಡಗೆ ಅವರು ಲೆಕ್ಕ ಪರಿಶೋಧಕರ ಕಛೇರಿ ಪ್ರಾರಂಭಿಸಿದ್ದರ ಕುರಿತು ಹಾಗೂ ಈ ಕಚೇರಿಯಿಂದ ಕಾರ್ಯ ನಿರ್ವಹಿಸುವಂತಹ ಇನ್‌ಕಮ್‌ಟ್ಯಾಕ್ಸ್, ಜಿಎಸ್‌ಟಿ, ಬ್ಯಾಂಕಿಂಗ್ ಇನ್‌ವೆಸ್ಟಮೆಂಟ್ ಮತ್ತು ಮ್ಯಾನೇಜಿಂಗ್ ಕನ್ಸಂಟ್ಸ್ ಸೇವಾ ಕಾರ್ಯ ಕುರಿತು ವಿವರಿಸಿದರು.

ಈ ಸಮಯದಲ್ಲಿ ನಿವೃತ್ತ ಕಮೀಷನರ್ ಬಿ.ಎ. ಶಿಂದೆ, ಬಾಬು ಹಜೇರಿ, ಎಂ.ಎಸ್. ಸರಸೆಟ್ಟಿ, ಸಂಬಾಜಿ ವಾಡಕರ, ನಾರಾಯಣ ಸುಬೇದಾರ, ಶಶಿಧರ ಡಿಸಲೆ, ಬಬಲೇಶ್ವರ, ವ್ಹಿ.ಸಿ. ಹಿರೇಮಠ(ಹಂಪಿಮುತ್ಯಾ) ಅವರನ್ನೊಳಗೊಂಡು ಮೊದಲಾದವರು ಉಪಸ್ತಿತರಿದ್ದು ಶುಭ ಹಾರೈಸಿದರು.

## ಸಹಕಾರಿ ಸಂಸ್ಥೆಗಳು ಸಾಮಾಜಿಕ ಕಳಕಳಿ ಹೊಂದಿರುತ್ತವೆ

**ತಾಳಿಕೋಟೆ:** ಸಹಕಾರಿ ಸಂಸ್ಥೆಗಳು ತಮ್ಮ ಸದಸ್ಯರ ಅಭಿವೃದ್ದಿಗಾಗಿ ಸೇವೆ ಮೂಲಕ ಪರಿಣಾಮಕಾರಿಯಾಗಿ ಶ್ರಮಿಸುತ್ತಿದ್ದು ಪ್ರಾದೇಶಿಕ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಜೊತೆಯಾಗಿ ಕಾರ್ಯನಿರ್ವಹಿಸುವ ಮೂಲಕ ಸಹಕಾರಿ ಸಂಘಗಳು ಬಲಪಡಿಸುತ್ತವೆ ಎಂದು ವಿಜಯಪುರ ಬಿಡಿಸಿಸಿ ಬ್ಯಾಂಕ್ ನಿರ್ಧೇಶಕರಾದ ಬಿ.ಎಸ್. ಪಾಟೀಲ(ಯಾಳಗಿ) ಅವರು ನುಡಿದರು.

ಶುಕ್ರವಾರರಂದು ಸ್ಥಳೀಯ ವಿವಿದುದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ನಿಯಮಿತದ ವತಿಯಿಂದ ಶ್ರೀ ವಾಸವಿ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾದ 83 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡುತ್ತಿದ್ದ ಅವರು ಯಾವದೇ ಒಂದು ಸಂಘ ಬೆಳೆವಣಿಗೆಯಾಗಬೇಕಾದರೆ ಸಂಘದಲ್ಲಿದ್ದವರ ಸಹಕಾರ ಬೇಕಾಗಿರುತ್ತದೆ ಸಾಮಾನ್ಯ ಸಭೆಗಳನ್ನು ಏರ್ಪಡಿಸಿ ಅಲ್ಲಿ ಚರ್ಚಿಸತಕ್ಕಂತ ವಿಷಯಗಳಂತೆ ಮನ್ನಡೆಯಬೇಕಾಗುತ್ತದೆ ಸಾಲ ಪಟೆದ ಮತ್ತು ಸಾಲ ಪಡೆಯುತ್ತಿರುವ ರೈತರು ಅದನ್ನು ಸದುಪಯೋಗಪಡಿಸಕೊಳ್ಳುವಂತಹ ಕಾರ್ಯ ಮಾಡಬೇಕು ಇಲ್ಲದಿದ್ದರೆ ಮುಂದೆ ಸಾಲ ಪಡೆಯಲು ಅನಾನುಕೂಲವಾಗಲಿದೆ ಎಂದರು. ಸಂಘದಲ್ಲಿ ಯಾವದೇ ತರದ ಏರಾಪೇರುಗಳು ಆಗುವದಿಲ್ಲಾ ಇಂತಲ್ಲಿ ಏನೇ ಏರಾಪೇರು ಆದರೆ ಒಮ್ಮೆಲೆ ಜಿಲ್ಲೆಗೆ ಜಿಲ್ಲೆಯಿಂದ ರಾಜ್ಯಕ್ಕೆ ಇರತಕ್ಕಂತಹ ಕಛೇರಿಗಳಿಗೆ ತಿಳುವಳಿಕೆಯಾಗುವಂತಹ




ಸ್ಥಿತಿಗಳು ಇಂದಿನ ಕಾಲದಲ್ಲಿ ಬಂದಿವೆ ಎಂದು ಬಡ್ಡಿ ಇಲ್ಲದೇ ಸಾಲ ಪಡೆಯುವ ಕುರಿತು ಹಾಗೂ ಎಫ್‌ಡಿ ಇಟ್ಟು ಬಡ್ಡಿ ಇಲ್ಲದೇ ಸಾಲ ಪಡೆಯುವ ಕುರಿತು ವಿವರಿಸಿದ ಪಾಟೀಲರು ರೈತರು ಸಂಕಷ್ಟದಲ್ಲಿದ್ದಾರೆಂದು 5 ಲಕ್ಷ ರೂ. ಬೆಳೆ ಪ್ರಮಾಣ ಇರತಕ್ಕಂತಹದ್ದನ್ನು ನೋಡಿ ಸಾಲ ನೀಡಲಾಗುತ್ತದೆ ಈಗಾಗಲೇ ಈ ವಿಷಯಕ್ಕೆ ಸಂಭಂದಿಸಿ 3 ಲಕ್ಷ ಕ್ಕೂ ಸಾಲ ನೀಡಲಾಗಿದೆ ಎಂದು ರೈತಮಿತ್ರ ಎಂಬ ಸ್ಕೀಮ್ ಕುರಿತು ವಿವರಿಸಿದ ಪಾಟೀಲರು 7 ಲಕ್ಷ ರೂ ಒದಗಿಸಿಕೊಳ್ಳುವ ಕುರಿತು ಬಹು ಮಾರ್ಮಿಕವಾಗಿ ವಿವರಿಸಿದರು.

ಸಾನಿದ್ಯ ವಹಿಸಿದ ಸ್ಥಳೀಯ ಕೈಲಾಸಪೇಠೆಯ ಶ್ರೀ ಬಸವಪ್ರಭುದೇವರು ಆಶೀರ್ವಚನ ನೀಡುತ್ತಾ ಸಾಲ ಪಡೆದರೆ ಅಗತ್ಯವಿದ್ದಷ್ಟು ಸಾಲ ಪಡೆದುಕೊಳ್ಳಬೇಕು ಹೆಚ್ಚಿಗೆ ಸಾಲಪಡೆದುಕೊಂಡರೆ ಮುಂದೆ ತೊಂದರೆಗೆ ಒಳಪಡಬೇಕಾಗುತ್ತದೆ ಎಂದ ಅವರು ಸಾಲ ಪಡೆದು ಮರು ಪಾವತಿ ಮಾಡಲಾರದಂತಹ ವ್ಯಕ್ತಿಯದೂರು ನ್ಯಾಯಾಲಯದ ಕಟ್ಟೆ ಏರಿದರೂ ಸಹ ಸಾಲ ಪಡೆದ ವ್ಯಕ್ತಿ ಮೂಕನಂತೆ ನಟಿಸಿ ಸಾಲ ತೆಗೆದುಕೊಂಡಿಲ್ಲವೆಂಬ ಭಾವನೆಯನ್ನುವ್ಯಕ್ತಪಡಿಸಿದ್ದರ ಕುರಿತು ಹಾಗೂ ಮುಂದೆ ಆತನಿಗಾದ ತೊಂದರೆ ಹೇಗಿತ್ತೆಂಬುದರ ಕುರಿತು ವಿವರಿಸಿದರು.

ನಿರ್ಧೇಶಕರಾದ ಬಸವರಾಜ ಕುಂಬಾರ ಹಾಗೂ ಪ್ರವೀಣ್ ಪಾಟೀಲ ಅವರು ವರದಿ ವಾಚಿಸಿದರು.


ಈ ಸಮಯದಲ್ಲಿ ಅಧ್ಯಕ್ಷರಾದದುಂಡಪ್ಪಗೌಡ ಪಾಟೀಲ, ಗುರುಸಂಗಪ್ಪ ಕಶೆಟ್ಟಿ, ಉಪಾಧ್ಯಕ್ಷರಾದ ದಸ್ತಗೀರಸಾಬ ಕೆಂಬಾವಿ, ನಿರ್ಧೇಶಕರಾದ ಗೋವಿಂದಸಿಂಗ್ ಮೂಲಿಮನಿ, ಬಸನಗೌಡ ಮಾಲಿಪಾಟೀಲ, ಶರಣಪ್ಪ ಇಲಕಲ್ಲ, ನಾಗಪ್ಪ ಗೊಟಗುಣಕಿ, ಶ್ರೀಮತಿ ಸರೋಜಾ ದೇಸಾಯಿ, ಶ್ರೀಮತಿ ಜ್ಯೋತಿ ಹಜೇರಿ, ಮಡಿವಾಳಪ್ಪ ಕಟ್ಟಿಮನಿ, ಯಮನಪ್ಪ ಬರದೇನಾಳ, ಶ್ರೀಶೈಲ ಬಿರಾದಾರ, ಡಿಸಿಸಿ ಬ್ಯಾಂಕ ವ್ಯವಸ್ಥಾಪಕ ಆರ್.ಬಿ. ಹಿರೂರ, ಹಾಗೂ ವ್ಯವಸ್ಥಾಪಕ ಶಂಕರಗೌಡ ಪಾಟೀಲ ಮೊದಲಾದವರು ಉಪಸ್ತಿತರಿದ್ದರು.

# ಜಟೋತ್ಸವದೊಂದಿಗೆ ಮಹಾಲಿಂಗೇಶ್ವರ ಜಾತ್ರೋತ್ಸವ ಆರಂಭ

ಶಿವಲಿಂಗ ಸಿದ್ನಾಳ

**ಮಹಾಲಿಂಗಪುರ:** ಬೆಲ್ಲದ ನಾಡು ಭಾವೈಕ್ಯತೆಯ ಬೀಡಾಗಲು ಕಾರಣರಾದ ಪುರದ ಪುಣ್ಯ, ಪವಾಡ ಪುರುಷ ಎಂದೇ ಹೆಸರಾದ ಪಟ್ಟಣದ ಆರಾಧ್ಯ ಧೈವ ಶ್ರೀ ಮಹಾಲಿಂಗೇಶ್ವರ ಜಾತ್ರೆಗೆ ಶ್ರೀ ಮಹಾಲಿಂಗೇಶ್ವರ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಜಿ ಅವರಿಂದ ಅದ್ದೂರಿ ಚಾಲನೆ ದೊರೆತಿದೆ.

ಶುಕ್ರವಾರ ಸೆ.5 ರಂದು ಜನಸಾಗರದ ಮಧ್ಯೆ ರಾಮಲಿಂಗೇಶ್ವರ ಬೆಟ್ಟದ (ಚನ್ನಗಿರೀಶ್ವರ ಗಡ) ಮೇಲೆ ಮಹಾಲಿಂಗೇಶ್ವರ ಜಟೋತ್ಸವ ಜರುಗಿತು. ಅಂದು ನಸುಕಿನ ಜಾವದಿಂದಲೇ ಭಕ್ತರಿಂದ ದೀಡ ನಮಸ್ಕಾರದ ಹರಕೆ ತೀರಿಸುವ ಪ್ರಕ್ರಿಯೆ ಆರಂಭವಾಗಿದೆ. ಶನಿವಾರ ಸೆ.6 ರಂದು ಸಂಜೆ 5ಕ್ಕೆ ಹರಿವಾಣ ಕಟ್ಟೆ ಲೂಟಿ ಮಾಡಿದ ನಂತರ ಮೊದಲ ರಥೋತ್ಸವ ಆರಂಭವಾಗಿ ಮಹಾಲಿಂಗೇಶ್ವರ ದೇವಸ್ಥಾನದಿಂದ ಅಹೋರಾತ್ರಿ ತುಂಬಿದ ತೇರು ಸಾಗುವುದು. ಭಾನುವಾರ ಸೆ.7ರಂದು ಸಂಜೆ 6ಕ್ಕೆ ಸಾಗುವ ಮರು ರಥೋತ್ಸವ ಬೆಳಗಿನ ಜಾವದ ಮತ್ತೆ ದೇವಸ್ಥಾನಕ್ಕೆ ತಲುಪುವುದು. ಸೋಮವಾರ ಸೆ.8ರಂದು ಸಂಜೆ 4 ಗಂಟೆಗೆ ಜಂಗಿ ನಿಕಾಲಿ ಕುಸ್ತಿಗಳು ಜರುಗುವವು. ಮಂಗಳವಾರ ಸೆ.9ರಂದು ಸಂಜೆ 6ಕ್ಕೆ ರಸಮಂಜರಿ ಕಾರ್ಯಕ್ರಮಗಳು ಜರುಗುವವು. ಸೆ. 5ರಿಂದ ಸೆ.9ರವರೆಗೆ 5 ದಿನ ಎಲ್ಲ ಭಕ್ತರಿಗೆ ಮಹಾಲಿಂಗೇಶ್ವರ ದೇವಸ್ಥಾನದಲ್ಲಿ ಮಹಾಪ್ರಸಾದ ವ್ಯವಸ್ಥೆ ಇದೆ.



**ಹಿನ್ನೆಲೆ:** ಮೊದಲು ನರಗಟ್ಟಿ ಎಂಬ ಹೆಸರಿನ ಕರೆಯುತ್ತಿದ್ದ ಪುಟ್ಟ ಗ್ರಾಮದಲ್ಲಿ ಮಹಾಲಿಂಗೇಶ್ವರರು ನೆಲೆಸಿದ್ದರಿಂದ ಅದು ಮಹಾಲಿಂಗಪುರ ಎಂದು ಜನಜನಿತವಾಯಿತು. ಮುಧೋಳ ರಾಜರು ಮಹಾಲಿಂಗೇಶ್ವರರಿಗೆ ನೀಡಿದ ಭೂಮಿಗೆ ಗಡಿ ಗುರುತಿಸಲು ಪಟ್ಟಣದ ಸುತ್ತ ಮಹಾಲಿಂಗೇಶ್ವರರು ಎಂಟು ದಿಕ್ಕುಗಳಲ್ಲಿ ಅಷ್ಟ ಲಿಂಗಮುದ್ರೆ ಸ್ಥಾಪಿಸಿದರು. ಆ ಲಿಂಗಮುದ್ರೆಗಳು ಪುಟ್ಟ ದೇವಸ್ಥಾನಗಳಾಗಿ ಇಂದಿಗೂ ಪೂಜಿಸಲ್ಪಡುತ್ತವೆ. ನೀರಿಲ್ಲದ ಕಾಲದಲ್ಲಿ ಪವಾಡದಿಂದ ತೋಡಿದ ಬಾವಿಯನ್ನು ಇಂದಿಗೂ ಅಪ್ಪನವರ ಬಾವಿ ಎಂದು ಕರೆಯುತ್ತಾರೆ. ಅದೇ ಬಾವಿಯ ನೀರನ್ನು ಪೂಜೆಗೆ ಬಳಸುತ್ತಾರೆ.

**ವಿಜ್ಞಾನಕ್ಕೆ ಸವಾಲಾದ ಜಟೆ:** ಮಹಾಲಿಂಗೇಶ್ವರರನ್ನು ಸಿದ್ದಾಯಿ ವಜ್ಜರಮಟ್ಟಿ ಎಂಬ ವಯೋವೃದ್ದೆ ಆರಾಧಿಸುತ್ತಿದ್ದಳು. ಒಂದು ದಿನ ಶ್ರೀ ಮಹಾಲಿಂಗೇಶ್ವರರು ಇಲ್ಲಿಂದ ತೆರಳುವ ಸಮಯ ಬಂದಾಗ ನೆನಪಿಗಾಗಿ ತಮ್ಮ ತಲೆಯಲ್ಲಿನ ಜಡೆಯ ಭಾಗ (ಕೂದಲು) ಕತ್ತರಿಸಿ ನೀಡಿದ್ದರು. ಅದೇ ಜಡೆಯನ್ನು ಸಿದ್ದಾಯಿ ನಿತ್ಯ ಪೂಜಿಸಿ ಕೊನೆಗೊಂದು ದಿನ ಸಿದ್ದಾಯಿ ಮರಣಿಸಿದರು. ಆಗ ಗೇಣುದ್ದ ಇದ್ದ ಜಡೆ ಇಂದು ಐದಾರು ಸುತ್ತು ಶಿಂಬೆಯಾಗಿ ಬೆಳೆಯುತ್ತಿರುವುದು ವಿಜ್ಞಾನಕ್ಕೆ ಸವಾಲಾಗಿದೆ. ಮಹಾಲಿಂಗೇಶ್ವರ ಜಟಾಭಿಷೇಕ ಮಾಡಿಸಿದರೆ ಇಷ್ಟಾರ್ಥಸಿದ್ದಿಯಾಗುತ್ತದೆ ಎಂದು ಭಕ್ತರು ನಂಬಿದ್ದಾರೆ. ಶ್ರಾವಣದಲ್ಲಿ ಮತ್ತು ಆಗಾಗ ಸೋಮವಾರ ಭಕ್ತರಿಂದ ಹರಕೆಯ ಜಟಾಭಿಷೇಕ ನೆರವೇರುತ್ತದೆ. ಪ್ರತಿ ವರ್ಷ ಯುಗಾದಿ ಹಾಗೂ ಜಾತ್ರೆಯಲ್ಲಿ ಶ್ರೀಮಠದ ವತಿಯಿಂದ ಸಾರ್ವಜನಿಕ ಜಟಾಭಿಷೇಕ ಜರುಗುತ್ತದೆ.

**ಹರಿವಾಣ ಕಟ್ಟೆ ಲೂಟಿ:** ಸುತ್ತಲೂ ಹತ್ತಾರು ಗ್ರಾಮಗಳ ರೈತರು ತಮ್ಮ ಗದ್ದೆಯಲ್ಲಿ ಬೆಳೆದ ಕಬ್ಬು, ತೆನೆ, ಕಾಂಡ, ಎಲೆ, ಹೂ ಸೇರಿದಂತೆ ನಾನಾ ಉತ್ಪನ್ನಗಳನ್ನು ತಂದು ಮಠದಲ್ಲಿ ಹಂದರ ನಿರ್ಮಿಸುತ್ತಾರೆ. ಸಂಜೆ ಭಕ್ತರೆಲ್ಲರೂ ಸೇರಿ ಅದನ್ನು ಕೆಡವಿ ಲೂಟಿ ಮಾಡಿ ಕೈಗೆ ಸಿಕ್ಕ ಭಗವನ್ನು ಭಕ್ತಿಯಿಂದ ಮನೆಗೆ ಒಯ್ಯುತ್ತಾರೆ. ಅಂಥವರ ಮನೆಯಲ್ಲಿ ಸಮೃದ್ದಿ ನೆಲೆಸುತತದೆ ಎಂಬ ನಂಬಿಕೆ ಇದೆ. **ಹರಕೆಗೆ ದೀಡ ನಮಸ್ಕಾರ:** ಮೊದಲ ರಥೋತ್ಸವದ ನಸುಕಿನ ಜಾವ 1ಗಂಟೆಯಿಂದಲೇ ಭಕ್ತರು ಸಾಲುಗಟ್ಟಿ ದೀಡ ನಮಸ್ಕಾರ ಸಲ್ಲಿಸುತ್ತಾರೆ. ಇಡೀ ದಿನ ಭಕ್ತರು ಕಳಚಿದ ಬಟ್ಟೆ ಎರಡು ಟ್ರ್ಯಾಕ್ಟರ್ ಟ್ರಾಲಿ ತುಂಬುವಷ್ಟು ಸಂಗ್ರಹವಾಗುತ್ತವೆ. ಭಕ್ತರು ಎಸೆದ ಕೈಯಲ್ಲಿನ ದಾಂಟು ಒಂದು ಬಣಿವೆಯಾಗುವಷ್ಟು ಸಂಗ್ರಹವಾಗುತ್ತವೆ.

### ಕಟ್ಟಡ ಮಾಲೀಕರ ಗಮನಕ್ಕೆ

**ಗದಗ:** 2025–26 ನೇ ಸಾಲಿನ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕರ/ಬಾಲಕಿಯರ ವಸತಿ ನಿಲಯಗಳಿಗೆ ತಲಾ 100 ವಿದ್ಯಾರ್ಥಿಗಳಿಗೆ ಬೇಕಾಗುವ 1 ವಸತಿ ನಿಲಯಕ್ಕೆ 1 ಬಾಡಿಗೆ ಕಟ್ಟಡ ಅವಶ್ಯವಿದ್ದು 100 ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಇರುವ ಪ್ರತ್ಯೇಕ ಕೊಠಡಿಗಳನ್ನು ಶೌಚಾಲಯ, ಸ್ನಾನಗೃಹ ವಿಶಾಲವಾದ ಅಡುಗೆ ಮನೆ, ವಿದ್ಯುತ್ ಸೌಲಭ್ಯ, ಬೋರವೆಲ್ ಹೊಂದಿರುವ ಸುಸಜ್ಜಿತ 1 ವಸತಿ ನಿಲಯಕ್ಕೆ 1 ಕಟ್ಟಡ ಅವಶ್ಯಕತೆ ಇರುತ್ತದೆ. ಕಟ್ಟಡವನ್ನು ಬಾಡಿಗೆ ರೂಪದಲ್ಲಿ ಕೊಡಲು ಬಯಸುವ ಕಟ್ಟಡ ಮಾಲೀಕರು ತಕ್ಷಣ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಎಸ್.ಪಿ. ಆಫೀಸ್ ಎದುರಿಗೆ ಹೊಸ ಬಸ್ ನಿಲ್ದಾಣ ಹಿಂದುಗಡೆ ಗದಗ ಇವರನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08372–297258, ಮೊಬೈಲ್ ಸಂಖ್ಯೆ: 9480843128 ಸಂಪರ್ಕಿಸಬಹುದಾಗಿದೆ.


### ನಿಧನ ವಾರ್ತೆ

**ದಾಮೋದರ ನಾಯಿಕ**



**ಮೋಳೆ:** ಅಥಣಿ ಪಟ್ಟಣದ ನಿವಾಸಿ ನಿವೃತ್ ಗ್ರಾಮ ಪಂಚಾಯತ್ ಕಾರ್ಯದರ್ಶಿ ದಾಮೋದರ ಆನಂದರಾವ್ ನಾಯಿಕ(85) ನೇ ವಯಸ್ಸಿನಲ್ಲಿ ನಿಧನರಾದರು, ಮೃತರಿಗೆಓರ್ವ ಪುತ್ರಿ, ಇಬ್ಬರು ಪುತ್ರರು ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಬಿಟ್ಟು ಅಗಲಿದ್ದಾರೆ.

# ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮ ದಿನಾಚರಣೆ



**ಮೋಳೆ;** ತನ್ನ ಹುಟ್ಟು ಹಬ್ಬಕ್ಕೆ ಶುಭಾಷಯ ಕೋರಲಿಲ್ಲ, ಎಂಬುದಕ್ಕೆ ಜೀವಮಾನವಿಡಿ ಮಾತು ಬಿಡುವ ಇಂದಿನ ದಿನಮಾನಗಳಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣರು ತಮ್ಮ ಹುಟ್ಟು ಹಬ್ಬವನ್ನು ಆಚರಿಸಿಕೊಳ್ಳದೆ, ಅದನ್ನು ಶಿಕ್ಷಕರ ದಿನಾಚರಣೆಯನ್ನಾಗಿ ಆಚರಿಸುವಂತೆ ಹೇಳಿ ವಿಶ್ವ ವಿಶ್ವವಿಖ್ಯಾತರಾದರು ಎಂದು ಶ್ರೀ ಸಿದ್ದಲಿಂಗ ಶಿವಾಚಾರ್ಯ ವೇದಗಮ ಸಂಸ್ಕೃತ ಪಾಠಶಾಲೆಯ ಪ್ರಾಚಾರ್ಯ ಶ್ರೀ ಶ್ರೀಶೈಲ ಶಾಸ್ತ್ರೀಗಳು ಅಭಿಪ್ರಾಯಪಟ್ಟರು

ಅವರು ಶುಕ್ರವಾರ ದಿ. 5 ರಂದು ಉಗಾರ ಜೈನ ಸಮಾಜದ ಕಾರ್ಯಾಲಯದಲ್ಲಿ ಜಿಲ್ಲಾ ಪಂಚಾಯತ ಬೆಳಗಾವಿ ಸಾರ್ವಜನಿಕ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಕಾಗವಾಡ, ತಾಲೂಕಾ ಆಡಳಿತ ಇವುಗಳ ಸಂಯುಕ್ತಾಶ್ರಯದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮ ದಿನಾಚರಣೆ ಅಂಗವಾಗಿ ಏರ್ಪಡಿಲಾಗಿದ್ದ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರ ಸನ್ಮಾನ ಸಮಾರಂಭದಲ್ಲಿ ಧಿವ್ಯ ಸಾನಿದ್ಯವಹಿಸಿ ಮಾತನಾಡಿದ ಅವರು ಸಾಮಾನ್ಯವಾಗಿ ನಮ್ಮ ಹುಟ್ಟುಹಬ್ಬ ಇದ್ದಾಗ ನಮ್ಮೆಲ್ಲರ ಬಯಕೆ ಎಲ್ಲರು ನಮ್ಮನ್ನು ಅಭಿನಂಧಿಸಲಿ, ನಮ್ಮ ಹುಟ್ಟುಹಬ್ಬವನ್ನು ವಿಜ್ರಂಬನೆಯಿಂದ ಆಚರಿಸಲಿ ಎಂಬ ಭಾವನೆ ಹೆಚ್ಚಾಗಿರುತ್ತದೆ. ಆದರೆ ಒಬ್ಬ ಅತ್ಯೂತ್ತಮ ಶಿಕ್ಷಕರಾದ ಡಾ.ಸರ್ವಪಲ್ಲಿ ರಾಧಾಕೃಷ್ಣರ ಭಾವನೆ ಹೀಗಿತ್ತು ಅದೇನೆಂದರೆ ಕೇವಲ ನನ್ನ ಹುಟ್ಟು ಹಬ್ಬವನ್ನು ಆಚರಿಸುವುದರಲ್ಲಿ ನನಗೆ ಸಂತೋಷವಿಲ್ಲ, ನನ್ನ ಹುಟ್ಟು ಹಬ್ಬದ ದಿನ ಸಮಸ್ತ ಶಿಕ್ಷಕರದಿನವನ್ನಾಗಿ ಆಚರಿಸಿ ಜಗತ್ತಿಗೆ ಎಲ್ಲ ಶಿಕ್ಷಕರನ್ನು ಗೌರವಿಸುವಂತ ದಿನ ಇದಾಗಿರಲಿ, ಎಂಬ ಮಹಾನ್ ಆಶಯವನ್ನು ಒಬ್ಬ ಅತ್ಯೂತ್ತಮ ಶಿಕ್ಷಕ ಹೇಳಲು ಸಾಧ್ಯ. ಅದೇ ಡಾ.ಸರ್ವಪಲ್ಲಿ ರಾದಾಕೃಷ್ಣರು ಎಂದರು.

ತಹಸೀಲ್ದಾರ ರವೀಂದ್ರ ಹಾದಿಮನಿ ಮಾತನಾಡಿ ಓರ್ವ ಉತ್ತಮ ಗುರು ತನ್ನ ವ್ಯಕ್ತಿತ್ವ ,ಪ್ರಥಿಭೆ, ಪಾಡಿತ್ಯ ಹಾಗೂ ಆದರ್ಶ ಗುಣಗಳಿಂದ ಸಾಮಾನ್ಯ ವಿದ್ಯಾರ್ಥಿಯ ಬದುಕಿನ ಗತಿಯನ್ನು ಬದಲಿಸುವ ಶಕ್ತಿ ಹೊಂದಿದ್ದಾನೆ. ಅಂಥ ಶಕ್ತಿ ಶಿಕ್ಷಕರಲ್ಲಿದೆ. ವೃತ್ತಿಯಿಂದ ನಿವೃತ್ತಿಯಾದರೂ ಪ್ರವೃತ್ತಿಯಿಂದ ಎಂದಿಗೂ ನಿವೃತ್ತಿಯಾಗದ ಹುದ್ದೆ ಎಂದರೆ ಶಿಕ್ಷಕ ಹುದ್ದೆ ಎಂದರು.

ಅತಿಥಿಗಳಾಗಿ ತಹಸೀಲ್ದಾರ ರವೀಂದ್ರ ಹಾದಿಮನಿ ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಭಿಯಂತರ ವೀರಣ್ಣ ವಾಲಿ ಮೂಡಲಗಿಯ ಮಕ್ಕಳ ಸಾಹಿತಿ ಸಂಗಮೇಶ, ಗುಜಗೊಂಡ, ಪುರಸಭೆ ಅಧ್ಯಕ್ಷೆ ಫಾತಿಮಾ ನದಾಫ, ಮುಖ್ಯಾಧಿಕಾರಿ ಮಹಾಂತೇಶ ಕವಲಾಪುರ, ಕಾಗವಾಡ ಕ್ಷೇತ್ರ ಶಿಕ್ಷಣಾಧಿಕಾರಿ ಪಿ.ಬಿ ಮದಭಾವಿ, ಸಿಡಿಪಿಓ ರವೀಂದ್ರ ಗುದಗೆನ್ನವರ, ಎಂ.ಜಿ.ಸಂಕಪಾಳ, ಎಸ್.ಎಸ್.ಭಾವಿ, ಅಣ್ಣಾಸಾಹೇಬ ದೇವಮೋರೆ, ದೈಹಿಕ ಶಿಕ್ಷಾಧಿಕಾರಿ ಎರ್ಮ. ವೈ.ಪೂಜಾರಿ, ಬಿಸಿಯೂಟ ಅಧಿಕಾರಿ ಮಲ್ಲಿಕಾರ್ಜುನ ನಾಮದಾರ ಸೇರಿದಂತೆ ವಿವಿಧ ಪದಾಧಿಕಾರಿಗಳು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

# ಡಾ. ಸರ್ವಪಲ್ಲಿ ರಾಧಾಕೃಷ್ಣರು ಶಿಕ್ಷಕ ಸಮೂಹಕ್ಕೆ ದಾರಿದೀಪ



**ಸಿಂದಗಿ;** ಡಾ. ಸರ್ವಪಲ್ಲಿ ರಾಧಾಕೃಷ್ಣರು ವಿವಿಯ ಕುಲಪತಿಗಳಾಗಿ, ಪ್ರಾಧ್ಯಾಪಕರಾಗಿ, ಈ ದೇಶದ ಉಪರಾಷ್ಟ್ರಪತಿಗಳಾಗಿ, ರಾಷ್ಟ್ರಪತಿಗಳಾಗಿ ಕಾರ್ಯನಿರ್ವಹಿಸಿ ಶಿಕ್ಷಕ ಸಮೂಹಕ್ಕೆ ದಾರಿದೀಪವಾಗಿ ಅವರ ಜನ್ಮದಿನವನ್ನು ಶಿಕ್ಷಕರ ದಿನವನ್ನಾಗಿ ಆಚರಿಸುತ್ತಿರುವುದು ಶಿಕ್ಷಕರು ನೀಡುವ ಶಿಕ್ಷಣ ಜೀವನುದ್ದಕ್ಕೂ ಮರೆಯದಂತಹ ಸಂಬಂಧ ಬೆಳೆಸುತ್ತಾರೆ ಎಂದು ಪುರಸಭೆ ಅಧ್ಯಕ್ಷ ಡಾ.ಶಾಂತವೀರ ಮನಗೂಳಿ ಹೇಳಿದರು.

ಪಟ್ಟಣದ ಗುಂದಗಿ ಪಂಕ್ಷನ್ ಹಾಲ್‌ನಲ್ಲಿ ಜಿಪಂ, ಸಾರ್ವಜನಿಕ ಶಿಕ್ಷಣ ಇಲಾಖೆ ವಿಜಯಪುರ ಹಾಗೂ ತಾಲೂಕು ಆಡಳೀತ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಮತ್ತು ಕ್ಷೇತ್ರ ಸಮನ್ವಯಾಧಿಕಾರಿ ಕಾರ್ಯಾಲಯ ಹಾಗೂ ಶಿಕ್ಷಕರ ದಿನೋತ್ಸವ ಸಮಿತಿಯ ಸಹಯೋಗದಲ್ಲಿ ಹಮ್ಮಿಕೊಂಡ ಡಾ.ಸರ್ವಪಲ್ಲಿ ರಾಧಾಕೃಷ್ಣನ್‌ರ 137ನೇ ಜನ್ಮದಿನೋತ್ಸವವನ್ನು ಉದ್ಘಾಟಿಸಿ ಮಾತನಾಡಿ, ಸಿಂದಗಿ ಪುರಸಭೆಯು ಇಂದು ನಗರ ಸಭೆಯಾಗಿ ಮೇಲ್ದರ್ಜೆಗೆರಿದೆ ಇದರಿಂದ ಸಾಕಷ್ಟು ಅನುದಾನ ಹರಿದು ಬರುತ್ತದೆ ಅದನ್ನು ಶಾಲಾ-ಕಾಲೇಜು, ಅಂಗನವಾಡಿ ಕೇಂದ್ರಗಳನ್ನು ನಿರ್ಮಾಣ ಮಾಡುವ ಮೂಲಕ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಮುನ್ನುಡಿ ಇಡುತ್ತೇವೆ ಎಂದು ತಿಳಿಸಿದರು.

ಕಲಬುರ್ಗಿ ವಿವಿಯ ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೋ.ಎಚ್.ಟಿ.ಪೋತೆ ಅತಿಥಿ ಉಪನ್ಯಾಸ ನೀಡಿ, ದೈವದ ಬೆರಗು, ಅಕ್ಷರ ಬೆರಗು ಶಿಕ್ಷಕ. ಬ್ರಹ್ಮನಿಗಿಂತ ದೊಡ್ಡ ವ್ಯಕ್ತಿ ಗುರುವಾಗಿದ್ದಾನೆ.

ಪ್ರತಿಯೊಂದು ಕ್ಷೇತ್ರದಲ್ಲಿ ಗುರುವಿಲ್ಲದಿದ್ದರೆ ಸಾಧನೆ ಶೂನ್ಯ ಬ್ರಹ್ಮ ಅಂದಾಗ ಹಾಗೆ ಬ್ರಹ್ಮನಿಗೆ ಗುರು ಅಂದಿಲ್ಲ ಅದಕ್ಕೆ ಪರಮೇಶನಿಗೂ ಮಿರಿದ ಶಕ್ತಿ ಗುರುವಿನ ಸ್ಥಾನದಲ್ಲಿದೆ ಅಲ್ಲದೆ ಶಿಕ್ಷಣ ಕ್ಷೇತ್ರಕ್ಕೆ ಬುದ್ಧ, ಬಸವ, ಸಾವಿತ್ರಿಬಾಯಿ ಫುಲೆ ಅವರ ಕೊಡುಗೆ ಅಪಾರವಾಗಿದೆ ಎಂದರು.

ಈ ಸಂದರ್ಭದಲ್ಲಿ ಎಸ್‌ಎಸ್. ಎಲ್ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಮೂರು ವಿದ್ಯಾರ್ಥಿಗಳಿಗೆ ಲ್ಯಾಪಟಾಪ ನೀಡಿ, 83ಜನ ಸೇವಾ ನಿವೃತ್ ಶಿಕ್ಷಕರಿಗೆ, 10 ಜನ ಮೃತ ಶಿಕ್ಷಕರ ಕುಟುಂಬದ ಸದಸಯರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಗ್ಯಾರೆಂಟಿ ಯೋಜನೆಯ ಅಧ್ಯಕ್ಷರಾದ ಶ್ರೀಶೈಲ ಕವಲಗಿ, ಅಶೋಕ ಕೊಳಾರಿ, ದೇವರ ಹಿಪ್ಪರಗಿ ತಾಪಂ ಅಧಿಕಾರಿ ಭಾರತಿ ಚಲುವಯ್ಯ, ಕ್ಷೇತ್ರ ಸಮನ್ವಯಾಧಿಕಾರಿ ಆಯ್. ಎಸ್.ಟಕ್ಕೆ, ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಆನಂದ ಭೂಸನೂರ, ದೇವರ ಹಿಪ್ಪರಗಿ ಅಧ್ಯಕ್ಷ ಎ.ಎಚ್.ವಾಲೀಕಾರ, ಪ್ರೌಡಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಆರ್.ಎಚ್.ಬಿರಾದಾರ, ನೌಕರರ ಸಂಘದ ಅಧ್ಯಕ್ಷ ಅಶೋಕ ತೆಲ್ಲೂರ, ದೇವರ ಹಿಪ್ಪರಗಿ ಪ್ರೌಡಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಎನ್ ಯಾಳವಾರ, ಮಹಾಮಂಡಳ ಅಧ್ಯಕ್ಷ ಅರುಣ ನಾಯ್ಕೊಡಿ, ಅನುದಾನಿತ ಪ್ರೌಡಶಾಲೆಗಳ ಅಧ್ಯಕ್ಷ ಬುಳ್ಳಪ್ಪ ಡಿ, ಶಿಕ್ಷಣ ಸಂಯೋಜಕ ಐ.ಎಫ್ ಬಾಲ್ಕಿ, ಅಕ್ಷರ ದಾಸೋಹ ಅಧಿಕಾರಿ ಎ.ಎಸ್. ಡೋಣೂರ, ದೈಹಿಕ ಶಿಕ್ಷಣ ಪರ್ರಿಕ್ಷಕ ರಮೇಶ ಬಿರಾದಾರ, ಶಿಕ್ಷಕಿ ಶೋಭಾ ಚಿಗರಿ ಸೇರಿದಂತೆ ಅನೇಕರು ವೇದಿಕೆ ಮೇಲಿದ್ದರು.

# ಸಿಂದಗಿ ನಗರಸಭೆಯಾಗಿ ಮೇಲ್ದರ್ಜೆಗೇರಿಸಲು ಅನುಮೋದನೆ



**ಸಿಂದಗಿ:** ಪಟ್ಟಣದ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ. ಇದಕ್ಕಾಗಿ ಶಾಸಕ ಅಶೋಕ ಮನಗೂಳಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಬೈರತಿ ಸುರೇಶ ಅವರಿಗೆ ಪಟ್ಟಣದ ಜನತೆ ಹಾಗೂ ಪುರಸಭೆಯಿಂದ ಅಭಿನಂದಿಸುವುದಾಗಿ ಪುರಸಭೆ ಅಧ್ಯಕ್ಷ ಡಾ.ಶಾಂತವೀರ ಮನಗೂಳಿ ಹೇಳಿದರು.

ಸಿಂದಗಿ ಪಟ್ಟಣದ ಮುಖ್ಯ ರಸ್ತೆಯ ಜಗಜ್ಯೋತಿ ಬಸವೇಶ್ವರ ವೃತ್ತದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಸಿಂದಗಿ ಪುರಸಭೆಯನ್ನು ನಗರಸಭೆಯನ್ನಾಗಿ ರಾಜ್ಯ ಸರ್ಕಾರ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಪುರಸಭೆಯ ಸದಸ್ಯರು ಬಸವೇಶ್ವರ ವೃತ್ತದಲ್ಲಿ ಪಟಾಕಿ ಸಿಡಿಸಿ ಸಂಭ್ರಮಾಚರಿಸಿ ಮಾತನಾಡಿದ ಅವರು, ಈ ದಿನ ಸಿಂದಗಿ ಇತಿಹಾಸದಲ್ಲಿ ಪುಟದಲ್ಲಿ ಸುವರ್ಣಾಕ್ಷರಗಳಿಂದ ಬರೆದಿಡಬಹುದಾದ ದಿನವಾಗಿದೆ. ಶಾಸಕರ ಸತತ ಪರಿಶ್ರಮ, ಹಿತಾಸಕ್ತಿ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಹಕಾರದಿಂದ ನಗರಸಭೆಯಾಗಿ ಮೇಲ್ದರ್ಜೆಗೆ ಏರಿದೆ. ಇದುವರೆಗೂ ಪಟ್ಟಣ ಎಂದು ಕರೆಯುತ್ತಿದ್ದ ನಾವು ಇಂದಿನಿಂದ ಸಿಂದಗಿ ನಗರವಾಗಿದೆ ಎಂದರು. ಈ ವೇಳೆ ಬ್ಲಾಕ್ ಕಾಂಗ್ರೆಸ್ ತಾಲೂಕಾಧ್ಯಕ್ಷ ಸುರೇಶ ಪೂಜಾರಿ ಮಾತನಾಡಿ, ದಿ. ಎಂ.ಸಿ.ಮನಗೂಳಿ ಅವರ ಅದಮ್ಯ ಕನಸಾಗಿತ್ತು. ಕಾರಣಾಂತರಗಳಿಂದ ಕೈಗೂಡದಿದ್ದರು ಈಗ ಅವರ ಪುತ್ರನಿಂದಲೇ ಕನಸು ಈಡೇರಿದ್ದು, ಅದು ನಮ್ಮೆಲ್ಲರಲ್ಲಿ ಸಂತಸ ದ್ವಿಗುಣಗೊಳಿಸಿದೆ. ಆದರೆ ಛಲದಂಕ ಮಲ್ಲ ಶಾಸಕ ಅಶೋಕ ಮನಗೂಳಿ ಅವರು ನಗರಸಭೆಯಾಗಿ ಮೇಲ್ದರ್ಜೆಗೇರಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದರು.

ಸಂಭ್ರಮಾಚರಣೆಯಲ್ಲಿ ಪುರಸಭೆ ಉಪಾಧ್ಯಕ್ಷ ಸಂದೀಪ ಚೌರ, ಸದಸ್ಯರಾದ ಬಾಷಾಸಾಬ ತಾಂಬೋಳಿ, ಬಸವರಾಜ ಯರನಾಳ, ಭೀಮು ಕಲಾಲ, ಗೊಲ್ಲಾಳ ಬಂಕಲಗಿ, ಮುಖ್ಯಾಧಿಕಾರಿ ಎಸ.ರಾಜಶೇಖರ, ಸಿದ್ದು ಅಂಗಡಿ, ದಯಾನಂದ ಇವಣಿ, ಮುತ್ತು ಪಟ್ಟಣಶೆಟ್ಟಿ, ಬಸವರಾಜ ಸಜ್ಜನ, ಶರಣಪ್ಪ ಸುಲ್ಪಿ, ರಜತ ತಾಂಬೆ, ಮೋಶಿನ ಬೀಳಗಿ, ಸುನಂದಾ ಯಂಪುರೆ, ಅಬ್ಬಾಸಲಿ ಕಾಕಂಡಕಿ ಸೇರಿದಂತೆ ಸಾರ್ವಜನಿಕರು ಇದ್ದರು.

# ಮುಂದೆ ಗುರಿ ಹಿಂದೆ ಗುರು ಇರಲಿ

**ಬಾಗಲಕೋಟೆ:** ಅವರ ಅಮೂಲ್ಯವಾದ ಆಲೋಚನೆಗಳು ನಮಗೆ ಹೊಸ ಜೀವನ ಮಾರ್ಗವನ್ನು ತೋರಿಸುತ್ತವೆ. ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಣ ತಜ್ಞರಾಗಿ ದೇಶಕ್ಕೆ ಅತ್ಯಮೂಲ್ಯವಾದ ಕೊಡುಗೆ ನೀಡಿದ್ದಾರೆ ಎಂದು ಡಾ. ತಪಸ್ವತ ತ್ರಿಪಾಠಿ ತಿಳಿಸಿದರು.

ನಗರದ ಎಂ.ಆರ್.ಎನ್ ಆಯುರ್ವೇದಿಕ ಮೆಡಿಕಲ್ ಕಾಲೇಜಿನ ಡಾ. ಶಿವಕುಮಾರ್ ಗಂಗಲ, ಡೀನ್ ಹಾಗೂ ಕಾಲೇಜ ಆಡಳಿತಾಧಿಕಾರಿಗಳು ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಸ್ಮರಣಾರ್ಥ ನಡೆದ ಶಿಕ್ಷಕರ ದಿನಾಚರಣೆಯಲ್ಲಿ ಬಾಗವಹಿಸಿ ಮಾತನಾಡಿ. ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಸ್ಮರಣಾರ್ಥವಾಗಿ ಭಾರತದಲ್ಲಿ ಸೆಪ್ಟೆಂಬರ್ 5 ರಂದು ಶಿಕ್ಷಕರ ದಿನವನ್ನು ಆಚರಿಸಲಾಗುತ್ತದೆ. ಅವರು ಮಹಾನ್ ವಾಗ್ಮಿ, ವಿದ್ವಾಂಸ, ತತ್ವಜ್ಞಾನಿ, ಶಿಕ್ಷಣ ತಜ್ಞ ಮತ್ತು ರಾಜನೀತಿಜ್ಞರಾಗಿದ್ದರು. ಅವರು ಸ್ವತಂತ್ರ ಭಾರತದ ಮೊದಲ ಉಪರಾಷ್ಟ್ರಪತಿ ಮತ್ತು ಎರಡನೇ ರಾಷ್ಟ್ರಪತಿಯೂ ಹೌದು. ಶಿಕ್ಷಣ ಕ್ಷೇತ್ರಕ್ಕೆ ಅವರ ಕೊಡುಗೆ ಅನನ್ಯ, ಅವರು ಉಪನಿಷತ್ತುಗಳ ವ್ಯಾಖ್ಯಾನಕಾರರೂ ಆಗಿದ್ದರು. ಡಾ. ಮುರಳಿಧರ ಬಡಿಗೇರ ಮಾತನಾಡಿ, ಜ್ಞಾನವು ನಮಗೆ ಶಕ್ತಿಯನ್ನು ನೀಡುತ್ತದೆ, ಪ್ರೀತಿ ನಮಗೆ ಪೂರ್ಣತೆಯನ್ನು ನೀಡುತ್ತದೆ ಹಾಗೂ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಆದರ್ಶಗಳನ್ನು ನಾವು ಅಳವಡಿಸಿಕೊಳ್ಳಬೇಂದು ಹೇಳಿದರು. ಕಾಯಕ್ರಮದಲ್ಲಿ ಡಾ ಶಿವಕುಮಾರ್ ಗಂಗಲ, ಡೀನ್ ಹಾಗೂ ಕಾಲೇಜ ಆಡಳಿತಾಧಿಕಾರಿಗಳು ಮೆಡಿಕಲ್ ಕಾಲೇಜಿನ ಪ್ರಾಂಶುಪಾಲ ಡಾ. ಪ್ರಹ್ಲಾದ್ ಗಂಗಾವತಿ ಹಾಗೂ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕರಾದ ದೀಪಾ ಗಂಗಲ್, ಮಹಾತೇಂಶ ಹೀರಮಠ ಮತ್ತು ಶಶಿಕಾಲ್ ಕುರಬೇಟ್ ಈಶ್ವರ ಪಾಟೀಲ್, ವೆಂಕಟೇಶ ಗೌಡರ ಹಾಗೂ ಇನ್ನುಳಿದ ಎಲ್ಲ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಂಭ್ರಮದ ಈದ್ ಮಿಲಾದ ಆಚರಣೆ



**ಸಿಂದಗಿ;** 15 ವರ್ಷಗಳ ಹಿಂದೆ ಈ ಜಗತ್ತಿಗೆ ಒಬ್ಬ ಮಹಾವಿಜ್ಞಾನಿ, ಮಹಾಶಿಕ್ಷಕ ಮಹ್ಮದ ಪೈಗಂಬರರು ಜನ್ಮತಾಳಿದ್ದರು ಅವರ ಸವಿನೆಪಿಗಾಗಿ ಈದ್ ಮಿಲಾದ ಆಚರಸಿಲಾಗುತ್ತಿದೆ ಅಂತವರ ತತ್ವಾದರ್ಶಗಳನ್ನು ನಾವೆಲ್ಲರು ಜೀವನದಲ್ಲಿ ಅಳವಡಿಸಿಕೊಂಡು ಅವರ ಮಾರ್ಗದಲ್ಲಿ ಸಾಗೋಣ ಎಂದು ಪುರಸಭೆ ಅಧ್ಯಕ್ಷ ಡಾ. ಶಾಂತವೀರ ಮನಗೂಳಿ ಹೇಳಿದರು.

ಪಟ್ಟಣದ ಗುಂದಗಿ ಫಂಕ್ಷನ್ ಹಾಲ್ ಹತ್ತಿರ ಪುರಸಭೆ ಮಾಜಿ ಅಧ್ಯಕ್ಷ ಬಾಷಾಸಾಬ ತಾಂಬೋಳಿ ನೇತೃತ್ವದಲ್ಲಿ ಹಮ್ಮಿಕೊಂಡ ಈದ್ ಮಿಲಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಮಹಾಶಿಕ್ಷಕ ತಮ್ಮಲ್ಲಿ ಈ ಜಗತ್ತಿಗೆ ನೀಡಿದ ಶಿಕ್ಷಣವಾಗಲಿ. ಬೋಧನೆ ಮಾಡಿದ್ದು ಒಂದೆ ಸಮಾಜಕ್ಕೆ ನೀಡಿಲ್ಲ. ಎಲ್ಲ ಸಮಾಜಗಳಿಗೆ ಬೇದ ವಿಲ್ಲದೆ ಜ್ಞಾನವನ್ನು ನೀಡಿದ್ದಾರೆ ಅಂತವರ ಮಾರ್ಗದರ್ಶನದಲ್ಲಿ ನಾವೆಲ್ಲರು ನಡೆಯೋಣ ಎಂದರು.

ಈ ಸಂದರ್ಭದಲ್ಲಿ ಗಾಜಿ ಹುಸೇನ ದರ್ಗಾದ ಮಗರಬಿ ಸಾಜಿದ್ ಸಾನಿದ್ಯ ವಹಿಸಿದ್ದರು. ಗಣ್ಯ ವರ್ತಕ ಅಶೋಕ ವಾರದ, ಸಿಪಿಐ ನಾನಾಗೌಡ ಪೋಲೀಸಪಾಟೀಲ, ಸ್ಥಾಯಿ ಸಮಿತಿ ಅಧ್ಯಕ್ಷ ಶ್ರೀಶೈಲ ಬೀರಗೊಂಡ, ಪುರಸಭೆ ಸದಸ್ಯ ಬಾಷಾಸಾಬ ತಾಂಬೋಳಿ, ಇಕ್ಬಾಲ ತಲಕಾರಿ, ಬಂದೆನವಾಜ ಹುಂಡೇಕಾರ, ಬಸೀರ ಮರ್ತೂರ, ಪತ್ರಕರ್ತ ಪಂಡಿತ ಯಂಪೂರೆ, ರಹೀಮ ಹುಂಡೇಕರ, ರವಿ ಹೋಳಿ, ಸಿದ್ದು ಮಲ್ಲೇದ, ತಿಪ್ಪಣ್ಣ ರಾಠೋಡ, ಇನ್ನೂಸ್ ಕೊತಂಬರಿ, ಮಹಿಬೂಬ ಆಳಂದ, ದಾವುದ ಸೌದಾಗರ, ಶಿರಸ್ತೆದಾರ ಐ.ಎಂ.ಮಕಾನದಾರ, ಬಾಬಣ್ಣಿ ಮರ್ತೂರ ಸೇರಿದಂತೆ ಅನೇಕರು ವೇದಿಕೆ ಮೇಲಿದ್ದರು.

# ಜಾನಪದ ಕಲೆ ಗ್ರಾಮೀಣ ಜನರ ಜೀವನ ಪ್ರತಿಬಿಂಬಿಸುತ್ತವೆ



**ಮುದ್ದೇಬಿಹಾಳ:** ಜಾನಪದ ಕಲೆಯು ನಮ್ಮ ಸಂಸ್ಕೃತಿಯನ್ನು ಹಾಗೂ ಗ್ರಾಮೀಣ ಭಾಗದ ಜೀವನವನ್ನು ಪ್ರತಿಫಲಿಸುತ್ತವೆ ಇವುಗಳನ್ನು ಉಳಿಸಿ ಬೆಳೆಸುವದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಸಮಾಜ ಸೇವಕ ನೇತಾಜಿ ನಲವಡೆ ಅವರು ಹೇಳಿದರು.

ಸರ್ಕಾರಿ ಪಿಯುಸಿ ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ಯುವ ಒಕ್ಕೂಟದ ವತಿಯಿಂದ ಏರ್ಪಡಿಸಲಾದ 66 ನೇ ವಿಶ್ವ ಜಾನಪದ ದಿನಾಚರಣೆ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ಆಧುನಿಕ ಭರಾಟೆಯಲ್ಲಿ ನಮ್ಮ ಜನಪದ ಕಲೆಗಳು ಮರೆಯಾಗುತ್ತಿವೆ ಅನೇಕ ಕಲಾವಿದರು ಎಲೆಮರೆ ಕಾಯಿಯಂತೆ ನಮ್ಮ ನಡುವೆ ಬದುಕುತ್ತಿದ್ದಾರೆ ಅಂತವರನ್ನು ಇಂತಹ ವೇದಿಕೆಗೆ ಕರೆತಂದು ಜನಪದ ಕಲೆಗಳನ್ನು ಪ್ರದರ್ಶಿಸಿ ಇಂದಿನ ಪೀಳಿಗೆಗೆ ಪರಿಚಯಿಸುತ್ತಿರುವ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಹಾಗೂ ಜನಪದ ಪರಿಷತ್ ನ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಬಾಗಲಕೋಟೆಯ ಕರ್ನಾಟಕ ಪತ್ರಕರ್ತ ಸಂಘದ ಜಿಲ್ಲಾಧ್ಯಕ್ಷ ಡಡಿ.ಬಿ. ವಿಜಯಶಂಕರ್ ಅವರು ಮಾತನಾಡಿ ಭಾರತೀಯ ಸಂಸ್ಕೃತಿ ಅತ್ಯಂತ ಶ್ರೀಮಂತ ಸಂಸ್ಕೃತಿಯಾಗಿದ್ದು ಬೇರೆ ಬೇರೆ ರಾಷ್ಟ್ರಗಳು ನಮ್ಮ ಈ ಸಂಸ್ಕೃತಿಯನ್ನು ಅವಲಂಬಿಸುತ್ತಾ ಸಾಗುತ್ತಿವೆ ಭಾರತೀಯರಾದ ನಾವು ಇಂತಹ ಜಾನಪದ ಸಾಹಿತ್ಯವನ್ನು ಉಳಿಸಿ ಬೆಳೆಸುವಂತಹ ಕೆಲಸ ನಮ್ಮ ಹೆಗಲಮೇಲಿದೆ ಎಂದು ಹೇಳಿದರು.

ಉಪನ್ಯಾಸಕರಾಗಿ ಆಗಮಿಸಿದ ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಅರವಿಂದ ಕೊಪ್ಪ ಅವರು ಮಾತನಾಡಿದರು.

ಪ್ರಾಂಶುಪಾಲರಾದ ಎಸ್.ಎಸ್. ಅಂಗಡಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಕಾಂಗ್ರೆಸ್ ಮುಖಂಡರಾದ ರಾಯನಗೌಡ ತಾತರಡ್ಡಿ, ಉದ್ಯಮಿ ಗಣೇಶ ಅನ್ನಗೌನಿ, ಪತ್ರಕರ್ತರಾದ ಬಿ.ಬಿ. ವಿಜಯಶಂಕರ, ಕರಾಯುನಂಒ ಜಿಲ್ಲಾಧ್ಯಕ್ಷರಾದ ದಾನಯ್ಯಸ್ವಾಮಿ ಹಿರೇಮಠ, ಸಮಾಜಸೇವಕರಾದ ಅಶೋಕ ನಾಡಗೌಡ, ಕಹಾಪ ಅಧ್ಯಕ್ಷರಾದ ಎ.ಆರ್. ಮುಲ್ಲಾ, ಜಾನಪದ ಯುವ ಬ್ರಿಗೇಡ್ ನಗರ ಸಂಚಾಲಕರಾದ ಕೃಷ್ಣ ಕುಂಬಾರ, ಉಪಾಧ್ಯಕ್ಷರಾದ ಆಕಾಶ ನಾಲತವಾಡ, ಬಸವರಾಜ ಮೇಟಿ, ದಿ. ಕರ್ನಾಟಕ ಕೋ ಆಪ್ ಬ್ಯಾಂಕ್ ನಿರ್ದೇಶಕ ಸತೀಶ್ ಓಸ್ವಾಲ್ ಉಪಸ್ತಿತರಿದ್ದರು. ಕಾರ್ಯಕ್ರಮದಲ್ಲಿ ಹಿರಿಯ ಕಿರಿಯ ಜಾನಪದ ಕಲಾವಿದರನ್ನು ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಮಯದಲ್ಲಿ ವಿವಿಧ ಸಾಂಸ್ಕೃತಿಕ ಮನರಂಜನಾ ಕಾರ್ಯಕ್ರಮಗಳು ಜರುಗಿದವು.

ಒಕ್ಕೂಟದ ಜಿಲ್ಲಾಧ್ಯಕ್ಷರಾದ ಪುಂಡಲೀಕ ಮುರಾಳ ಸ್ವಾಗತಿಸಿದರು. ಉಪನ್ಯಾಸಕ ಐ.ಬಿ. ಹಿರೇಮಠ ನಿರೂಪಿಸಿ ವಂದಿಸಿದರು.

# ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮ ದಿನಾಚರಣೆ



**ರಾಮದುರ್ಗ:** ಸ್ವಾಮಿ ವಿವೇಕಾನಂದರು ಜಗತ್ತಿಗೆ ಧರ್ಮ ಮತ್ತು ಯೋಗವನ್ನು ಪರಿಚಯಿಸಿದರೆ, ಅವರಿಂದ ಪ್ರೇರಿತರಾದ ಸರ್ವೇಪಲ್ಲಿ ಡಾ. ರಾಧಾಕೃಷ್ಣ ಅವರು ತಮ್ಮ ಚಿಂತನೆ ಮೂಲಕ ಜಗತ್ತಿಗೆ ಜ್ಞಾನ, ತತ್ವಜ್ಞಾನದ ಪರಂಪರೆಯನ್ನು ಪರಿಚಯಿಸಿದವರು ಎಂದು ಹಿರಿಯ ಶರಣ ಸಾಹಿತಿ ಪ್ರೊ. ಸಿದ್ದಣ್ಣ ಲಂಗೋಟಿ ಹೇಳಿದರು.

ಪಟ್ಟಣದ ಬ್ಯಾಂಕ್ ಆಫ್ ಬರೋಡಾ ಶಾಖೆಯ ನೇತ್ರತ್ವದಲ್ಲಿ ಗುರುವಾರ ಸಂಜೆ ಬ್ಯಾಂಕ್ ಆವರಣದಲ್ಲಿ ಏರ್ಪಡಿಸಿದ್ದ ಸರ್ವೇಪಲ್ಲಿ ಡಾ. ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ, ಶಿಕ್ಷಕರ ದಿನಾಚರಣೆ ಹಾಗೂ ಶಿಕ್ಷಕರಿಗೆ ಏರ್ಪಡಿಸಿದ್ದ ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ರಾಧಾಕೃಷ್ಣರ ಜ್ಞಾನ ಪರಂಪರೆಯ ಪ್ರತೀಕವಾದ ಶಿಕ್ಷಕರು ಮಕ್ಕಳಿಗೆ ಜಾತಿ, ಮತ ಪಂಥಗಳ ತತ್ವ ಬೇಧದ ವಿಷಬೀಜ ಬಿತ್ತದೆ, ಸರ್ವರಲ್ಲಿ ಸಮಾನತೆ, ಭ್ರಾತತ್ವ ಸಾರುವ ಸಂದೇಶಗಳನ್ನು ತಿಳಿಸಿ ಉತ್ತಮ ನಾಗರಿಕರನ್ನಾಗಿ ರೂಪಿಸಬೇಕಾಗಿದೆ. ತಾಯಿಯ ಉದರದಲ್ಲಿ ಮಾನವ ಪ್ರಥಮ ಜನ್ಮ ತಾಳಿದರೆ, ಶಾಲೆಯ ಶಿಕ್ಷಕರ ಅನುಭಾವದ ಜ್ಞಾನದಲ್ಲಿ ಎರಡನೇ ಜನ್ಮ ತಾಳಿ ಜಗತ್ತಿಗೆ ಪ್ರಕಾಶಿಸುತ್ತಾನೆ ಎಂದು ಅವರು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸುರೇಂದ್ರ ಕಾಂಬಳೆ ಮಾತನಾಡಿ, ಸಮಾಜದಲ್ಲಿ ಜಾಗೃತಿಯಿಂದ ಮುನ್ನಡೆಯಬೇಕಾದ ಅಗತ್ಯತೆ ಶಿಕ್ಷಕರ ಮೇಲಿದ್ದು, ವಿದ್ಯಾರ್ಥಿಗಳನ್ನು ಗೌರವದಿಂದ ಕಾಣುವ ಪರಿಪಾಠವನ್ನು ನಾವು ರೂಢಿಸಿಕೊಳ್ಳಬೇಕಾಗಿದೆ. ಈ ದಿಶೆಯಲ್ಲಿ ಶಿಕ್ಷಕರು ತಮ್ಮ ವೃತ್ತಿ ಪ್ರವೃತ್ತಿಯನ್ನು ಚೆನ್ನಾಗಿ ಮುಂದುವರೆಸಿಕೊಂಡು ಹೋಗಬೇಕೆಂದು ಹೇಳಿದರು.

ಸಿ.ಎಸ್. ಬೆಂಬಳಗಿ ಕಾಲೇಜಿನ ಪ್ರಾಚಾರ್ಯ ಡಾ. ಪ್ರಕಾಶ ತೆಗ್ಗಿಹಳ್ಳಿ ಮಾತನಾಡಿ, ಆರ್ಥಿಕ ವ್ಯವಹಾರದ ಜೊತೆಗೆ ಸಮಾಜಮುಖಿ ಚಿಂತನೆಗೆ ಸಮಯ ಮಿಸಲಿಟ್ಟ ಬ್ಯಾಂಕ್ ಅಫ್ ಬರೋಡಾ ಶಾಖೆಯ ಸಿಬ್ಬಂದಿ ಕಾರ್ಯ ಶ್ಲಾಘನೀಯ ಎಂದು ಬಣ್ಣಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಸುರೇಶ ಏಣಿ, ಎ.ವಿ. ಪಾಟೀಲ, ಎಂ.ಎಸ್. ನಿಜಗುಲಿ, ಎಸ್.ವಿ. ಪಾಟೀಲ, ಅಪ್ಪಣ್ಣ ವರಗನ್ನವರ, ಕೆ.ಎನ್. ಯಡ್ರಾವಿ, ಪ್ರಾ. ಎಂ.ಬಿ. ಪಾಟೀಲ, ಕೆ.ವೈ. ಗದಿಗೆನ್ನವರ, ಎಸ್. ಎಚ್. ಪ್ರಭಾಕರ, ಶಿವಾನಂದ ಜಾಮದಾರ, ಮಾರುತಿ ಜಂಗವಾಡ, ಆರ್.ಎಂ. ಪಾಟೀಲ, ಆರ್.ವೈ. ನದಾಫ್, ಗೀತಾ ಕೋತಿನತೋಟ ಅವರನ್ನು ಗೌರವಿಸಲಾಯಿತು.

ನಿವೃತ್ತ ಉಪನ್ಯಾಸಕ ಆರ್.ಎಂ. ಪಾಟೀಲ, ಪ್ರೊ. ಕಲ್ಯಾಣಮ್ಮ ಲಂಗೋಟಿ, ಬ್ಯಾಂಕ್ ಸಿಬ್ಬಂದಿಗಳಾದ ವುಡಿಮುಡಿ ಶಿವಕುಮಾರ, ಮಧು ಕಲಾಲ, ಪೃಥ್ವಿ ಮೇಲಮ್, ರಾಜೇಶ್ವರಿ ಮ್ಯಾಗೇರಿ, ವೀರಪ್ಪ ಹಲಗಿ ಸೇರಿದಂತೆ ಇತರರಿದ್ದರು.

ಬ್ಯಾಂಕ್ ಆಫ್ ಬರೋಡಾ ಶಾಖಾ ವ್ಯವಸ್ಥಾಪಕ ಹನಮಂತ್ರಾಯ ಬಿರಾದಾರ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

# ಕುಟುಂಬದ ಸಮತೋಲನಕ್ಕೆ ಮಹಿಳೆಯ ತಾಳ್ಮೆ ಅವಶ್ಯ



**ಧಾರವಾಡ:** ಮಹಿಳೆಗೆ ತಾಳ್ಮೆ ಮುಖ್ಯ. ಮಹಿಳೆ ತಾಳ್ಮೆ ವಹಿಸಿದರೆ ಮಾತ್ರ ಕುಟುಂಬದ ಸಮತೋಲನವನ್ನು ಕಾಯ್ದುಕೊಳ್ಳಬಹುದು ಎಂದು ಖ್ಯಾತ ಹಿಂದೂಸ್ಥಾನಿ ಗಾಯಕರಾದ ಪಂ. ಎಂ. ವೆಂಕಟೇಶಕುಮಾರ ಅಭಿಪ್ರಾಯಪಟ್ಟರು.

ಕರ್ನಾಟಕ ವಿದ್ಯಾವರ್ಧಕ ಸಂಘದ ಮಹಿಳಾ ಮತ್ತು ಮಕ್ಕಳ ಮಂಟಪವು ಆಯೋಜಿಸಿದ್ದ ಪ್ರಸಕ್ತ ತ್ರೈವಾರ್ಷಿಕ ಅವಧಿಯ ಕಾರ್ಯಚಟುವಟಿಕೆಗಳ ಉದ್ಘಾಟನೆ ಮತ್ತು ಬಹುಮಾನ ವಿತರಣಾ ಸಮಾರಂಭದಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಮುಂದುವರೆದು ಮಾತನಾಡಿದ ಅವರು, ಅಗತ್ಯಕ್ಕಿಂತ ಹೆಚ್ಚಿನ ತಾಳ್ಮೆಯನ್ನು ಮಹಿಳೆ ವಹಿಸಿದರೆ ಅದು ಗಂಡಸರ ದಬ್ಬಾಳಿಕೆಯನ್ನು ಹೆಚ್ಚಿಸಬಹುದು ಆದ್ದರಿಂದ ಮಹಿಳೆಯು ಇತಿಮಿತಿಯೊಳಗೆ ತಾಳ್ಮೆಯಿಂದ ಜಾಣ್ಮೆವಹಿಸಿ ಕುಟುಂಬವನ್ನು ನಿರ್ವಹಿಸಬೇಕೆಂದರು.

ಕರ್ನಾಟಕ ವಿಶ್ವವಿದ್ಯಾಲಯ ಕಲಾ ನಿಖಾಯದ ಡೀನರು ಹಾಗೂ ಮುಖ್ಯಸ್ಥರಾದ ಡಾ. ಮೃತ್ಯುಂಜಯ ಅಗಡಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಹೆಣ್ಣು ಸಂಸಾರದ ಕಣ್ಣು. ಒಂದು ಕುಟುಂಬವು ಯಾವ ಹಾದಿಯಲ್ಲಿ ಸಾಗುತ್ತದೆ ಎನ್ನುವುದಕ್ಕೆ ಹೆಣ್ಣೇ ಕಾರಣ. ಆದರೆ ಆಧುನಿಕ ಯುಗದಲ್ಲಿ ಹೆಣ್ಣು ಮಕ್ಕಳು ಹೆಚ್ಚಿನ ಶಿಕ್ಷಣವನ್ನು ಪಡೆದುಕೊಂಡು ಹಾಗೂ ಕೆಲಸದ ಒತ್ತಡದಿಂದಾಗಿ ಅಹಮಿಕೆಯನ್ನು ಬೆಳೆಸಿಕೊಳ್ಳುತ್ತಿರುವುದರಿಂದ ಕುಟುಂಬದಲ್ಲಿ ಏರುಪೇರು ಉಂಟಾಗುತ್ತದೆ ಎಂದರು.

ಕ.ವಿ.ವ. ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ ಅಧ್ಯಕ್ಷೀಯ ನುಡಿಗಳನ್ನಾಡಿ ಮಹಿಳೆ ಮತ್ತು ತಾಳ್ಮೆ ಕುರಿತಾಗಿ ಏರ್ಪಡಿಸಲಾದ ಸ್ಪರ್ಧಾ ವಿಜೇತರನ್ನು ಅಭಿನಂದಿಸಿದರು.

ಉದ್ಘಾಟನಾ ಸಮಾರಂಭಕ್ಕಿಂತ ಮೊದಲು ಜರುಗಿದ "ಮಹಿಳೆ ಮತ್ತು ತಾಳ್ಮೆ" ಕುರಿತು ನಡೆದ ಘಟನೆ ವಿವರಿಸುವ ಸ್ಪರ್ಧೆಯಲ್ಲಿ ಸುಮಾರು 20ಕ್ಕಿಂತ ಹೆಚ್ಚು ಮಹಿಳೆಯರು ಭಾಗವಹಿಸಿದ್ದರು. "ಮಹಿಳೆ ಮತ್ತು ತಾಳ್ಮೆ" ಕುರಿತು ನಡೆದ ಘಟನೆ ಸ್ಪರ್ಧೆಯಲ್ಲಿ ಶ್ರೀಮತಿ ಮಂಜುಳಾ ಚೌಗಲೆ ಪ್ರಥಮ ಸ್ಥಾನ, ಡಾ. ಸುಧಾ ಹುಲಗೂರ ದ್ವಿತೀಯ ಸ್ಥಾನ, ಶ್ರೀಮತಿ ಶಿಲ್ಪಾ ಮಿಣಜಗಿ ಹಾಗೂ ಡಾ. ಸುಕುಮಾರಿ ಎಚ್.ಯು. ಮತ್ತು ಶ್ರೀಮತಿ ನೀಲಾ ಶಿಗ್ಲಿ ಸಮಾಧಾನಕರ ಬಹುಮಾನ ಪಡೆದರು. ಸ್ಪರ್ಧಾ ವಿಜೇತರಿಗೆ ಬಹುಮಾನ ಮತ್ತು ಭಾಗವಹಿಸಿದ ಎಲ್ಲರಿಗೂ ಪ್ರಮಾಣ ಪತ್ರ ವಿತರಿಸಲಾಯಿತು.

ಗುಬ್ಬಚ್ಚಿ ಗೂಡು ಶಾಲೆ, ಧಾರವಾಡ, ಸರಕಾರಿ ಹೆಣ್ಣು ಮಕ್ಕಳ ಶಾಲೆ, ಅಮ್ಮಿನಭಾವಿ ಹಾಗೂ ಸರಕಾರಿ ಉರ್ದು ಶಾಲೆ, ಹೆಬ್ಬಳ್ಳಿ ಶಾಲೆಯ ಮಕ್ಕಳಿಂದ ವೃಂದಗಾನ ಜರುಗಿತು.

ಕಾರ್ಯಕ್ರಮದಲ್ಲಿ ಬಸವಪ್ರಭು ಹೊಸಕೇರಿ, ಸತೀಶ ತುರುಮರಿ, ಶಿವಾನಂದ ಭಾವಿಕಟ್ಟಿ, ಡಾ. ಧನವಂತ ಹಾಜವಗೋಳ, ಶಶಿಕಲಾ ಶಾಸ್ತ್ರಿಮಠ, ಸುಜಾತಾ ಪರ್ವತದೇವರಮಠ, ಆನಂದ ಅಮರಶೆಟ್ಟಿ, ಜ್ಯೋತಿ ಭಾವಿಕಟ್ಟಿ, ರೇಖಾ ಅಂತಕ್ಕನವರ, ಶ್ರೀಮತಿ ನಿರ್ಮಲಾ ಮತ್ತು ಮಂಗಳಾ ಚಿಗಟೇರಿ, ಇನ್ನಿತರರು ಪಾಲ್ಗೊಂಡಿದ್ದರು.

# ರತ್ನತ್ರಯ ಬ್ಯಾಂಕಿಗೆ 27 ಲಕ್ಷ ಲಾಭ



**ತೇರದಾಳ:** ದೇಶದ ಆರ್ಥಿಕ ಸುಧಾರಣೆಯಲ್ಲಿ ಸಹಕಾರಿ ಕ್ಷೇತ್ರದ ಬಹುದೊಡ್ಡ ಕೊಡುಗೆ ಇದೆ. ಗ್ರಾಹಕರ ಸಮಸ್ಯೆಗಳಿಗೆ ಸ್ಪಂಧಿಸುವ ಅಜೇಂಡಾ ಬ್ಯಾಂಕುಗಳು ಹೊಂದಿದಾಗ ಮಾತ್ರ ಬ್ಯಾಂಕುಗಳನ್ನು ಸ್ಥಾಪಿಸಿರುವುದು ಸಾರ್ಥಕ ಆಗುತ್ತದೆ ಎಂದು ಇಲ್ಲಿನ ರತ್ನತ್ರಯ ಅಲ್ಪಸಂಖ್ಯಾತರ ಸೌಹಾರ್ದ ಬ್ಯಾಂಕಿನ ಅಧ್ಯಕ್ಷ ಡಾ. ಮಹಾವೀರ ದಾನಿಗೊಂಡ ಅಭಿಮತ ವ್ಯಕ್ತಪಡಿಸಿದರು.

ಬ್ಯಾಂಕಿನ ವಾರ್ಷಿಕ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬ್ಯಾಂಕಿಗೆ ಬರುವ ಗ್ರಾಹಕರಿಗೆ ಯಾವುದೇ ರೀತಿಯ ಹೊರೆ ಆಗದಂತೆ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಸಾಲ ಪಡೆದುಕೊಂಡ ಗ್ರಾಹಕರು ಆರ್ಥಿಕವಾಗಿ ಸುಧಾರಣೆ ಹೊಂದಿದಾಗ ಮಾತ್ರ ಬ್ಯಾಂಕುಗಳು ಅಭಿವೃದ್ಧಿ ಆಗಲು ಸಾಧ್ಯ ಎಂದು ಹೇಳಿದರು. ಉಪಾಧ್ಯಕ್ಷ ಭೂಪಾಲ ಆಲಗೂರ, ಕೇವಲ ಆರು ವರ್ಷದಲ್ಲಿ 16 ಕೋಟಿ ದುಡಿಯುವ ಬಂಡವಾಳ ಹೊಂದಿದ್ದು, 9 ಕೋಟಿಗೂ ಅಧಿಕ ವಿವಿಧ ಯೋಜನೆಯಡಿ ಸಾಲ ನೀಡಲಾಗಿದೆ. ಪ್ರಸಕ್ತ ಸಾಲಿಗೆ 27 ಲಕ್ಷ ಲಾಭ ಗಳಿಸಿದೆ ಎಂದು ಸಭೆಗೆ ಮಾಹಿತಿ ನೀಡಿದರು. ಹಾರೂಗೇರಿ ಜಾಗೃತಿ ಬ್ಯಾಂಕ್ ಅಧ್ಯಕ್ಷ ಶಾಂತಿನಾಥ ಅಸ್ಕಿ, ಡಾ. ಪುಷ್ಪದಂತ ದಾನಿಗೊಂಡ, ಸುರೇಶ ಅಕ್ಕಿವಾಟ, ಅಲ್ಲಪ್ಪ ಬಾಬಗೊಂಡ, ಅಜೀತ ಮಗದುಂ, ಭೀಮಪ್ಪ ಆಳಗೊಂಡ, ಜಿನ್ನಪ್ಪ ಸವದತ್ತಿ, ಪರಪ್ಪ ಹಿಪ್ಪರಗಿ, ತವನಪ್ಪ ಕೋರಿ, ವ್ಯವಸ್ಥಾಪಕ ಆಧಿನಾಥ ನಾಂದ್ರೇಕರ, ಈರಪ್ಪ ಶೇಡಶ್ಯಾಳ, ತಮ್ಮಣ್ಣ ಅಸ್ಕಿ, ನಟವರ ಲೋಯಾ ಇನ್ನಿತರಿದ್ದರು.

# ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ಶಿಕ್ಷಕರು ಬಿತ್ತಲಿ: ಕೌಜಲಗಿ

**ಬೈಲಹೊಂಗಲ:** ಶಾಲಾ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ಬಿತ್ತಿದಾಗ ಮಾತ್ರ ಉತ್ತಮ ರಾಷ್ಟ್ರ ನಿರ್ಮಾಣ ಮಾಡಲು ಸಾಧ್ಯವೆಂದು ಶಾಸಕ ಮಹಾಂತೇಶ ಕೌಜಲಗಿ ಹೇಳಿದರು.

ಅವರು ಪಟ್ಟಣದ ಶ್ರೀ ಶಿವಬಸವ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಪಂಚಾಯತ ಬೆಳಗಾವಿ, ರಾಜ್ಯ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಬೈಲಹೊಂಗಲ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಆಶ್ರಯದಲ್ಲಿ ಶುಕ್ರವಾರ ನಡೆದ 2025–26 ನೇ ಸಾಲಿನ ತಾಲೂಕಾ ಮಟ್ಟದ ಶಿಕ್ಷಕರ ದಿನಾಚಾರಣೆ ಹಾಗೂ ಪ್ರತಿಭಾ ಕಾರಂಜಿ ಉದ್ಘಾಟಣಾ ಸಮಾರಂಭದಲ್ಲಿ ಅವರು ಮಾತನಾಡಿ, ಗುಣಮಟ್ಟದ ಶಿಕ್ಷಣಕ್ಕೆ ಪ್ರತಿಯೊಬ್ಬರು ಒತ್ತು ಕೊಟ್ಟು ಮಕ್ಕಳ ಭವಿಷ್ಯ ನಿರ್ಮಿಸಬೇಕೆಂದರು.

ಚನ್ನಮ್ಮನ ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ ಮಾತನಾಡಿ, ಗುರುವಿನ ಸ್ಥಾನ ಸಮಾಜದಲ್ಲಿ ಪವಿತ್ರವಾಗಿದ್ದು ಶಿಕ್ಷಕರು ಮಕ್ಕಳಿಗೆ ಕಾಳಜಿ ವಹಿಸಿ ಬದ್ಧತೆಯಿಂದ ಬೋಧನೆ ಮಾಡಿ ತಮ್ಮ ಅಮೂಲ್ಯ ಸೇವೆಯನ್ನು ಸಾರ್ಥಕಪಡಿಸಿಕೊಳ್ಳಬೇಕೆಂದರು.

ತಹಶೀಲ್ದಾರ ಹಣಮಂತ ಶಿರಹಟ್ಟಿ, ತಾ.ಪಂ.ಇಓ, ಸಂಜೀವ ಜುನ್ನೂರು, ಬಿಇಓ ಎ.ಎನ್‌ಪ್ಯಾಟಿ, ಪ್ರಭಾರ ಬಿಇಓ ಬಿ.ಎನ್.ಕಸಾಳೆ ಅವರುಗಳು ಶಿಕ್ಷಕರ ದಿನಾಚಾರಣೆಯ ಹಾಗೂ ಶಿಕ್ಷಕರ ಮೌಲ್ಯಗಳ ಕುರಿತು ಮಾತನಾಡಿದರು. ರಾಜ್ಯ ಸಂಪಮ್ಮೂಲ ವ್ಯಕ್ತಿ ಪ್ರಕಾಶ ಮಾಸ್ತಿಹೊಳಿ ಉಪನ್ಯಾಸ




**ನಗರದ ಶ್ರೀ ಶಿವಬಸವ ಕಲ್ಯಾಣ ಮಂಟಪದಲ್ಲಿ ನಡೆದ ತಾಲೂಕಾ ಮಟ್ಟದ ಶಿಕ್ಷಕರ ದಿನಾಚಾರಣೆಯನ್ನು ಗಣ್ಯರು ಉದ್ಘಾಟಿಸಿದರು.**

ನೀಡಿದರು. ಪುರಸಭೆ ಅಧ್ಯಕ್ಷ ವಿಜಯ ಬೋಳಣ್ಣವರ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಪ್ರಕಾಶ ಮೆಳವಂಕಿ, ಸರಕಾರಿ ನೌಕರರ ಸಂಘದ ತಾಲೂಕಾ ಘಟಕದ ಅಧ್ಯಕ್ಷ ಶಿವಾನಂದ ಕುಡಸೋಮಣ್ಣವರ, ಪ್ರಕಾಶ ಮಾಸ್ತಿಹೊಳಿ, ಎಂ.ಸಿ.ಯರಗಟ್ಟಿ, ಅಜ್ಜಪ್ಪ ಅಂಗಡಿ, ಎನ್. ಆರ್.ಮಾಳಣ್ಣವರ, ಎಸ್.ಎಂ.ಕರೀಕಟ್ಟಿ, ಬಿ.ಡಿ.ತಮ್ಮಣ್ಣವರ, ಬಿ.ಎಸ್.ಫಕ್ಕೀರಸ್ವಾಮಿಮಠ, ಎಸ್.ಎಸ್.ಚಳಕೊಪ್ಪ, ಸಂದೀಪ ಕುಲಕರ್ಣಿ, ಎಸ್.ಐ.ಮಿರ್ಜನ್ನವರ ಸೇರಿದಂತೆ ಅನೇಕರು ಗಣ್ಯರು ಇದ್ದರು. ರೂಪಾ ಜಮಖಂಡಿ ಪ್ರಾರ್ಥಿಸಿದರು. ಕುಮಾರ ಕಡೇಮನಿ ನಾಡಗೀತೆ ಹಾಡಿದರು.

ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎನ್.ಕಸಾಳೆ ಸ್ವಾಗತಿಸಿದರು. ಮಹಾದೇವಿ ಅಂಗಡಿ ಬಸವರಾಜ ಪತ್ತಾರ ನಿರೂಪಿಸಿದರು. ಸಿಆರ್‌ಪಿ ರಾಜು ಹಕ್ಕಿ ವಂದಿಸಿದರು.

ಆದರ್ಶ ಶಿಕ್ಷಕರನ್ನು, ಕಳೆದ ಸಾಲಿನಲ್ಲಿ ನಿವೃತಗೊಂಡ ಶಿಕ್ಷಕ/ಶಿಕ್ಷಕಿಯರನ್ನು ಹಾಗೂ ಕಳೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿನಿ ರೂಪಾ ಪಾಟೀಲ ಪಾಲಕರು ಸೇರಿದಂತೆ ಸಾಧಕ ವಿದ್ಯಾರ್ಥಿ/ವಿದ್ಯಾರ್ಥಿನಿಯರನ್ನು ಇದೇ ಸಂದರ್ಭದಲ್ಲಿ ರಾಜ್ಯ ಶಾಲಾ ಶಿಕ್ಷಣ ಇಲಾಖೆ ಹಾಗೂ ತಾಲೂಕಾ ಬಿಇಓ ಕಛೇರಿ ಅಡಿಯಲ್ಲಿ ಸನ್ಮಾನಿಸಲಾಯಿತು.

# ಗುಡ್ಡದ ಮಲ್ಲಾಪೂರ ಏತ ನೀರಾವರಿ ಯೋಜನೆ: 155 ಕೋಟಿ ಅನುಮೋದನೆ

**ಹಾವೇರಿ:** ಜಿಲ್ಲೆಯ ಬ್ಯಾಡಗಿ ತಾಲೂಕಿನ ಗುಡ್ಡದ ಮಲ್ಲಾಪೂರ ಏತ ನೀರಾವರಿ ಯೋಜನೆಗೆ ರೂ.115 ಕೋಟಿ ಅನುದಾನ ಮಂಜೂರಾತಿಗೆ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಲಾಗಿದೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್. ಆರ್.ಪಾಟೀಲ ಅವರು ತಿಳಿಸಿದ್ದಾರೆ.

ಸಚಿವ ಸಂಪುಟದಲ್ಲಿ ಈ ಯೋಜನೆ ಅನುದಾನಕ್ಕೆ ಅನುಮೊದನೆ ನೀಡಿದ್ದಕ್ಕಾಗಿ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರಿಗೆ ಅಭಿನಂದನೆ ಸಲ್ಲಿಸಿದ ಅವರು,

ಈ ಯೋಜನೆಗೆ ಈ ಭಾಗದ ರೈತರು ಬಹು ಕಾಲದಿಂದ ನಿರೀಕ್ಷೆ ಮಾಡುತ್ತಿದ್ದರು. ಈ ಯೋಜನೆ ಮಾನ್ಯ ಮುಖ್ಯಮಂತ್ರಿಗಳ ಅವಧಿಯಲ್ಲಿ ಅನುಷ್ಠಾನಗೊಳ್ಳುತ್ತಿರುವುದು ನಿಜಕ್ಕೂ ಈ ಭಾಗದ ರೈತರ ಭಾಗ್ಯದ ಬಾಗಿಲು ತೆರದಂತಾಗಿದೆ ಎಂದು ತಿಳಿಸಿದ್ದಾರೆ.

ಈ ಯೋಜನೆಯಿಂದ ಪೈಪ್‌ಲೈನ್ ಮೂಲಕ ಸರಿಯಾದ ರೀತಿಯಲ್ಲಿ ಕೆರೆ ತುಂಬಲು ನೀರಿನ ವ್ಯವಸ್ಥೆಯಾಗಲಿದೆ. ಇಂತಹ ಬೃಹತ್ ಹಾಗೂ ರೈತ ಸ್ನೇಹಿ ಯೋಜನೆ ಅನುಷ್ಠಾನಗೊಳಿಸಲು ಹೆಚ್ಚಿನ ಆಸಕ್ತಿ ವಹಿಸಿದ ಮುಖ್ಯಮಂತ್ರಿಗಳಿಗೆ ಹಾಗೂ ಉಪ ಮುಖ್ಯಮಂತ್ರಿಗಳಿಗೆ ಬ್ಯಾಡಗಿ ತಾಲೂಕಿನ ಜನತೆಯ ಪರವಾಗಿ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

ಈ ಯೋಜನೆಯನ್ನು ಸಾಧ್ಯವಾದಷ್ಟು ಶೀಘ್ರವಾಗಿ ಆರಂಭಿಸಿ, ಈ ಭಾಗದ ಜನರಿಗೆ ಈ ಯೋಜನೆಯ ಸೌಲಭ್ಯ ದೊರೆಯುವಂತಾಗಲಿ ಎಂದು ಮಾನ್ಯ ಮುಖ್ಯಮಂತ್ರಗಳಿಗೆ ಹಾಗೂ ಉಪ ಮುಖ್ಯಮಂತ್ರಿಗಳಿಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ.

# ಅಸಂಘಟಿತ ಕಾರ್ಮಿಕ ಕಾರ್ಡ್ ನೋಂದಣಿ ಅಭಿಯಾನ

**ಧಾರವಾಡ:** ಕಾರ್ಮಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮತ್ತು ಧಾರವಾಡ ಜಿಲ್ಲೆಯ ಜಿಲ್ಲಾ ಅಧ್ಯಕ್ಷರ ಹಾಗೂ ಎಲ್ಲ ತಾಲೂಕಿನ ಛಾಯಾಗ್ರಾಹಕ ಸಂಘಗಳ ಅಧ್ಯಕ್ಷರ ಸಭೆಯನ್ನು ನಿನ್ನೆ (ಸೆ.5) ಧಾರವಾಡ ವಾರ್ತಾ ಇಲಾಖೆಯ ಸಭಾಭವನದಲ್ಲಿ ಆಯೋಜಿಸಲಾಗಿತ್ತು.

ಸೆಪ್ಟೆಂಬರ 9 ಮತ್ತು 10 ರಂದು ಕಾರ್ಮಿಕ ಇಲಾಖೆಯ ಸವಲತ್ತುಗಳನ್ನು ಪಡೆಯಲು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆವರೆಗೆ, ಜಿಲ್ಲೆಯ ಎಲ್ಲ ತಾಲ್ಲೂಕಿನ ಕಾರ್ಮಿಕ ಇಲಾಖೆಯ ಕಛೇರಿಯಲ್ಲಿ ಫೋಟೋಗ್ರಾಫರ್ಸ್‌ಗಳಿಗೆ ಕಾರ್ಮಿಕ ಇಲಾಖೆಯಿಂದ ಉಚಿತವಾಗಿ ನೋಂದಾಯಿಸಿಕೊಂಡು ಅಸಂಘಟಿತ ಕಾರ್ಮಿಕರ ಕಾರ್ಡುಗಳನ್ನು ಮಾಡಿಕೊಡಿಕೊಳ್ಳಲು ಅವಕಾಶ ನೀಡಲಾಗಿದೆ. ಈಗಾಗಲೇ ಅಸಂಘಟಿತ ಕಾರ್ಮಿಕ ಕಾರ್ಡ್ ಹೊಂದಿರುವ ಛಾಯಾಗ್ರಾಹಕರು ಸಹ ಸೆಪ್ಟೆಂಬರ 9 ಮತ್ತು 10 ರಂದು ತಮ್ಮ ತಾಲೂಕಿನ ಕಾರ್ಮಿಕ ಇಲಾಖೆಯ ಕಚೇರಿಗೆ ಭೇಟಿ ನೀಡಿ, ತಮ್ಮ ನೋಂದಣಿಯನ್ನು ದೃಢಪಡಿಸಿಕೊಳ್ಳಬೇಕು. ಹೊಸದಾಗಿ ನೋಂದಣಿಗೆ ಛಾಯಾಗ್ರಾಹಕರು ತಮ್ಮ ಒಂದು ಪಾಸ್‌ಪೋರ್ಟ ಸೈಜ್ ಫೋಟೋ, ಬ್ಯಾಂಕ್ ಪಾಸ್‌ಬುಕ್ ಝುರಾಕ್ಸ್ ಪ್ರತಿ ಮತ್ತು ಆಧಾರ ಕಾರ್ಡ್ ಪ್ರತಿ ತೆಗೆದುಕೊಂಡು ಬರಬೇಕು. ತಮ್ಮ ಕುಟುಂಬದ ಪಡಿತರ ಚೀಟಿ ಇದ್ದರೆ ಅದನ್ನು ಸಹ ತರಬಹುದು. ಜಿಲ್ಲೆಯ ಹುಬ್ಬಳ್ಳಿ, ಧಾರವಾಡ, ಅಳ್ನಾವರ, ಕಲಘಟಗಿ, ನವಲಗುಂದ, ಅಣ್ಣಿಗೇರಿ ಹಾಗೂ ಕುಂದಗೋಳ ತಾಲೂಕಿನ ಹಿರಿಯ ಕಾರ್ಮಿಕ ನಿರೀಕ್ಷಕರ ಕಚೇರಿಯಲ್ಲಿ ಅಸಂಘಟಿತ ಕಾರ್ಮಿಕರ ನೋಂದಣಿ ಪ್ರಕ್ರೀಯೆ ಜರುಗಲಿದೆ.

ಕಾರ್ಮಿಕ ಇಲಾಖೆಯ ಈ ಪ್ರಯೋಜನವನ್ನು ಜಿಲ್ಲೆಯ ಎಲ್ಲ ಫೋಟೋಗ್ರಾಫರ್ಸ್, ವಿಡೀಯೋಗ್ರಾಫರ್ಸ್‌ಗಳು ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಮಾರಿಕಾಂಬಾ, ಹಿರಿಯ ಕಾರ್ಮಿಕ ನಿರೀಕ್ಷರ (9480068995) ಹುಬ್ಬಳ್ಳಿ, ಅಕ್ಬರ ಮುಲ್ಲಾ, ಹಿರಿಯ ಕಾರ್ಮಿಕ ನಿರೀಕ್ಷರು (9964178078) ಧಾರವಾಡ, ಹಿರಿಯ ಕಾರ್ಮಿಕ ನಿರೀಕ್ಷರಾದ ಲತಾ, ಕಲಘಟಗಿ (9986594945), ಮೀನಾಕ್ಷಿ ಶಿಂದಿಹಟ್ಟಿ, ಅಳ್ನಾವರ (6363520066), ಭುವನೇಶ್ವರಿ ಕೋಟಿಮಠ, ಧಾರವಾಡ (7022527066), ಅಕ್ರಂ ಅಲ್ಲಾಪೂರ, ಹುಬ್ಬಳ್ಳಿ ಶಹರ (9606366429), ಅಶೋಕ ಒಡಿಯರ್, ಹುಬ್ಬಳ್ಳಿ ಗ್ರಾಮೀಣ (70190101998, 9019991255), ರಜನಿ ಹಿರೇಮಠ, ಕುಂದಗೋಳ (9620629013), ಸಂಗೀತಾ ಬೆನಕನಕೊಪ್ಪ, ಅಣ್ಣಿಗೇರಿ ಮತ್ತು ನವಲಗುಂದ (9620727370) ಹಾಗೂ ಫೋಟೋಗ್ರಾಫರ್ಸ್ ಸಂಘದ ಪ್ರಮುಖರಾದ ದತ್ತಪ್ರಸಾದ ವೆಂಕಟೇಶ (9845128653), ಕಿರಣ ಬಾಕಳೆ (9448136285) ಮತ್ತು ಪ್ರಭಯ್ಯ ಲಕ್ಕುಂಡಿಮಠ (9986268406) ಅವರನ್ನು ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.15ರವರೆಗೆ ಗ್ರಾ.ಪಂ.ಗಳ ಜಮಾಬಂದಿ ಕಾರ್ಯಕ್ರಮ

**ಧಾರವಾಡ:** ಕಲಘಟಗಿ ತಾಲೂಕಿನ ಎಲ್ಲ ಗ್ರಾಮ ಪಂಚಾಯತಗಳಲ್ಲಿ ಗ್ರಾಮ ಪಂಚಾಯತ ಜಮಾಬಂದಿ ಕಾರ್ಯಕ್ರಮವನ್ನು ಸೆಪ್ಟೆಂಬರ 6, 2025 ರಿಂದ ಸೆಪ್ಟೆಂಬರ 15, 2025 ರವರೆಗೆ ಆಯೋಜಿಸಲಾಗಿದೆ. ಜಮಾಬಂದಿ ಕಾರ್ಯಕ್ರಮ ಆಯೋಜನೆಗೊಂಡ ಗ್ರಾಮ ಪಂಚಾಯತ, ದಿನಾಂಕ, ಜರುಗಿಸುವ ವೇಳೆ ಹಾಗೂ ಸಮನ್ವಯ ಅಧಿಕಾರಿಗಳ ಪಟ್ಟಿಯನ್ನು ಆಯಾ ಗ್ರಾಮ ಪಂಚಾಯತಗಳಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಡಕಿಹೊನ್ನಳ್ಳಿ, ದುಮ್ಮವಾಡ, ಕುರುವಿನಕೊಪ್ಪ, ದಾಸ್ತಿಕೊಪ್ಪ, ತಾವರಗೇರಿ, ಮುಕ್ಕಲ್, ದೇವಲಿಂಗಕೊಪ್ಪ, ಗುಡ್ಡದಹುಲಿಕಟ್ಟಿ, ಬೀರವಳ್ಳಿ, ಸಂಗಮೇಶ್ವರ, ಜಿನ್ನೂರ, ಮುತ್ತಗಿ, ಮಿಶ್ರಿಕೋಟಿ, ಗಂಭ್ಯಾಪೂರ, ಜಿ. ಬಸವನಕೊಪ್ಪ, ಹಿರೇಹೊನ್ನಳ್ಳಿ, ದೇವಿಕೊಪ್ಪ, ತಬಕದಹೊನ್ನಳ್ಳಿ, ಗಂಜಿಗಟ್ಟಿ, ತಂಬೂರ, ಸೂಳಿಕಟ್ಟಿ, ಸೂರಶೆಟ್ಟಿಕೊಪ್ಪ, ಬಮ್ಮಿಗಟ್ಟಿ, ಉಗ್ಗಿನಕೇರಿ, ಭೋಗೇನಾಗರಕೊಪ್ಪ, ಬೆಲವಂತರ, ಗಳಗಿ, ಬೇಗೂರ ಗ್ರಾಮ ಪಂಚಾಯತ ಅಥವಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಕಲಘಟಗಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತನ ಮನೆಗೆ ಬಿಜೆಪಿ ನಿಯೋಗ ಭೇಟಿ

**ಯರಗಟ್ಟಿ:** ಸಮೀಪದ ಸೊಪಡ್ಲ ಗ್ರಾಮದ ರೈತ ಬಸವರಾಜ ಹೊಸಕೋಟಿ ಸಾಲ ಮಾಡಿ ಬೆಳೆದ ಫಸಲು ಅತಿವೃಷ್ಟಿಯಿಂದ ಬೆಳೆ ಹಾನಿಗೊಳಗಾಗಿ ಸಾಲಬಾಧೆ ತಾಳಲಾರದೆ ಆತ್ಮಹತ್ಯೆ ಮಾಡಿಕೊಂಡ ಹಿನ್ನೆಲೆ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಶ್ ಪಾಟೀಲ ಅವರು ಮೃತ ರೈತನ ನಿವಾಸಕ್ಕೆ ತೆರಳಿ ಕುಟುಂಬದವರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಸವದತ್ತಿ ಮಂಡಳ ನಿಕಟಪೂರ್ವ ಅಧ್ಯಕ್ಷ ಈರಣ್ಣ ಚಂದರಗಿ, ಮುಖಂಡರಾದ, ಪರ್ವತಗೌಡ ಪಾಟೀಲ, ಶೇಖಪ್ಪ ಅರಳಿ, ಸಂತೋಶ ಮಹಲಮನಿ, ರವಿಕಿರಣ ಪಾಟೀಲ, ಮಹಾದೇವ ಯಡ್ರಾವಿ, ಸಂತೋಶ ಅಂಗಡಿ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ಪುಸ್ತಕ ಮಳಿಗೆಗಳಿಗೆ ಅರ್ಜಿ ಆಹ್ವಾನ

**ಧಾರವಾಡ:** ಜಗತ್ತಿನ ಪ್ರಸಿದ್ಧ ಮೈಸೂರು ದಸರಾ ಉತ್ಸವ–2025 ರಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಉತ್ಸವ ಸಮಿತಿ, ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ 22, 2025 ರಿಂದ ಅಕ್ಟೋಬರ 01, 2025 ರವರೆಗೆ ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ–2025 ವನ್ನು ಮೈಸೂರು ಹಳೆ ಡಿ.ಸಿ. ಕಚೇರಿ ಎದುರುಗಡೆ ಸ್ಕೌಟ್ಸ ಮತ್ತು ಗೈಡ್ಸ್ ಮೈದಾನದಲ್ಲಿ ಏರ್ಪಡಿಸಲಾಗುವುದು. ಈ ಪುಸ್ತಕ ಮೇಳದಲ್ಲಿ ಕನ್ನಡ ಪ್ರಕಾಶಕರು, ಮಾರಾಟಗಾರರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ ರೂ.1000 ಗಳ ಭದ್ರತಾ ಠೇವಣಿ ಡಿ.ಡಿ.ಯನ್ನು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಅವರ ಹೆಸರಿನಲ್ಲಿ ಡಿಡಿಗಳನ್ನು ಸಲ್ಲಿಸುವುದು. ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ಪ್ರಕಾಶಕರು, ಮಾರಾಟಗಾರರು ನಿಗದಿತ ಅರ್ಜಿ ನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡಭವನ, ಜೆ.ಸಿ.ರಸ್ತೆ, ಬೆಂಗಳೂರ ಕಛೇರಿ ಅಥವಾ ಆಯಾ ಜಿಲ್ಲೆಯಲ್ಲಿರುವ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಛೇರಿಗಳಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್ https://kpp.karnataka.gov.in ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ. ಭರ್ತಿ ಮಾಡಿದ ಅರ್ಜಿಯನ್ನು ಡಿ.ಡಿ.ಯೊಂದಿಗೆ ಸೆಪ್ಟೆಂಬರ 18, 2025 ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು ಅವರ ಹೆಸರಿಗೆ ಅಂಚೆಯ ಮೂಲಕ ಹಾಗೂ ಇ–ಮೇಲ್ kannadappradhikara@gmail.com ರ ಮೂಲಕ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ:080–22484516, 22107704 ಗೆ ಸಂಪರ್ಕಿಸಬಹುದು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿಗಳು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಕ ಮನುಷ್ಯನ ಸೃಷ್ಟಿಕರ್ತ: ಹಂಚಲಿ



**ವಿಜಯಪುರ:** ಶಿಕ್ಷಕ ಮನುಷ್ಯನ ಸೃಷ್ಟಿಕರ್ತ. ಅವನು ಮಾನವಕುಲ, ವರ್ತಮಾನ ಮತ್ತು ಭವಿಷ್ಯದ ಸಂಪೂರ್ಣ ನಾಗರಿಕತೆಯ ಅಡಿಪಾಯ. ಶಿಕ್ಷಕರ ಸಕ್ರಿಯ ಸಹಕಾರದಿಂದ ರಾಷ್ಟ್ರದ ಪುನರ್ನಿರ್ಮಾಣ ಸಾಧ್ಯ ಎಂದು ಮಡಿಕೇಶ್ವರದ ಸರಕಾರಿ ಪ್ರೌಢ ಶಾಲೆಯ ಇಂಗ್ಲೀಷ್ ಶಿಕ್ಷಕ ಬಸವರಾಜ ಹಂಚಲಿ ಹೇಳಿದರು.

ಶನಿವಾರದಂದು ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡ "ಶಿಕ್ಷಕರು ರಾಷ್ಟ್ರ ನಿರ್ಮಾಪಕರು"– ಚಿಂತನಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಕರು ವಿದ್ಯಾರ್ಥಿಗಳಲ್ಲಿ ಉತ್ತಮ ನೈತಿಕ ಮೌಲ್ಯ, ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಕಲಿಸುತ್ತಾ, ಸೃಜನಾತ್ಮಕ ಚಿಂತನೆ ಮತ್ತು ನವೀನತೆಗೆ ಪ್ರೋತ್ಸಾಹಿಸುತ್ತಾರೆ. ಇದು ದೇಶದ ಆವಿಷ್ಕಾರ ಮತ್ತು ಪ್ರಗತಿಗೆ ಅತ್ಯಗತ್ಯ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಶಿಕ್ಷಕರು ರಾಷ್ಟ್ರ ನಿರ್ಮಾಪಕರು. ಅವರು ರಾಷ್ಟ್ರದ ಭವಿಷ್ಯವನ್ನು ರೂಪಿಸುವ ಜ್ಞಾನ, ದೇಶಭಕ್ತಿ, ಮೌಲ್ಯ, ಸಾಮಾಜಿಕ ಗುಣಗಳನ್ನು ವಿದ್ಯಾರ್ಥಿಗಳಲ್ಲಿ ಬೆಳೆಸಿ, ಅವರಲ್ಲಿ ಸಂವಿಧಾನದ ಮೌಲ್ಯಗಳನ್ನು ಉತ್ತೇಜಿಸುವ ಮೂಲಕ ದೇಶದ ಏಕತೆ–ಪ್ರಗತಿಗೆ ಕೊಡುಗೆ ನೀಡುತ್ತಾರೆ ಎಂದು ಹೇಳಿದರು.

ಮುಖ್ಯ ಶಿಕ್ಷಕ ಸುರೇಶಗೌಡ ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿ,ಶಿಕ್ಷಕನೇ ನಿಜವಾದ ಕಲಾವಿದ. ಶಿಕ್ಷಕರು ರಾಷ್ಟ್ರದ ಶಿಲ್ಪಿಗಳು. ಮಕ್ಕಳ ಭವಿಷ್ಯದ ನಿರ್ಮಾಪಕರು. ಶಿಕ್ಷಕ ವೃತ್ತಿಯು ಸಕಲ ಕಲೆಗಳ ತವರು. ಅಕ್ಷರ ಜ್ಞಾನದ ಜೊತೆ ಸಾಂಸ್ಕೃತಿಕ ಅರಿವು ಬೆಳೆಸುವ ಅವರು ವಿದ್ಯಾರ್ಥಿಗಳಿಗೆ ಉತ್ತಮ ವ್ಯಕ್ತಿತ್ವ ರೂಪಿಸುವ ರಾಯಭಾರಿಗಳಾಗಿದ್ದಾರೆ ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿ ಸುನಂದಾ ಹುಣಶ್ಯಾಳ, ಶಿಕ್ಷಕರಾದ ಎಂ ಎಸ್ ಪಾಪನಾಳಮಠ, ರಾಘು ಮೊಗಳ, ಸಚೀನ ಅವಟಿ, ನವೀನ ಬಂಡೆನ್ನವರ, ಸಿದ್ದು ರತ್ನಾಕರ, ರಾಜಶೇಖರ ಶಿರಶ್ಯಾಡ, ಅಲ್ಲಾಭಕ್ಷ ಇನಾಮದಾರ, ಜಯಶ್ರೀ ಬಂಗಾರಿ, ಲಕ್ಷ್ಮೀ ಮಸೂತಿ, ಸ್ನೇಹಾ ಹಕ್ಕಿ, ಜಯಶ್ರೀ ಬಿರಾದಾರ, ಶೃತಿ ಪೂಜಾರಿ, ರೇಣುಕಾ ಭಜಂತ್ರಿ, ಸರೋಜಿನಿ ಕಟ್ಟಿಮನಿ ಸೇರಿದಂತೆ ಅನೇಕ ಶಿಕ್ಷಕರು ಹಾಗೂ ಮಕ್ಕಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಪತ್ರಿಕಾ ವಿತರಕ ಬಸವರಾಜ ಸಾರವಾಡ ಅವರನ್ನು ಸನ್ಮಾನಿಸಲಾಯಿತು.

# ಅತಿಥಿ ಶಿಕ್ಷಕರ ನೇಮಕಾತಿ ಅರ್ಜಿ ಆಹ್ವಾನ

**ಗದಗ:** 2025–26ನೇ ಸಾಲಿಗೆ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ, ನವೇಭಾವನೂರತಾ ಶಿರಹಟ್ಟಿ ಇಲ್ಲಿ 1 ರಿಂದ 6ನೇ ತರಗತಿಗೆ ಸಂಖ್ಯಾ ಬಲಕ್ಕನುಗುಣವಾಗಿ ವಿಷಯವಾರು ಅತಿಥಿ ಶಿಕ್ಷಕರನ್ನು ಗೌರವಧನದ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಕಾತಿ ಮಾಡಲು ಮಾನ್ಯ ನಿರ್ದೇಶಕರು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು ಇವರ ಸುತ್ತೋಲೆಯನ್ವಯ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ PUC, D.Ed ಅಭ್ಯರ್ಥಿಗಳು ನಿಗಧಿತ ನಮೂನೆಯ ಅರ್ಜಿಗಳನ್ನು ಸಹಾಯಕ ನಿರ್ದೇಶಕರು ಸಮಾಜಕಲ್ಯಾಣ ಇಲಾಖೆ, ಶಿರಹಟ್ಟಿ ಹಾಗೂ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ, ನವೇಭಾವನೂರ ಇವರಿಂದ 8/9/2025 ರಿಂದ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದೃಢೀಕೃತ ದಾಖಲೆಗಳೊಂದಿಗೆ ದಿನಾಂಕ: 17/09/2025 ಸಾಯಂಕಾಲ 5:30 ಗಂಟೆ ಒಳಗಾಗಿ ಸಲ್ಲಿಸಬಹುದಾಗಿದೆ. ಮೊದಲು ಗ್ರಾಮ ಮಟ್ಟ, ಗ್ರಾಮ ಪಂಚಾಯತಿ ಮಟ್ಟ, ಹೋಬಳಿ ಮಟ್ಟ ಮತ್ತು ತಾಲ್ಲೂಕು ಮಟ್ಟದಂತೆ ಅತಿಥಿ ಶಿಕ್ಷಕರನ್ನು ಆಯ್ಕೆ ಮಾಡಲಾಗುವುದು.

ಒಂದು ಗ್ರಾಮದಲ್ಲಿ ಇಬ್ಬರು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ಪಕ್ಷದಲ್ಲಿ ಆ ಇಬ್ಬರು ಅಭ್ಯರ್ಥಿಗಳಲ್ಲಿ ಯಾರಾದರೂ ಹಿಂದಿನ ವರ್ಷದಲ್ಲಿ ಅತಿಥಿ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸಿದ್ದಲ್ಲಿ ಸದರಿಯವರನ್ನು ಆದ್ಯತೆ ಮೇಲೆ ಆಯ್ಕೆ ಮಾಡಲಾಗುವುದು. ಒಂದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ ಹಿಂದಿನ ವರ್ಷ ಅತಿಥಿ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸಿದ್ದಲ್ಲಿ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಶಿರಹಟ್ಟಿ ರವರ ಕಛೇರಿ ದೂರವಾಣಿ ಸಂಖ್ಯೆ 08487–295097 ಗೆ ಕಛೇರಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ.



# ಪ್ರವಾಸ ಕಥನಗಳು ಜ್ಞಾನವನ್ನು ವೃದ್ಧಿಸುತ್ತವೆ

**ಧಾರವಾಡ:** ಪ್ರವಾಸ ಕಥನಗಳು ಕನ್ನಡ ಸಾಹಿತ್ಯದ ಪ್ರಮುಖ ಪ್ರಕಾರಗಳಲ್ಲಿ ಒಂದು ಪ್ರಕಾರವಾಗಿದ್ದು, ಅವುಗಳನ್ನು ಓದುವುದರ ಮೂಲಕ ಓದುಗ ಜ್ಞಾನಾರ್ಜನೆ ಪಡೆದು ಆನಂದವನ್ನು ಹೊಂದಬಹುದು. ಪ್ರವಾಸ ಕಥನಗಳು ಯಾವುದೇ ಒಂದು ದೇಶದ ವೈವಿಧ್ಯಮಯ ಮಾಹಿತಿಯನ್ನು ನೀಡುವ ಮೂಲಕ ಆ ದೇಶದ ಪರಿಚಯ ಮಾಡಿಕೊಡುವ ಸಾಹಿತ್ಯಪ್ರಕಾರ." ಎಂದು ಹಿರಿಯ ಸಾಹಿತಿ ಮತ್ತು ಧಾರವಾಡ ಆಕಾಶವಾಣಿ ಕೇಂದ್ರದ ಹಿಂದಿನ ನಿರ್ದೇಶಕರಾದ ಡಾ. ಬಸು ಬೇವಿನಗಿಡದ ಹೇಳಿದರು.

ಅವರು ಕರ್ನಾಟಕ ವಿದ್ಯಾವರ್ಧಕ ಸಂಘದ ರಾ. ಹ. ದೇಶಪಾಂಡೆ ಸಭಾಭವನದಲ್ಲಿ ನಡೆದ ಎಚ್. ಪಿ. ಶೆಲ್ಲಿಕೇರಿಯವರ "ಮೇಪಲ್ ನಾಡಿನಲ್ಲಿ" ಕೃತಿಯನ್ನು ಲೋಕಾರ್ಪಣೆ ಮಾಡುತ್ತ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಕೆ.ಎ.ಎಸ್. ಅಧಿಕಾರಿ ಮತ್ತು ಸಾಹಿತಿಗಳಾದ ವೆಂಕಟೇಶ ಮಾಚಕನೂರ ಅವರು ಮಾತನಾಡುತ್ತ " ಶೆಲ್ಲಿಕೇರಿಯವರ ಪ್ರವಾಸ ಕಥನ ತನ್ನ ವಿಶಿಷ್ಟ ಶೈಲಿಯಿಂದ ಓದಿಸಿಕೊಂಡು ಹೋಗುವ ಗುಣವನ್ನು ಹೊಂದಿದೆ.ಕೆನಡಾ ದೇಶದ ಕುರಿತಾಗಿ ಬಂದಂತಹ ಒಂದು ಅಪರೂಪದ ಮತ್ತು ಮೊದಲ ಎನ್ನಬಹುದಾದ ಪ್ರವಾಸ ಕಥನ " ಎಂದರು. ಕೃತಿ ಅವಲೋಕನ ಮಾಡಿ ಮಾತನಾಡಿದ ಹಿರಿಯ ಲೇಖಕ ಶ್ರೀನಿವಾಸ ವಾಡಪ್ಪಿ ಅವರು "ಶೆಲ್ಲಿಕೇರಿಯವರ ಈ ಕೃತಿಯು ಕೆನಡಾ ದೇಶವನ್ನು ಸಮಗ್ರವಾಗಿ ಚಿತ್ರಿಸಿದ ಕೃತಿಯಾಗಿ ಓದುಗರನ್ನು ಸೆಳೆಯುತ್ತದೆ. ಅಲ್ಲದೆ ಅವರು ತುಂಬಾ ಶ್ರದ್ದೆ ಮತ್ತು ಶ್ರಮ ವಹಿಸಿ ಬರೆದಂಥ ಈ ಕೃತಿಯು ತನ್ನ ನಿರೂಪಣೆ ಮತ್ತು ಅಪರೂಪದ ಘಟನೆಗಳ ಉಲ್ಲೇಖಗಳಿಂದ ನಿರಾಯಾಸವಾಗಿ ಓದಿಸಿಕೊಂಡು ಹೋಗುತ್ತದೆ" ಎಂದರು. ಲೇಖಕ ಎಚ್. ಪಿ. ಶೆಲ್ಲಿಕೇರಿಯವರು ಸಂದರ್ಭೋಚಿತವಾಗಿ ಮಾತನಾಡಿದರು.

ಗಾಯತ್ರಿ ಮತ್ತು ತಂಡದವರು ಪ್ರಾರ್ಥನೆ ಮಾಡಿದರು. ಕತೆಗಾರ ಮಲ್ಲಿಕಾರ್ಜುನ ಶೆಲ್ಲಿಕೇರಿ ಪ್ರಾಸ್ತಾವಿಕ ಮತ್ತು ಸ್ವಾಗತ ನುಡಿಗಳನ್ನಾಡಿದರು. ಮನೋಹರ ಬ್ಯಾಹಟ್ಟಿ ಸಂದೇಶ ವಾಚಿಸಿದರು. ಬಾಗಲಕೋಟ ಜಿಲ್ಲಾ ಕ. ಸಾ. ಪ. ದ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ವಂದನಾರ್ಪಣೆ ಮಾಡಿದರು. ಉಳ್ಳಿಗೇರಿಯವರು ಕಾರ್ಯಕ್ರಮ ನಿರೂಪಿಸಿದರು. ವೇದಿಕೆ ಮೇಲೆ ಪ್ರಕಾಶಕಿ ಜಯಶ್ರೀ ಶೆಲ್ಲಿಕೇರಿ, ಶಂಕರ ಕುಂಬಿ ಉಪಸ್ಥಿತರಿದ್ದರು.

# ಪ್ರತಿ ಮಗುವಿನ ಘನತೆ ಎತ್ತಿ ಹಿಡಿಯುವುದು ನಮ್ಮೆಲ್ಲರ ಕರ್ತವ್ಯ

**ಕೊಪ್ಪಳ:** ಪ್ರತಿ ಮಗುವಿನ ಹಕ್ಕುಗಳನ್ನು ಅನುಭವಿಸಲು ಮತ್ತು ಆನಂದಿಸಲು ಅನುಕೂಲಕರವಾಗುವ ಪರಿಸರವನ್ನು ನಿರ್ಮಿಸಿ, ಮಗುವಿನ ಘನತೆಯನ್ನು ಎತ್ತಿ ಹಿಡಿಯುವುದು ನಮ್ಮೆಲ್ಲರ ಕರ್ತವ್ಯ ಎಂದು ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಹೇಳಿದರು.

ಶನಿವಾರದಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಯುನಿಸೆಫ್–ಜಿಲ್ಲಾ ಮಕ್ಕಳ ರಕ್ಷಣಾ ಯೋಜನೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕೊಪ್ಪಳರವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಎಲ್ಲಾ ವಸತಿ ನಿಲಯಗಳ ನಿಲಯ ಪಾಲಕರಿಗೆ, ಪ್ಯಾರಾ ಮೆಡಿಕಲ್ ಕಾಲೇಜುಗಳ ಪ್ರಾಂಶುಪಾಲರು ಮತ್ತು ಮುಖ್ಯಸ್ಥರುಗಳಿಗೆ ಹಮ್ಮಿಕೊಳ್ಳಲಾಗಿದ್ದ ಮಕ್ಕಳ ಹಕ್ಕುಗಳು, ಮಕ್ಕಳಿಗೆ ಸಂಬಂಧಿಸಿದ ಕಾನೂನುಗಳು ಮತ್ತು ಮಕ್ಕಳ ರಕ್ಷಣಾ ನೀತಿಗಳ ಕುರಿತ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿನ ಪ್ರತಿ ಮಗುವು ಸುರಕ್ಷಿತ, ರಕ್ಷಣಾತ್ಮಕ ಮತ್ತು ಸಶಕ್ತ ಪರಿಸರದಲ್ಲಿ ಬೆಳೆಯುವುದರೊಂದಿಗೆ, ಮಗುವಿನ ಸರ್ವಾಂಗೀಣ ಅಭಿವೃದ್ಧಿಗೆ ಹಾಗೂ ಮಗುವು ತನ್ನ ಸಾಮರ್ಥ್ಯವನ್ನು ತಲುಪಲು ಅವಕಾಶಗಳನ್ನು ಒದಗಿಸಬೇಕು. ಮಕ್ಕಳು ತಮ್ಮ ಹಕ್ಕುಗಳನ್ನು ಅನುಭವಿಸಲು ಮತ್ತು ಆನಂದಿಸಲು ಅನುಕೂಲಕರವಾದ ಪರಿಸರವನ್ನು ನಿರ್ಮಿಸಲು ರಾಜ್ಯದಲ್ಲಿನ ಎಲ್ಲಾ ಭಾಗೀದಾರರು ಅಂದರೆ ಪೋಷಕರು, ಆರೈಕೆ ಸೇವೆಗಳನ್ನು ನೀಡುವವರು



ಮತ್ತು ಸಮುದಾಯ ಒಟ್ಟುಗೂಡಿ ಕೆಲಸ ಮಾಡುವುದರೊಂದಿಗೆ ಮಕ್ಕಳ ಕುರಿತಾದ ತಾರತಮ್ಯಗಳನ್ನು ನಿವಾರಿಸುವ ಹಾಗೂ ಮಕ್ಕಳ ಭಾಗವಹಿಸುವಿಕೆ, ಸಂಭಾಷಣೆ ಮತ್ತು ಅಭಿಪ್ರಾಯಗಳನ್ನು ಗೌರವಿಸುವುದರೊಂದಿಗೆ ಮಗುವಿನ ಘನತೆಯನ್ನು ಎತ್ತಿ ಹಿಡಿಯುವುದು ನಮ್ಮೆಲ್ಲರ ಕರ್ತವ್ಯ ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ–2016 (ಕೆಎಸ್‌ಸಿಪಿಪಿ) ಯು ಮಕ್ಕಳ ಅಧಿಪತ್ಯದ ತತ್ವವನ್ನಾಧರಿಸಿದ ಮಕ್ಕಳ ರಕ್ಷಣೆಯ ಒಂದು ಸಮಗ್ರ ಭಾಗವಾಗಿದೆ. ಆದ್ದರಿಂದ ನಿಮ್ಮ ವಸತಿ ನಿಲಯ/ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಮಕ್ಕಳ ರಕ್ಷಣಾ ನೀತಿ–2016 ಪರಿಷ್ಕರಣೆ–2023ನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕು ಮತ್ತು ಮಕ್ಕಳಿಗೆ ಸಂಬಂಧಿಸಿದ ಕಾನೂನುಗಳ ಬಗ್ಗೆ ಜಾಗೃತಿಯನ್ನು ಮೂಡಿಸುವ ಮೂಲಕ ಮಕ್ಕಳ ಮೇಲಾಗುವ ವಿವಿಧ ರೀತಿಯ ಅಪರಾಧಗಳನ್ನು ತಡೆಗಟ್ಟಿ ಮಕ್ಕಳಿಗೆ ಸುರಕ್ಷಿತ ವಾತಾವರಣವನ್ನು ನಿರ್ಮಿಸಿ ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ ರಾಮತ್ನಾಳ ಅವರು ಮಾತನಾಡಿ, ಜಿಲ್ಲೆಯ ವಸತಿ ಶಾಲೆಗಳಲ್ಲಿ ಮಕ್ಕಳಿಗೆ ಲೈಂಗಿಕ ಕಿರುಕುಳ, ದೌರ್ಜನ್ಯ ಎಸಗಿದ ಪ್ರಕರಣಗಳು ಮತ್ತು ವಸತಿ ನಿಲಯದಿಂದ ಮಕ್ಕಳು ಈಜಾಡಲೆಂದು ತೆರಳಿದ ಸಂದರ್ಭದಲ್ಲಿ ಮೃತಪಟ್ಟ ಪ್ರಕರಣಗಳು ವರದಿಯಾಗಿವೆ. ಭಾರತ ಸಂವಿಧಾನವು ರಾಷ್ಟ್ರದಲ್ಲಿನ ಎಲ್ಲಾ ಮಕ್ಕಳ ಪಾಲನೆ ಮತ್ತು ಪೋಷಣೆಯ ಜವಾಬ್ದಾರಿ ಸರಕಾರದ್ದೆಂದು ತಿಳಿಸುತ್ತದೆ. ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಸರಕಾರವು ಹಿಂದುಳಿದ ವರ್ಗಗಳ ಉನ್ನತಿಗಾಗಿ ವಸತಿ ನಿಲಯ, ವಸತಿ ಶಾಲೆಗಳನ್ನು ಆರಂಭಿಸಿದ್ದು, ಇಂತಹ ಸಂಸ್ಥೆಗಳಲ್ಲಿ ವಾಸಿಸುವ ಮಕ್ಕಳ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದೆ ಅವರು ಹೇಳಿದರು. ರಾಜ್ಯದ ಉಚ್ಚ ನ್ಯಾಯಾಲಯವು ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ನೀತಿ–2016 ಪರಿಷ್ಕರಣೆ–2023 ರ ಅಳವಡಿಕೆ ಕಡ್ಡಾಯವೆಂದು ನಿರ್ದೇಶಿಸಿದೆ. ಈ ಕುರಿತು ಜಿಲ್ಲೆಯಲ್ಲಿ ಈಗಾಗಲೇ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಿಗೆ, ವಸತಿ ನಿಲಯಗಳ ಪ್ರಾಚಾರ್ಯರಿಗೆ ತರಬೇತಿಯನ್ನು ನೀಡಿದೆ. ಜಿಲ್ಲೆಯಲ್ಲಿ ಎಲ್ಲಾ ಭಾಗೀದಾರರಿಗೆ ತರಬೇತಿ ಪೂರ್ಣಗೊಂಡಿರುತ್ತದೆ. ಮಕ್ಕಳಿಗೆ ಮಕ್ಕಳ ಹಕ್ಕುಗಳ ಮತ್ತು ಮಕ್ಕಳ ಪರವಾದ ಕಾನೂನುಗಳ ಕುರಿತು ವ್ಯಾಪಕ ಜಾಗೃತಿಯನ್ನು ಮೂಡಿಸಿ ಎಂದು ಆಯೋಗದ ಸದಸ್ಯರು ತಿಳಿಸಿದರು. ಯುನಿಸೆಫ್–ಮಕ್ಕಳ ರಕ್ಷಣಾಯೋಜನೆ ಕೊಪ್ಪಳದ ವಿಭಾಗೀಯ ಸಂಯೋಜಕರಾದ ಡಾ. ಕೆ.ರಾಘವೇಂದ್ರ ಭಟ್ ಅವರು ಮಾತನಾಡಿ, ಮಕ್ಕಳ ಹಕ್ಕುಗಳು ಮತ್ತು ಮಕ್ಕಳ ರಕ್ಷಣಾ ನೀತಿ –2016 ಪರಿಷ್ಕರಣೆ–2023ರ ಕುರಿತು ಹಾಗೂ ಯುನಿಸೆಫ್– ಮಕ್ಕಳ ರಕ್ಷಣಾ ಯೋಜನೆ ಕೊಪ್ಪಳದ ವ್ಯವಸ್ಥಾಪಕರಾದ ಹರೀಶ್ ಜೋಗಿ ಅವರು ಮಾತನಾಡಿ, ಬಾಲ್ಯವಿವಾಹ ನಿಷೇಧ ಕಾಯ್ದೆ–2006 ಕರ್ನಾಟಕ ತಿದ್ದುಪಡಿ–2023ರ ಕುರಿತು ಮತ್ತು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಾಹಾಂತಸ್ವಾಮಿ ಪೂಜಾರ ಅವರು ಮಿಷನ್ ವಾತ್ಸಲ್ಯ ಕುರಿತು ತರಬೇತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕರಾದ ಪ್ರಕಾಶ ವಡ್ಡರ್, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಪ್ರಕಾಶ ಕಡಗದ, ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆಯ ಉಪನಿರ್ದೇಶಕರಾದ ಜಗದೀಶ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳಾದ ಅಜ್ಮೀರ ಅಲಿ, ಸೇರಿದಂತೆ ಜಿಲ್ಲೆಯ ಎಲ್ಲಾ ಇಲಾಖೆಗಳ ವಸತಿ ನಿಲಯಗಳ ನಿಲಯ ಪಾಲಕರು, ಪ್ಯಾರಾ ಮೆಡಿಕಲ್ ಕಾಲೇಜುಗಳ ಮುಖ್ಯಸ್ಥರು, ಪ್ರಾಂಶುಪಾಲರು ಮತ್ತು ಮಕ್ಕಳ ಪಾಲನಾ ಸಂಸ್ಥೆಗಳ ಅಧೀಕ್ಷಕರು ಭಾಗವಹಿಸಿದ್ದರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಶಿವಲೀಲಾ ವನ್ನೂರು ನಿರೂಪಿಸಿದರು, ರವಿಕುಮಾರ ಪವಾರ ಸ್ವಾಗತಿಸಿದರು, ಪ್ರತಿಭಾ ಪ್ರಾರ್ಥಿಸಿದರು, ಪ್ರಶಾಂತರೆಡ್ಡಿ ವಂದಿಸಿದರು.

## ಮಹಿಳೆ ಕಾಣೆ

**ಕೊಪ್ಪಳ:** ಗದಗ ಜಿಲ್ಲೆಯ ಕದಡಿ ಗ್ರಾಮದ ರಜಿಯಾಬಿ ಗಂಡ ಸೂಲೀಮಾನ ಎಂಬ 21 ವರ್ಷದ ಮಹಿಳೆಯು ಜುಲೈ 30 ರಂದು ಬೆಳಗ್ಗೆ 10 ಗಂಟೆ ಸುಮಾರಿಗೆ ಯಲಬುರ್ಗಾ ತಾಲ್ಲೂಕಿನ ಮುಧೋಳ ಗ್ರಾಮದಲ್ಲಿರುವ ತನ್ನ ತಂದೆಯ ಮನೆಯಿಂದ ಗಂಡನ ಊರಾದ ಕದಡಿ ಗ್ರಾಮಕ್ಕೆ ಹೋಗುವುದಾಗಿ ಹೇಳಿ ಹೋದವರು ಎಲ್ಲಿಗೂ ಹೋಗದೆ ನಾಪತ್ತೆಯಾಗಿರುತ್ತಾರೆ. ಈ ಬಗ್ಗೆ ಯಲಬುರ್ಗಾ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 134/2025 ಕಲಂ: ಮಹಿಳೆ ಕಾಣೆ ನೇದ್ದರ ಅಡಿಯಲ್ಲಿ ಪ್ರಕರಣದ ದಾಖಲಾಗಿದೆ.

ಕಾಣೆಯಾದ ಮಹಿಳೆಯ ಚಹರೆ: ಮಹಿಳೆಯು 4.6 ಅಡಿ ಎತ್ತರವಿದ್ದು, ಸದೃಢ ಮೈಕಟ್ಟು, ಸಾದಗೆಂಪು ಮೈಬಣ್ಣ ಹಾಗೂ ದುಂಡು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಹಳದಿ ಬಣ್ಣದ ಸೀರೆ ಹಾಗೂ ಬಿಳಿ ಬಣ್ಣದ ಜಂಪರ್ ಧರಿಸಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :181, Postal Reg No. PMG/KA/NK/BM/135/25-27 / POST AT Vantamury Colony Post Office